ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 153 RNI Number : KNKAN/25/A2770 11-06-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :153 ರಾಯಚೂರು 11-06-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ದಾಖಲೆ ಬರೆದ ನರೇಂದ್ರ ಮೋದಿ: ಭಾರತದ ಅತ್ಯಂತ ದೀರ್ಘಾವಧಿಯ ಚುನಾಯಿತ ಪ್ರಧಾನಿ ಎಂಬ ಹೆಗ್ಗಳಿಕೆ

ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಬುಧವಾರ ಭಾರತದ ಅತ್ಯಂತ ದೀರ್ಘಾವಧಿಯ ಪ್ರಧಾನಿ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಕೇಂದ್ರ ಸರ್ಕಾರದ ಚುಕ್ಕಾಣಿ ಹಿಡಿದು ಅವರು ಈಗ 12 ವರ್ಷಗಳನ್ನು ಪೂರೈಸಿದ್ದಾರೆ.

ಸತತ 4,399 ದಿನಗಳ ಅಧಿಕಾರಾವಧಿಯ ಪ್ರಮುಖ ಮೈಲಿಗಲ್ಲನ್ನು ದಾಟಿರುವ ಪ್ರಧಾನಿ ಮೋದಿ, ಪ್ರಜಾಪ್ರಭುತ್ವದ ಅಡಿ ಸಾರ್ವತ್ರಿಕ ಚುನಾವಣೆಗಳ ನಂತರ ಭಾರತದ ಮೊದಲ ಪ್ರಧಾನಿ ಜವಾಹರಲಾಲ್ ನೆಹರು ಅವರು ನಡೆಸಿದ ನಿರಂತರ 4,398 ದಿನಗಳ ದಾಖಲೆಯನ್ನು ಈಗ ಪುಡಿಗಟ್ಟಿದ್ದಾರೆ.

1952 ರಿಂದ ನೆಹರು ಅವರ ಅಧಿಕಾರಾವಧಿಯನ್ನು ಈ ಹೋಲಿಕೆಗೆ ಪರಿಗಣಿಸಲಾಗಿದೆ. ಏಕೆಂದರೆ ಅವರು ದೇಶದ ಮೊದಲ ಸಾರ್ವತ್ರಿಕ ಚುನಾವಣೆಗಳು ನಡೆಯುವ ಪೂರ್ವದಲ್ಲಿ ಅಂದರೆ 1947 ಮತ್ತು 1952 ರ ನಡುವೆ ಮಧ್ಯಂತರ ಸರ್ಕಾರದ ನೇತೃತ್ವ ವಹಿಸಿದ್ದರು. ಹೀಗಾಗಿ ಚುನಾಯಿತ ಸರ್ಕಾರಗಳ ಅವಧಿಯನ್ನು ಮಾತ್ರ ಈ ಲೆಕ್ಕಾಚಾರದಲ್ಲಿ ಗಣನೆಗೆ ತೆಗೆದುಕೊಳ್ಳಲಾಗಿದೆ.

ಮಾಜಿ ಪ್ರಧಾನಿ ಇಂದಿರಾ ಗಾಂಧಿ 14 ವರ್ಷಗಳಿಗೂ ಹೆಚ್ಚು ಕಾಲ ಅಧಿಕಾರದಲ್ಲಿದ್ದರೂ, ಅವರ ಅಧಿಕಾರಾವಧಿ ನಿರಂತರವಾಗಿರಲಿಲ್ಲ, ಇದು ದೇಶದ ಇತಿಹಾಸದಲ್ಲಿ ಮೋದಿ ಅವರನ್ನು ನಿರಂತರವಾಗಿ ಅತಿ ಹೆಚ್ಚು ಕಾಲ ಚುನಾಯಿತ ಪ್ರಧಾನಿಯನ್ನಾಗಿ ಮಾಡಿದೆ.

2014 ರಲ್ಲಿ ಅವರು ಪ್ರಮಾಣವಚನ ಸ್ವೀಕರಿಸಿದ ಬಳಿಕ ಅಲ್ಲಿಂದ ಇಲ್ಲಿಯವರೆಗೂ ನಿರಂತರ ಸೇವೆಯಲ್ಲಿದ್ದಾರೆ. 2019ರಲ್ಲಿ ಮರು ಆಯ್ಕೆ ಆಗಿದ್ದ ಮೋದಿ ಎರಡನೇ ಬಾರಿಗೆ ಪ್ರಧಾನಿಯಾಗಿ ಪದಗ್ರಹಣ ಮಾಡಿದ್ದರು. ಆ ಬಳಿಕ 2024 ರಲ್ಲಿ ಐತಿಹಾಸಿಕ ಮೂರನೇ ಅವಧಿಗೆ ಅಧಿಕಾರ ವಹಿಸಿಕೊಂಡು, ಅಧಿಕಾರದಲ್ಲಿ ಮುಂದುವರೆದಿದ್ದಾರೆ.

ಇವು ಮೋದಿ ಸರ್ಕಾರದ ಮೈಲಿಗಲ್ಲುಗಳು: ಪ್ರಧಾನಿ ಮೋದಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಹೊಸ ಸಂಸತ್ ಕಟ್ಟಡವಾಗಿರುವ ಸೆಂಟ್ರಲ್ ವಿಸ್ಟಾ ಪುನರಾಭಿವೃದ್ಧಿ, ಕರ್ತವ್ಯ ಪಥ, ವಂದೇ ಭಾರತ್ ರೈಲುಗಳು, ಏಕತಾ ಪ್ರತಿಮೆ, ಐಎನ್‌ಎಸ್ ವಿಕ್ರಾಂತ್, ಕಾಶ್ಮೀರ ರೈಲು ಸಂಪರ್ಕ, ನೋಯ್ಡಾ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ, ನಮೋ ಭಾರತ್ ಆರ್‌ಆರ್‌ಟಿಎಸ್ ಮತ್ತು ಗಂಗಾ ಎಕ್ಸ್ ಪ್ರೆಸ್‌ವೇ ಸೇರಿದಂತೆ ಹಲವಾರು ಉನ್ನತ ಮಟ್ಟದ ಮೂಲಸೌಕರ್ಯ ಮತ್ತು ರಾಷ್ಟ್ರ ನಿರ್ಮಾಣ ಯೋಜನೆಗಳಿಂದ ಗುರುತಿಸಲ್ಪಟ್ಟಿದೆ.



ಇಂದು ಮಹತ್ವದ ಎನ್‌ಡಿಎ ಸಭೆ: ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ 12 ವರ್ಷಗಳನ್ನು ಪೂರೈಸಿದ ಶುಭವನ್ನು ಆಚರಿಸಲು ಮತ್ತು ಪ್ರಧಾನಿ ನರೇಂದ್ರ ಮೋದಿ ಭಾರತದ ಅತ್ಯಂತ ದೀರ್ಘ ಕಾಲ ಚುನಾಯಿತ ಪ್ರಧಾನಿ ಎಂಬುದನ್ನು ಗುರುತಿಸಲು ಎನ್‌ಡಿಎ ಇಂದು ರಾಷ್ಟ್ರ ರಾಜಧಾನಿಯಲ್ಲಿ ನಿರ್ಣಾಯಕ ಸಭೆ ನಡೆಸಲಿದೆ.

ಭಾರತ್ ಮಂಟಪದಲ್ಲಿ ನಡೆಯಲಿರುವ ಈ ಸಭೆಯಲ್ಲಿ ಪ್ರಧಾನಿ ಮೋದಿ, ಭಾರತೀಯ ಜನತಾ ಪಕ್ಷದ ಉನ್ನತ ನಾಯಕರು, ಎನ್‌ಡಿಎ ಆಡಳಿತವಿರುವ 22 ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಹಾಗೂ ಮೈತ್ರಿಕೂಟದ ಘಟಕ ಪಕ್ಷಗಳ ನಾಯಕರು ಭಾಗವಹಿಸುವ ನಿರೀಕ್ಷೆಯಿದೆ.

ನೆಹರೂ ದಾಖಲೆ ಮೀರಿದ್ದಕ್ಕೆ ಇಂದು ಪ್ರಧಾನಿಗೆ ಅಭಿನಂದನೆ ನಿರ್ಣಯ ಸಾಧ್ಯತೆ: ನೆಹರೂ ಅವರ ದಾಖಲೆಯನ್ನು ಮೀರಿದ ಐತಿಹಾಸಿಕ ಮೈಲಿಗಲ್ಲು ಸಾಧಿಸಿದ್ದಕ್ಕಾಗಿ ಪ್ರಧಾನಿ ಮೋದಿಯವರನ್ನು ಅಭಿನಂದಿಸುವ ನಿರ್ಣಯವನ್ನು ಎನ್‌ಡಿಎ ಅಂಗೀಕರಿಸುವ ಸಾಧ್ಯತೆಯಿದೆ. ರಾಜನಾಥ್ ಸಿಂಗ್, ಅಮಿತ್ ಶಾ, ಬಿಜೆಪಿ ಅಧ್ಯಕ್ಷ ಜೆ ಪಿ ನಡ್ಡಾ ಮತ್ತು ಶಿವರಾಜ್ ಸಿಂಗ್ ಚೌಹಾಣ್ ಸೇರಿದಂತೆ ಹಿರಿಯ ಕೇಂದ್ರ ಸಚಿವರು ಇತರ ಪ್ರಮುಖ ಎನ್‌ಡಿಎ ನಾಯಕರೊಂದಿಗೆ ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಎನ್‌ಡಿಎ ಸರ್ಕಾರದ 12 ನೇ ವರ್ಷದ ಆಡಳಿತವನ್ನು ಸ್ಮರಿಸಲು ಈ ಸಭೆಯನ್ನು ಆಯೋಜಿಸಲಾಗುತ್ತಿದ್ದು, ಮೈತ್ರಿಕೂಟದ ಸಾಧನೆಗಳು, ಭವಿಷ್ಯದ ನೀತಿ ಆದ್ಯತೆಗಳು ಮತ್ತು ರಾಜಕೀಯ ಮಾರ್ಗಸೂಚಿಯ ಮೇಲೆ ಕೇಂದ್ರೀಕರಿಸುವ ನಿರೀಕ್ಷೆಯಿದೆ. ಪ್ರಮುಖ ಚರ್ಚೆಗಳು ಆಡಳಿತ ಉಪಕ್ರಮಗಳು, ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಮುಂಬರುವ ಚುನಾವಣಾ ಸವಾಲುಗಳನ್ನು ಎದುರಿಸುವ ಬಗೆಗಳ ಬಗ್ಗೆ ಈ ಸಭೆಯಲ್ಲಿ ಚರ್ಚೆಯಾಗುವ ಸಾಧ್ಯತೆಗಳಿವೆ.

ಕ.ಕ ಭಾಗದ ಅರೋಗ್ಯ, ಶಿಕ್ಷಣ ಕ್ಷೇತ್ರಕ್ಕೆ ಸರಕಾರ ಹೆಚ್ಚಿನ ಒತ್ತು

ಕಾಂಗ್ರೆಸ್ ಸರಕಾರ 3 ವರ್ಷ ಅವಧಿಯಲ್ಲಿ ನನ್ನ ಸಾಧನೆ ತೃಪ್ತಿ, ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ- ಬೋಸರಾಜು

ರಾಯಚೂರು, ಜೂ.10-

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಕಾಂಗ್ರೆಸ್ ಸರಕಾರ ಮೂರು ವರ್ಷ ಯಶಸ್ವಿಯಾಗಿ ಪೂರೈಸಿದ್ದು, ಅಧಿಕಾರ ಅವಧಿಯಲ್ಲಿ ನನ್ನ ಸಾಧನೆ ತೃಪ್ತಿ ತಂದಿದ್ದು, ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಲಾಗಿದೆ ಎಂದು ಮಾಜಿ ಸಚಿವ ಎನ್ ಎಸ್ ಬೋಸರಾಜು ಅವರು ಹೇಳಿದರು.



ಅವರಿಂದು ತಮ್ಮ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಸರ್ಕಾರ ಅವಧಿಯಲ್ಲಿ ನನಗೆ ವಹಿಸಿದ ಜವಾಬ್ದಾರಿಯನ್ನು ಅತ್ಯಂತ ಪ್ರಾಮಾಣಿಕವಾಗಿ ನಿಭಾಯಿಸಿದ್ದೇನೆ. ಅಂತರ್ಜಲ ಮಟ್ಟ ಹೆಚ್ಚುಸುವಲ್ಲಿ ನಮ್ಮ ಸರಕಾರ ಬದ್ದವಾಗಿದೆ.

ಸಿದ್ದರಾಮಯ್ಯ ಮತ್ತು ಡಿಕೆ ಶಿವಕುಮಾರ ಅವರ ನೇತೃತ್ವದಲ್ಲಿ ರಾಜ್ಯ ಕಾಂಗ್ರೆಸ್ ಸರಕಾರ ಯಶಸ್ವಿಯಾಗಿ ಮೂರು ವರ್ಷಗಳನ್ನು ಪೂರೈಸಿದೆ. ದೇಶದ ಇತಿಹಾಸ ಚುನಾವಣೆ ಪೂರ್ವ ನೀಡಿದ ಭರವಸೆಯಂತೆ ಸರಕಾರ ಆಡಳಿತ ಬಂದ ತಕ್ಷಣವೇ ಮೊದಲ ಸಚಿವ ಸಂಪುಟದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಅನುಮೋದನೆ ನೀಡಲಾಗಿತ್ತು. ಮೂರು ವರ್ಷದ ಅವಧಿಯಲ್ಲಿ ನುಡಿದಂತೆ ಐದು ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುವುದರ ಮೂಲಕ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸಹಕಾರಿಯಾಗಿದೆ.ಈ ಯೋಜನೆಗಳು ದೇಶದಲ್ಲಿ ಮಾದರಿಯಾಗಿದೆ ಎಂದರು.ಗ್ಯಾರಂಟಿ ಯೋಜನಗಳ ಬಗ್ಗೆ ಬಿಜೆಪಿ ನಾಯಕರು ಅದರಲ್ಲೂ ಪ್ರಧಾನಿ ಮೋದಿ ಅವರೇ ಟೀಕಿಸಿದರು. ಈ ಯೋಜನೆಗಳಿಂದ ಖಜಾನೆ ಖಾಲಿಯಾಗುತ್ತಿದೆ. ರಾಜ್ಯ ದಿವಾಳಿಯಾಗುತ್ತದೆ ಎಂದು ಲೇವಡಿ ಮಾಡಿದರು. ಆದರೆ ರಾಜ್ಯ ಕಾಂಗ್ರೆಸ್ ಸರ್ಕಾರ ಮೂರು ವರ್ಷಗಳಲ್ಲಿ ಯಶಸ್ವಿಯಾಗಿ ಗ್ಯಾರಂಟಿ ಯೋಜನ 'ಗಳನ್ನು ಜಾರಿಗೆ

ಈ ಮೂರು ವರ್ಷದ ಅವಧಿಯಲ್ಲಿ ಸರ್ಕಾರದ ಐದು ಗ್ಯಾರಂಟಿಗಳ ಅನುಷ್ಠಾನ ಮತ್ತು ಜನಪರ ಆಡಳಿತದಿಂದ ಜನರಿಗೆ ತೃಪ್ತಿಯಾಗಿದೆ ಎಂದರು.ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭ್ರಷ್ಟಾಚಾರಕ್ಕೆ ಅವಕಾಶ ನೀಡದೆ, ಪಾರದರ್ಶಕ ಆಡಳಿತದ

3ನೇ ಪುಟ.....

ಅಂಬೇಡ್ಕರ್ ನೂತನ ಕಂಚಿನ ಪುತ್ತಳಿ, ಸಂವಿಧಾನ ಪೀಠಿಕೆ ಕಾಮಗಾರಿ ಶೀಘ್ರದಲ್ಲಿ ಪ್ರಾರಂಭಕ್ಕೆ ಒತ್ತಾಯ

ರಾಯಚೂರು, ಜೂ.10-

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ ಅವರ ನೂತನ ಕಂಚಿನ ಪುತ್ತಳಿ ಹಾಗೂ ಸಂವಿಧಾನ ಪೀಠಿಕೆ ನಿರ್ಮಾಣಗೊಳಿಸುವಲ್ಲಿ ವಿಳಂಬವಾಗಿದ್ದು, ಶೀಘ್ರದಲ್ಲಿ ಕಾಮಗಾರಿ ಪ್ರಾರಂಭಿಸಿ, ಪೂರ್ಣಗೊಳಿಸಬೇಕು ಎಂದು ಛಲವಾದಿ ಮಹಾಸಭಾ ಜಿಲ್ಲಾ ಸಮಿತಿ ಮುಖಂಡರು ಇಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದೆ.ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ ರವರ ನೂತನ ಪುತ್ತಳಿ ಹಾಗೂ ಸಂವಿಧಾನ ಪೀಠಿಕೆ ನಿರ್ಮಾಣಕ್ಕೆ ಈ ಹಿಂದಿನ ಜಿಲ್ಲಾಧಿಕಾರಿ ನಿತೀಶ ಕುಮಾರ ಹಾಗೂ ಮಹಾನಗರ ಪಾಲಿಕೆ ಆಯುಕ್ತರಾದ ಜುಬಿನ್ ಮಹಾಪಾತ್ರ ಇವರ ನೇತೃತ್ವದಲ್ಲಿ ಜೂ.6



2025 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಂಘ-ಸಂಸ್ಥೆಗಳ ಗಣ್ಯರ ಸಮ್ಮುಖದಲ್ಲಿ ವಿಶೇಶ ಸಭೆ ಮಹತ್ವದ ಯೋಜನೆಯನ್ನು ಕಾರ್ಯರೂಪಕ್ಕೆ ತರಲು ಜಿಲ್ಲಾ ಆಡಳಿತ ಅನುದಾನದಲ್ಲಿ ವೆಚ್ಚ ರೂ. 2.5 ಕೋಟಿ ಮತ್ತು ನಗರಾಭಿವೃದ್ಧಿ ಪ್ರಾಧಿಕಾರ ವತಿಯಿಂದ ಅನುದಾನ ರೂ.50, ಲಕ್ಷ ಒಟ್ಟು ರೂ.3.ಕೋಟಿ ವೆಚ್ಚದಲ್ಲಿ ನೂತನ ಪುತ್ತಳಿ ಹಾಗೂ ಸಂವಿಧಾನ ಪೀಠಿಕೆ ಉದ್ಯಾನವನ ಹಾಗೂ ನೂತನ ವೃತ್ತ ಅಭಿವೃದ್ಧಿಪಡಿಸಲು ಆ ಸಭೆಯಲ್ಲಿ ನಿರ್ಣಯ ಕೈಗೊಳ್ಳಲಾಗಿತ್ತು.ಆದರೆ, ನಿರ್ಣಯಗೊಂಡು ಒಂದು ವರ್ಷ ಕಳೆದರೂ ಇದುವರೆಗೂ ಯಾವುದೇ ಪುತ್ತಳಿ ಕಾಮಗಾರಿ ಪ್ರಾರಂಬಿಸದೇ,ವಿಳಂಬ

3ನೇ ಪುಟ.....

ಜುಲೈ11 ರಂದು ರಾಷ್ಟ್ರಿಯ ಲೋಕ ಅದಾಲತ್- ನ್ಯಾ.ಸಿದ್ದರಾಮಪ್ಪ

ರಾಯಚೂರು, ಜೂ.10-ಜಿಲ್ಲಾ ನ್ಯಾಯಾಲಯ ಹಾಗೂ ಜಿಲ್ಲೆಯ ಎಲ್ಲಾ ತಾಲ್ಲೂಕು ನ್ಯಾಯಾಲಯಗಳಲ್ಲಿ ಜುಲೈ 11 ರಂದು ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ನ್ಯಾಯಾಧೀಶರಾದ ಸಿದ್ದರಾಮಪ್ಪ ಅವರು ಹೇಳಿದರು.



ಅವರಿಂದು ನಗರದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ನ್ಯಾಯಾಲಯಗಳಲ್ಲಿ ಬಾಕಿ ಇರುವ ಸಿವಿಲ್, ರಾಜಿಯಾಗಬಹುದಾದ ಕ್ರಿಮಿನಲ್ ಪ್ರಕರಣಗಳು, ಮೋಟಾರು ವಾಹನ ಕಾಯ್ದೆ ಸಂಬಂಧಿತ ಪ್ರಕರಣಗಳು, ಕುಟುಂಬ ನ್ಯಾಯಾಲಯದ ಪ್ರಕರಣಗಳು ಹಾಗೂ ಇತರೆ ವಿವಿಧ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಲು ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.

ಈ ವರ್ಷದ ಎರಡನೇ ರಾಷ್ಟ್ರೀಯ ಲೋಕ ಅದಾಲತ್ ಇದಾಗಿದ್ದು, ಸರ್ಕಾರದ ಸುತ್ತೋಲೆಯಂತೆ ಜೂನ್ 21ರಿಂದ ಜುಲೈ 10ರವರೆಗೆ ಪೂರ್ವ ಸಿದ್ಧತಾ ಕಾರ್ಯಗಳು ನಡೆದಿವೆ. ಜುಲೈ 11ರಂದು ನಡೆಯಲಿರುವ ಬೃಹತ್ ಲೋಕ ಅದಾಲತ್‌ನಲ್ಲಿ ನ್ಯಾಯಾಲಯಗಳಲ್ಲಿ ಬಾಕಿ ಇರುವ ಹಾಗೂ ವ್ಯಾಜ್ಯಪೂರ್ವ ಹಂತದಲ್ಲಿರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ವಿಶೇಷ ಅವಕಾಶ ಕಲ್ಪಿಸಲಾಗಿದೆ ಎಂದು ಹೇಳಿದರು.ವಕೀಲರು, ಕಕ್ಷಿದಾರರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಪ್ರಕರಣಗಳನ್ನು ಲೋಕ ಅದಾಲತ್ ಮೂಲಕ ಇತ್ಯರ್ಥಪಡಿಸಿಕೊಂಡು ಸಮಯ ಮತ್ತು ಹಣದ ಉಳಿತಾಯ ಮಾಡಿಕೊಳ್ಳಬೇಕು ಎಂದು ಅವರು ಮನವಿ ಮಾಡಿದರು.ಪ್ರಾದೇಶಿಕ ಸಾರಿಗೆ ಅಧಿಕಾರಿ ಈರಣ್ಣ ಮಾತನಾಡಿ,

ಜಿಲ್ಲೆಯ ಆರ್‌ಟಿಒ ಕಚೇರಿಯಲ್ಲಿ 2011ರಿಂದ 2022ರವರೆಗೆ ದಾಖಲಾಗಿರುವ ಸುಮಾರು 670 ಪ್ರಕರಣಗಳು ಬಾಕಿ ಇದ್ದು, ಪ್ರಕರಣಗಳ ಇತ್ಯಾರ್ಥಕ್ಕೆ 1991 ರಿಂದ ಎಂದು ಸೂಚಿಸಲಾಗಿದ್ದು ಆದರೆ ನಮ್ಮಲ್ಲಿ

3ನೇ ಪುಟ.....

ರೈತರಿಗೆ ಸಮರ್ಪಕ ಬೀಜ, ರಸಗೊಬ್ಬರ ವಿತರಣೆ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ದಿ.16 ಧರಣಿ ಸತ್ಯಾಗ್ರಹ



ರಾಯಚೂರು, ಜೂ.10-

ರೈತರಿಗೆ ಸಮರ್ಪಕ ಬೀಜ ಮತ್ತು ರಸಗೊಬ್ಬರ ಪೂರೈಕೆ, ಬಡ ಕುಟುಂಬಗಳಿಗೆ ಮನೆ ನಿವೇಶನ ಹಾಗೂ ಹಕ್ಕುಪತ್ರ ವಿತರಣೆ ಸೇರಿದಂತೆ ವಿವಿಧ ಜನಪರ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್‌ಎಸ್) ಜಿಲ್ಲಾ ಸಮಿತಿ ವತಿಯಿಂದ ದಿ.16ರಂದು ಜಿಲ್ಲಾ ಆಡಳಿತ ಭವನದ ಮುಂಭಾಗದಲ್ಲಿ ಬೃಹತ್ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಕಾರ್ಯದರ್ಶಿ ನರಸಣ್ಣ ನಾಯಕ ಅವರು ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಮುಂಗಾರು ಬಿತ್ತನೆ ಆರಂಭವಾಗಿರುವ ಹಿನ್ನೆಲೆಯಲ್ಲಿ ರೈತರಿಗೆ ಅಗತ್ಯ ಪ್ರಮಾಣದಲ್ಲಿ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳು ಎಂಆರ್‌ಪಿ ದರದಲ್ಲಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಕಳಪೆ ಬೀಜ ಹಾಗೂ ರಸಗೊಬ್ಬರ ಮಾರಾಟಗಾರರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.


ಇದಲ್ಲದೆ, ಜೋಳ ಖರೀದಿ ಬಾಕಿ ಹಣವನ್ನು ತಕ್ಷಣ ಬಿಡುಗಡೆ ಮಾಡುವುದು, ವಿದ್ಯುತ್ ಖಾಸಗೀಕರಣ ಪ್ರಸ್ತಾಪ ಕೈಬಿಡುವುದು, ವಿವಿಧ ಗ್ರಾಮಗಳ ಆಶ್ರಯ ಕಾಲೋ

3ನೇ ಪುಟ.....

ಪ್ರಧಾನಿ ಮೋದಿ ಸುಧೀರ್ಘ ಸೇವೆ ಹಿನ್ನಲೆ ಅಭಿಮಾನಿಯಿಂದ ಹರಕೆ

ರಾಯಚೂರು, ಜೂ.10-

ಪ್ರಧಾನಿ ನರೇಂದ್ರ ಮೋದಿ ಅವರು ಸುಧೀರ್ಘ ಆಡಳಿತ ನಡೆಸಿದ ಕೀರ್ತಿ ಹಿನ್ನಲೆಯಲ್ಲಿ ಬಿಜೆಪಿ ಮುಖಂಡರು ಪ್ರಧಾನಿ ನರೇಂದ್ರ ಮೋದಿ ಅಭಿ ಮಾನಿ ಬಂಗಿ ಮುನಿರೆಡ್ಡಿ ಅವರು ಅಭಿನಂದನೆಗಳು ಸಲ್ಲಿಸಿದ್ದಾರೆ.





ನರೇಂದ್ರ ಮೋದಿ ಅವರು ಸುಧೀರ್ಘ ಸಲ್ಲಿಸಿದ ಹಿನ್ನೆಲೆಯಲ್ಲಿ ಅಭಿಮಾನಿ

ಬಂಗಿ ಮುನಿರೆಡ್ಡಿ ಅವರು ಕೈಯಲ್ಲಿ ಮೋದಿ ಅವರ ಟ್ಯಾಟ್ ಹಾಕಿಸಿಕೊಂಡು 2028 ರಲ್ಲಿ ಮತ್ತೊಮ್ಮೆ ನರೇಂದ್ರ ಮೋದಿ ಪ್ರಧಾನಿಯಾಗಬೇಕು ಎಂದು ಬಾಳೆ

3ನೇ ಪುಟ.....

ರಾಯಚೂರು: ವಾರ್ಡ್ ನಂ.28ರ ಸಮಸ್ಯೆಗಳ ಪರಿಹಾರಕ್ಕೆ ಜಿಲ್ಲಾಧಿಕಾರಿಗೆ ವಿವಿಧ ಮುಸ್ಲಿಂ ಸಂಘಟನೆಗಳಿಂದ ಜಂಟಿ ಮನವಿ

ರಾಯಚೂರು,ಜೂ.10-

ನಗರದ ವಾರ್ಡ್ ನಂ. 28ರ ವ್ಯಾಪ್ತಿಯಲ್ಲಿರುವ ಮೂಲಭೂತ ಸೌಲಭ್ಯಗಳ ಕೊರತೆ, ರಸ್ತೆ, ಚರಂಡಿ, ಕುಡಿಯುವ ನೀರು ಹಾಗೂ ಸಾರ್ವಜನಿಕ ಸೌಕರ್ಯಗಳ ಸಮಸ್ಯೆಗಳ ಕುರಿತು ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ, ವಿವಿಧ ಮುಸ್ಲಿಂ ಸಮುದಾಯ ಸಂಘಟನೆ ಗಳು ಜಿಲ್ಲಾಧಿಕಾರಿಗೆ ಜಂಟಿ ಮನವಿ ಸಲ್ಲಿಸಿವೆ.



ಮೈನಾರಿಟೀಸ್ ಆಟೋ ಡ್ರೈವರ್ಸ್ ಮಲ್ಟಿಪರ್ಪಸ್ ಕೋ-ಆಪರೇಟಿವ್ ಸೊಸೈಟಿ ಲಿಮಿಟೆಡ್, ಮಸ್ಜಿದ್-ಎ-ಯಾಸೀನ್ ಅಹ್ಲೆ ಸುನ್ನತ್ ವಲ್ ಜಮಾತ್ ಸಮಿತಿ ಹಾಗೂ ಆಲ್ ಇಂಡಿಯಾ ಮಜ್ಲಿಸ್ -ಎ-ಇತ್ತೆಹಾದುಲ್ ಮುಸ್ಲಿಮೀನ್ () ಸಂಘಟನೆಗಳ ಪದಾಧಿಕಾರಿಗಳು ಹಾಗೂ ಮುಖಂಡರು ಈ ಮನವಿಗೆ ಬೆಂಬಲ ಸೂಚಿಸಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ್ದಾರೆ.

ಮನವಿಯಲ್ಲಿ, ವಾರ್ಡ್ ನಂ. 28ರ ನಿವಾಸಿಗಳು ಹಲವು ವರ್ಷಗ 'ಳಿಂದ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದು, ರಸ್ತೆ ಅಭಿವೃದ್ಧಿ, ಚರಂಡಿ ವ್ಯವಸ್ಥೆ, ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ ಸೇರಿದಂತೆ ಸಾರ್ವಜನಿಕರ ಅಗತ್ಯ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಲಾಗಿದೆ. ಅಲ್ಲದೆ, ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಶೀಘ್ರ ಪರಿಹಾರ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಆಗ್ರಹಿಸಲಾಗಿದೆ.

ಸಮುದಾಯದ ಹಿತದೃಷ್ಟಿಯಿಂದ ವಿವಿಧ ಸಂಘಟನೆಗಳು ಒಗ್ಗೂಡಿ ಈ ಜಂಟಿ ಮನವಿ ಸಲ್ಲಿಸಿರುವುದು ಗಮನಾರ್ಹವಾಗಿದ್ದು, ಜಿಲ್ಲಾಡಳಿತವು ಜನರ ಸಮಸ್ಯೆಗಳಿಗೆ ಸ್ಪಂದಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಮನವಿಯಲ್ಲಿ ಕೋರಲಾಗಿದೆ.

ಈ ಸಂದರ್ಭದಲ್ಲಿ ಸಂಘಟನೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಸ್ಥಳೀಯ ಮುಖಂಡರು ವಾರ್ಡ್ ನಿವಾಸಿಗಳು ಉಪಸ್ಥಿತರಿ ದ್ದರು.

ಕಳಪೆ ಸೂರ್ಯಕಾಂತಿ ಬೀಜ ಪೂರೈಕೆ: ರೈತರಿಗೆ ಪರಿಹಾರ ನೀಡಲು ಆಗ್ರಹ

ಸಹಾಯಕ ಆಯುಕ್ತರಿಗೆ ಕರ್ನಾಟಕ ರಾಜ್ಯ ರೈತ ಸಂಘ ಮನವಿ

ಲಿಂಗಸುಗೂರು,ಜೂ.10-

ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡಿರುವ ಸೂರ್ಯಕಾಂತಿ ಬೀಜಗಳು ಕಳಪೆಯಾಗಿದ್ದು, ಬಿತ್ತಿದ ಬಹುತೇಕ ಬೀಜಗಳು ಮೊಳಕೆಯೊಡೆಯದೇ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಳಪೆ ಬೀಜ ಪೂರೈಕೆ ಮಾಡಿದ ಕಂಪನಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ, ನಷ್ಟಕ್ಕೊಳಗಾದ ರೈತರಿಗೆ ಸೂಕ್ತ ಪರಿಹಾರ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘದ ಮುಖಂಡರು ಆಗ್ರಹಿಸಿದರು.



ಮಂಗಳವಾರ ಲಿಂಗಸುಗೂರಿನ ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ ಅವರಿಗೆ ಮನವಿ ಸಲ್ಲಿಸಿದ ರೈತ ಮುಖಂಡರು, ಕೇಂದ್ರ ಸರ್ಕಾರ ಸೂರ್ಯಕಾಂತಿ ಬೆಳೆಗೆ ಬೆಂಬಲ ಬೆಲೆಯನ್ನು ₹3,700 ರಿಂದ ₹8,343ಕ್ಕೆ ಹೆಚ್ಚಿಸಿರುವ ಹಿನ್ನೆಲೆಯಲ್ಲಿ ಲಿಂಗಸುಗೂರು ಹಾಗೂ ಮಸ್ಕಿ ತಾಲೂಕಿನ ಸಾವಿರಾರು ರೈತರು ಈ ಬಾರಿ ಸೂರ್ಯಕಾಂತಿ ಬೆಳೆಯತ್ತ ಹೆಚ್ಚಿನ ಆಸಕ್ತಿ ತೋರಿದ್ದಾರೆ ಎಂದು ತಿಳಿಸಿದರು.

ಒಂದು ಎಕರೆಗೆ ₹5,000 ರಿಂದ ₹6,000 ಮೌಲ್ಯದ ಬೀಜಗಳನ್ನು ಖರೀದಿಸಿ ಬಿತ್ತನೆ ಮಾಡಿದ್ದರೂ, ಬೀಜಗಳು ಗುಣಮಟ್ಟಹೀನವಾಗಿರುವುದರಿಂದ ಸರಿಯಾಗಿ ಮೊಳಕೆಯೊಡೆಯುತ್ತಿಲ್ಲ. ಇದರಿಂದ ರೈತರಿಗೆ ಭಾರೀ ಆರ್ಥಿಕ ನಷ್ಟ ಉಂಟಾಗಿದ್ದು, ಮತ್ತೆ ಬಿತ್ತನೆ ಮಾಡುವ ಪರಿಸ್ಥಿತಿ ಎದುರಾಗಿದೆ ಎಂದು ದೂರಿದರು.

ಕೃಷಿ ಇಲಾಖೆ ಅಧಿಕಾರಿಗಳಿಗೆ ತಕ್ಷಣ ಸೂಚನೆ ನೀಡಿ ರೈತರ ಜಮೀನುಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಕಳಪೆ ಬೀಜಗಳ ಬಗ್ಗೆ ವರದಿ ಸಿದ್ಧಪಡಿಸಿ ಸಂಬಂಧಿಸಿದ ಕಂಪನಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು. ಅಲ್ಲದೆ ನಷ್ಟ ಅನುಭವಿಸಿದ ರೈತರಿಗೆ ಪರಿಹಾರ ನೀಡುವಂತೆ ಸರ್ಕಾರಕ್ಕೆ ಶಿಫಾರಸು ಮಾಡಬೇಕು ಎಂದು ಒತ್ತಾಯಿಸಿದರು.

ಪ್ರಸ್ತುತ ಕೃಷಿ ಚಟುವಟಿಕೆಗಳು ಗರಿಗೆದರಿರುವ ಸಂದರ್ಭದಲ್ಲಿ ರಸಗೊಬ್ಬರ ಕೊರತೆ ಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ರೈತರಿಗೆ ಅಗತ್ಯ ಪ್ರಮಾಣದಲ್ಲಿ ರಸಗೊಬ್ಬರ ಲಭ್ಯವಾಗುವಂತೆ ನೋಡಿಕೊಳ್ಳಬೇಕು.

3ನೇ ಪುಟ.....

ವಿಶ್ವ ಬಾಲಕಾರ್ಮಿಕ, ಕಿಶೋರಕಾರ್ಮಿಕ ಪದ್ಧತಿ ವಿರೋಧಿ ದಿನ ಜೂ. 12 ರಂದು ಎಲ್ಲಾ ಕಚೇರಿಗಳಲ್ಲಿ ಪ್ರತಿಜ್ಞಾವಿಧಿ ಸ್ವೀಕರಿಸಿ

ಕೊಪ್ಪಳ ಜೂ.10

ವಿಶ್ವ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಪದ್ಧತಿ ವಿರೋಧಿ ದಿನದ ಅಂಗವಾಗಿ ಎಲ್ಲಾ ಸರ್ಕಾರಿ ಕಚೇರಿಗಳಲ್ಲಿ ಇದೇ ಜೂ. 12 ರಂದು ಪ್ರತಿಜ್ಞಾವಿಧಿ ಬೋಧಿಸುವುದು ಕಡ್ಡಾಯವಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಕೊಪ್ಪಳ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಅಧ್ಯಕ್ಷರಾದ ಡಾ. ಸುರೇಶ ಬಿ. ಇಟ್ನಾಳ ಅವರು ತಿಳಿಸಿದ್ದಾರೆ.

ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆಯು 14 ವರ್ಷದ ಒಳಗಿನ ಮಕ್ಕಳು ಬಾಲಕಾರ್ಮಿಕರಾಗಿ ದುಡಿಯುವುದನ್ನು ಸಂಪೂರ್ಣವಾಗಿ ನಿಷೇಧಿಸಿರುತ್ತದೆ. ಹಾಗೆಯೇ 14 ರಿಂದ 18 ವರ್ಷದ ಮಕ್ಕಳು ಬಾಲಕಾರ್ಮಿಕರಾಗಿ ಅಪಾಯಕಾರಿ ಕ್ಷೇತ್ರದಲ್ಲಿ ದುಡಿಯುವುದನ್ನು ನಿಷೇಧಿಸಿ ಅಪಾಯಕಾರಿ ಅಲ್ಲದ ಕ್ಷೇತ್ರಗಳನ್ನು ನಿಯಂತ್ರಿಸುವಂತೆ ತಿಳಿಸುತ್ತದೆ. ದಂಡದ ಪ್ರಮಾಣವನ್ನು ಐವತ್ತು ಸಾವಿರದವರೆಗೆ ವಿಸ್ತರಿಸಲಾಗಿದೆ. ಎಲ್ಲಾ ಪ್ರಕರಣಗಳಲ್ಲೂ ಪೊಲೀಸ್ ಠಾಣೆಯಲ್ಲಿ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಲು ಅವಕಾಶ ಕಲ್ಪಿಸಿದೆ. ಇದಕ್ಕೆ ಪೂರಕವೆಂಬಂತೆ ನಿಯಮಾವಳಿ ಮತ್ತು ಬಾಲಕಾರ್ಮಿಕ ಮತ್ತು ಕಿಶೋರಕಾರ್ಮಿಕ ಪದ್ಧತಿಯನ್ನು ಪರಿಣಾಮಕಾರಿಯಾಗಿ ನಿರ್ಮೂಲನೆ ಮಾಡಲು ಕಾರ್ಯಸೂಚಿಯನ್ನು ಕೇಂದ್ರ ಕಾರ್ಮಿಕ ಸಚಿವಾಲಯ ಬಿಡುಗಡೆ ಮಾಡಿದೆ. ರಾಜ್ಯ ಕಾರ್ಮಿಕ ಇಲಾಖೆಯು ಬಾಲ ಮತ್ತು ಕಿಶೋರಾವಸ್ಥೆ ಕಾರ್ಮಿಕ ಮುಕ್ತ ವಲಯಗಳನ್ನಾಗಿಸುವ ಕಾರ್ಯಸೂಚಿಯನ್ನು ಹೊರತಂದಿದೆ. ಇವುಗಳ ಪರಿಣಾಮಕಾರಿ ಅನುಷ್ಠಾನ ಅವಶ್ಯಕ. ಈ ನಿಟ್ಟಿನಲ್ಲಿ ಬಾಲಕಾರ್ಮಿಕ ಪದ್ಧತಿಯನ್ನು ನಿರ್ಮೂಲನೆಗೊಳಿಸಲು ಶ್ರಮಿಸುತ್ತಿರುವ ಎಲ್ಲಾ ಇಲಾಖೆಗಳು ಮತ್ತು ಸ್ವಯಂ ಸೇವಾ ಸಂಸ್ಥೆಗಳ ಜವಾಬ್ದಾರಿ ಮಹತ್ವದ್ದಾಗಿದೆ. ಎಲ್ಲರೂ ಒಗ್ಗೂಡಿ ಸಹಭಾಗಿತ್ವದಿಂದ ವಿವಿಧ ಕಾರ್ಯತಂತ್ರಗಳನ್ನು ಅನುಷ್ಠಾನ ಮಾಡಿದರೆ ಮಾತ್ರ ಮಕ್ಕಳು ಬಾಲಕಾರ್ಮಿಕ ಪದ್ಧತಿಯತ್ತ ಹೋಗುವುದನ್ನು ತಡೆದು ಬಾಲಕಾರ್ಮಿಕ ಪದ್ಧತಿಯ ಸಂಪೂರ್ಣ ನಿರ್ಮೂಲನೆ ಸಾಧ್ಯ.

ಈ ನಿಟ್ಟಿನಲ್ಲಿ ಅಂತರಾಷ್ಟ್ರೀಯ ಕಾರ್ಮಿಕ ಸಂಘಟನೆ, ವಿಶ್ವಸಂಸ್ಥೆ ಹಾಗೂ ಕರ್ನಾಟಕ ಸರ್ಕಾರದ ಕಾರ್ಮಿಕ ಇಲಾಖೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿಯನ್ನು ತೊಡೆದು ಹಾಕುವುದರೊಂದಿಗೆ ಕರ್ನಾಟಕವನ್ನು ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಪದ್ಧತಿ ಮುಕ್ತ ಕರ್ನಾಟಕವನ್ನಾಗಿಸಲು ಶ್ರಮಿಸುತ್ತಿದೆ. ಹಾಗಾಗಿ ಈ ವರ್ಷ ''ಬಾಲ ಕಾರ್ಮಿಕ ಪದ್ಧತಿಗೆ ಕೆಂಪು ಚೀಟಿ: ಮಕ್ಕಳಿಗೆ ನ್ಯಾಯಯುತ ಆಟ, ವಯಸ್ಕರಿಗೆ ಯೋಗ್ಯ ಕೆಲಸ'' (: ,) ಎಂಬ ಧ್ಯೇಯ ವಾಕ್ಯದೊಂದಿಗೆ ಹಾಗೂ ವಿಶ್ವಸಂಸ್ಥೆಯ ಮಾರ್ಗಸೂಚಿಯಂತೆ ಈ ಪದ್ಧತಿಯನ್ನು ಕೊನೆಗಾಣಿಸಲು ಸಮಾರೋಪಾದಿಯಲ್ಲಿ ಕ್ರಮ ಜರುಗಿಸುವುದು ಅತ್ಯಂತ ಅಗತ್ಯ.

ಕೊಪ್ಪಳ ಜಿಲ್ಲೆಯಲ್ಲಿ ಈ ಆಂದೋಲನದಲ್ಲಿ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಕ್ರಿಯವಾಗಿ ಪಾಲ್ಗೊಳ್ಳಬೇಕಾಗಿದ್ದು, ಇದೇ ಜೂನ್ 12 ರಂದು ನಾವೆಲ್ಲರೂ ವಿಶ್ವ ಬಾಲ ಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ವಿರೋಧಿ ದಿನವನ್ನು ಜಿಲ್ಲಾ ಮಟ್ಟದಿಂದ ಪ್ರತಿಯೊಂದು ಗ್ರಾಮ ಮಟ್ಟದಲ್ಲಿ ಹಮ್ಮಿಕೊಳ್ಳುವ ಮೂಲಕ ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಪದ್ಧತಿಯ ನಿರ್ಮೂಲನೆಗೆ ಕೈಜೋಡಿಸಬೇಕೆಂದು ಪ್ರಕಟಣೆ ತಿಳಿಸಿದೆ.



ಜರ್ಮನಿ ಸಂಸ್ಥೆಗೆ ಜಿಟಿಟಿಸಿ ವಿದ್ಯಾರ್ಥಿಗಳ ಆಯ್ಕೆ

ಕಲಬುರಗಿ,ಜೂ.10 ಕರ್ನಾಟಕ ಮತ್ತು ಜರ್ಮನಿ ನಡುವೆ ಕೌಶಲ್ಯಪೂರ್ಣ ಸಹಕಾರ ಸಂಬಂಧ ವೃದ್ಧಿಸಲು ಮಹತ್ವದ ಹೆಜ್ಜೆ ಇಡಲಾಗಿದೆ. ಈ ನಿಟ್ಟಿನಲ್ಲಿ ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ (ಜಿಟಿಟಿಸಿ) ಐವರು ವಿದ್ಯಾರ್ಥಿಗಳನ್ನು ಜರ್ಮನಿಯ ಡಸೆಲ್ಡಾರ್ಫ್‌ನ ಪ್ರಮುಖ ಸಾರ್ವಜನಿಕ ಸಾರಿಗೆ ಸಂಸ್ಥೆಯಾದ ರೈನ್‌ಬಾನ್ ಎಜಿ ಉದ್ಯೋಗಕ್ಕೆ ಆಯ್ಕೆ ಮಾಡಿಕೊಂಡಿದೆ.

ವಿಕಾಸಸೌಧದಲ್ಲಿ ನಡೆದ ಸಮಾರಂಭದಲ್ಲಿ ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ರೈನ್ ಬಾನ್ ಎಜಿ ನೀಡಿದ ಒಪ್ಪಿತ ಪತ್ರಗಳನ್ನು (ಎಲ್ಒಐ) ಐವರು ಅಭ್ಯರ್ಥಿಗಳಿಗೆ ಹಸ್ತಾಂತರಿಸಿದರು.

ಈಗ ಆಯ್ಕೆಯಾದ ಜಿಟಿಟಿಸಿ ಅಭ್ಯರ್ಥಿಗಳು ಡಸೆಲ್ಡಾರ್ಫ್ ರೈನ್‌ಬಾನ್ ಎಜೆಯಲ್ಲಿ ತರಬೇತಿ ಪಡೆದು, ವಿಶ್ವದರ್ಜೆಯ ಕೈಗಾರಿಕಾ ಅನುಭವ ಮತ್ತು ಔಪಚಾರಿಕ ಜರ್ಮನ್ ಪ್ರಮಾಣೀಕರಣ ಪಡೆಯಲಿದ್ದಾರೆ. ಇದು ರಾಜ್ಯಕ್ಕೆ ಹೆಮ್ಮೆಯ ಕ್ಷಣ. ನಮ್ಮ ಯುವಕರು ವಿಶ್ವದ ಅತ್ಯುತ್ತಮರೊಂದಿಗೆ ಸ್ಪರ್ಧಿಸುವ ಪ್ರತಿಭೆ ಮತ್ತು ಶಿಸ್ತನ್ನು ಹೊಂದಿದ್ದಾರೆ. ಇಂತಹ ಅಂತರರಾಷ್ಟ್ರೀಯ ಪಾಲುದಾರಿಕೆಗಳ ಮೂಲಕ ಕೌಶಲ್ಯಪೂರ್ಣ ಯುವಕ-ಯುವತಿಯರಿಗೆ ಜಾಗತಿಕ ಅವಕಾಶಗಳನ್ನು ಒದಗಿಸಲು ನಮ್ಮ ಸರಕಾರ ಬದ್ಧವಾಗಿದೆ. ಇದು ಸುದೀರ್ಘ ಪ್ರಯಾಣದ ಆರಂಭ ಮಾತ್ರ, ಎಂದು ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದರು.

ಸಂಚಾರಿ, ಮೋಟಾರು ವಾಹನ ಕಾಯ್ದೆ ಉಲ್ಲಂಘನೆಯ ಬಾಕಿ ಪ್ರಕರಣಗಳ ಇತ್ಯರ್ಥಕ್ಕೆ ಅವಕಾಶ

ಕೊಪ್ಪಳ ಜೂ.10

ಸಂಚಾರಿ ಹಾಗೂ ಮೋಟಾರು ವಾಹನ ಕಾಯಿದೆ, ನಿಯಮಗಳ ಉಲ್ಲಂಘನೆ ಸಂಬಧ ಬಾಕಿ ಇರುವ ಪ್ರಕರಣಗಳ ಇತ್ಯರ್ಥಕ್ಕೆ ಅವಕಾಶವಿದ್ದು, ದಂಡದ ಮೊತ್ತದಲ್ಲಿ ಶೇ 50 ರಷ್ಟು ರಿಯಾಯತಿ ಸೌಲಭ್ಯವಿದೆ.

ಕರ್ನಾಟಕ ರಾಜ್ಯದ ಸಂಚಾರಿ ಹಾಗೂ ಸಾರಿಗೆ ಇಲಾಖೆಗಳಲ್ಲಿ ಸಂಚಾರಿ ಹಾಗೂ ಮೋಟಾರು ವಾಹನ ಕಾಯಿದೆ, ನಿಯಮಗಳ ಉಲ್ಲಂಘನೆ ಸಂಬಂಧ 1991 ರಿಂದ 2022ರ ಅವಧಿಯಲ್ಲಿ ಪ್ರಕರಣ ದಾಖಲಾಗಿ, ಬಾಕಿ ಇರುವ ಪ್ರಕರಣಗಳ ದಂಡದ ಮೊತ್ತದಲ್ಲಿ 50% (ಶೇಕಡಾ ಐವತ್ತರಷ್ಟು ಮಾತ್ರ) ರಿಯಾಯತಿ ನೀಡಿ, 2026ರ ಜೂನ್ 21 ರಿಂದ ಜುಲೈ 10ರ ವರೆಗೆ ಕಾಲಾವಕಾಶ ನೀಡಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಮತ್ತೊಮ್ಮೆ ಅವಕಾಶ ಕಲ್ಪಿಸಲಾಗಿರುತ್ತದೆ. 20 ದಿನಗಳ ನೀಡಿರುವ ಈ ಕಾಲಾವಕಾಶ ಬಳಸಿಕೊಂಡು ವಾಹನಗಳ ಮಾಲೀಕರು ದಂಡ ಪಾವತಿಸಬಹುದು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಎಲ್ಲಾ ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಕೊಪ್ಪಳ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ದರಗದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ತಳವಾರ ಎಸ್‌ಟಿ ಪ್ರಮಾಣ ಪತ್ರ, ಅರ್ಜಿ ತಿರಸ್ಕಾರ: ತಹಶೀಲ್ದಾರ್ ವಜಾಕ್ಕೆ ಜಿಲ್ಲಾಧಿಕಾರಿಗೆ ಮನವಿ



ಅಫಜಲಪುರ,

ತಳವಾರ ಹಾಗೂ ಪರಿವಾರ ಸಮುದಾಯವನ್ನು ಕೇಂದ್ರ ಸರಕಾರ ಪರಿಶಿಷ್ಟ ಪಂಗಡ (ಎಸ್‌ಟಿ) ಪಟ್ಟಿಗೆ ಸೇರ್ಪಡೆಗೊಳಿಸಿ ಅಧಿಸೂಚನೆ ಹೊರಡಿಸಿದ್ದರೂ, ಅಫಜಲಪುರ ತಾಲೂಕಿನಲ್ಲಿ ಅರ್ಹ ಫಲಾನುಭವಿಗಳಿಗೆ ಎಸ್‌ಟಿ ಜಾತಿ ಪ್ರಮಾಣ ಪತ್ರ ನೀಡುವಲ್ಲಿ ಅನ್ಯಾಯ ನಡೆಯುತ್ತಿದೆ ಎಂದು ಆರೋಪಿಸಿ ಗ್ರೇಡ್-2 ತಹಶೀಲ್ದಾರ್ ಅವರನ್ನು ವಜಾಗೊಳಿಸುವಂತೆ ತಾಲೂಕು ಪರಿಶಿಷ್ಟ ಪಂಗಡ ಸಮಾಜ ಸೇವಾ ಸಾಂಸ್ಕೃತಿಕ ಸಂಘದ ಅಧ್ಯಕ್ಷ ಅಂಬಣ್ಣ ನಾಯ್ಕೋಡಿ ಅವರು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಅವರಿಗೆ ಮನವಿ ಸಲ್ಲಿಸಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜಿಲ್ಲಾಧಿಕಾರಿಗಳಿಗೆ ಸಲ್ಲಿಸಿದ ಮನವಿಯಲ್ಲಿ, ಗ್ರಾಮ ಒನ್ ಕೇಂದ್ರ, ನಾಡಕಚೇರಿ ಹಾಗೂ ಅಟಲ್ ಜಿ ಜನಸ್ನೇಹಿ ಕೇಂದ್ರಗಳಲ್ಲಿ ತಳವಾರ ಸಮುದಾಯದ ಎಸ್‌ಟಿ ಜಾತಿ ಪ್ರಮಾಣ ಪತ್ರದ ಅರ್ಜಿಗಳನ್ನು ಸ್ವೀಕರಿಸದಂತೆ ಮೌಖಿಕ ಸೂಚನೆ ನೀಡಲಾಗಿದೆ ಎಂದು ಆರೋಪಿಸಿದರು.

ಅರ್ಜಿ ಸ್ವೀಕರಿಸಿದ ಕೆಲ ಪ್ರಕರಣಗಳಲ್ಲಿಯೂ ಸ್ಥಳೀಯ ಪರಿಶೀಲನೆ ನಡೆಸದೆ ಕಚೇರಿಯಲ್ಲಿಯೇ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ. ತಾಲೂಕಿನಲ್ಲಿ 22 ಸಾವಿರಕ್ಕೂ ಅಧಿಕ ತಳವಾರ ಸಮುದಾಯದ ಜನಸಂಖ್ಯೆ ಇದ್ದರೂ, ಈವರೆಗೆ ಅತಿ ಕಡಿಮೆ ಸಂಖ್ಯೆಯ ಅರ್ಜಿಗಳನ್ನು ಮಾತ್ರ ಸ್ವೀಕರಿಸಲಾಗಿದೆ ಎಂದು ತಿಳಿಸಿದ್ದಾರೆ.

ರಾಜ್ಯ ಸರಕಾರದ ಹೊಸ ಸುತ್ತೋಲೆಗಳು ಜಾರಿಯಲ್ಲಿದ್ದರೂ, ಹಳೆಯ ಆದೇಶಗಳನ್ನೇ ಆಧಾರವಾಗಿಟ್ಟುಕೊಂಡು ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ. ಇದರಿಂದ ಸಮುದಾಯದ ಅರ್ಹರು ಸರಕಾರದ ಸೌಲಭ್ಯಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಅಂಬಣ್ಣ ನಾಯ್ಕೋಡಿ ದೂರಿದರು.

ಖಾಸಗಿ ಕೇಂದ್ರಗಳಲ್ಲಿ ಹೆಚ್ಚುವರಿ ಹಣ ಪಾವತಿಸಿ ಅರ್ಜಿ ಸಲ್ಲಿಸುವ ಅನಿವಾರ್ಯ ಪರಿಸ್ಥಿತಿ ನಿರ್ಮಾಣವಾಗಿದ್ದು, ಅಂತಹ ಅರ್ಜಿಗಳನ್ನೂ ಹಳೆಯ ಸುತ್ತೋಲೆಗಳ ಆಧಾರದ ಮೇಲೆ ತಿರಸ್ಕರಿಸುವ ಮೂಲಕ ಗ್ರೇಡ್-2 ತಹಶೀಲ್ದಾರ್ ಸಮುದಾಯದ ವಿರುದ್ಧ ವೈಯಕ್ತಿಕ ದ್ವೇಷ ಸಾಧಿಸುತ್ತಿದ್ದಾರೆ. ಹೀಗಾಗಿ ಅವರನ್ನು ತಕ್ಷಣ ವಜಾಗೊಳಿಸಬೇಕು ಎಂದು ಆಗ್ರಹಿಸಿದರು.

ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ಇಕ್ರಮ್ ಶರೀಫ್, ''ಸಮಸ್ಯೆ ಕುರಿತು ಗ್ರೇಡ್-2 ತಹಶೀಲ್ದಾರ್ ಅವರನ್ನು ಕರೆಸಿ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಲಾಗುವುದು. ತಳವಾರ ಸಮುದಾಯದ ಅರ್ಹರಿಗೆ ನ್ಯಾಯಯುತವಾಗಿ ಜಾತಿ ಪ್ರಮಾಣ ಪತ್ರ ದೊರೆಯುವಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು'' ಎಂದು ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ, ತಹಶೀಲ್ದಾರ್ ಸಂಜೀವಕುಮಾರ್ ದಾಸರ, ಪರಿಶಿಷ್ಟ ಪಂಗಡ ಸಮಾಜ ಸೇವಾ ಸಾಂಸ್ಕೃತಿಕ ಸಂಘದ ಉಪಾಧ್ಯಕ್ಷ ಭೀಮರಾಯ ಜಮಾದಾರ, ಸಂತೋಷ ತಳವಾರ, ದೇವಿಂದ್ರ ಜಮಾದಾರ, ಮಲ್ಲು ಜಮಾದಾರ ಹಾಗೂ ದತ್ತಪ್ಪ ಜಮಾದಾರ ಉಪಸ್ಥಿತರಿದ್ದರು.

ಬಳ್ಳಾರಿ ತಾಲ್ಲೂಕು ವ್ಯಾಪ್ತಿಯಲ್ಲಿ ಧರ್ತಿ ಮಾತಾ ಬಚಾವೋ, ಖೇತಿ ಬಚಾವೋ ಆಂದೋಲನ

ನಾಳಿನ ಪೀಳಿಗೆಗೆ, ಇಂದಿನ ಬದಲಾವಣೆಗಾಗಿ ನೈಸರ್ಗಿಕ ಕೃಷಿಯತ್ತ ಮುಖ ಮಾಡಿ: ಮಂಜುನಾಥ್

ಬಳ್ಳಾರಿ,ಜೂ.10

ಭೂಮಿ ಮತ್ತು ಕೃಷಿ ಪದ್ಧತಿಯನ್ನು ಉಳಿಸುವುದು ಇಂದಿನ ತುರ್ತು ಅಗತ್ಯವಾಗಿದ್ದು, ಮುಂದಿನ ಪೀಳಿಗೆಗೆ ಫಲವತ್ತಾದ ಭೂಮಿಯನ್ನು ಉಡುಗೊರೆಯಾಗಿ ನೀಡಲು ರೈತರು ಸಾವಯವ ಮತ್ತು ನೈಸರ್ಗಿಕ ಕೃಷಿಯತ್ತ ಮುಖ ಮಾಡಬೇಕು ಎಂದು ಉಪ ಕೃಷಿ ನಿರ್ದೇಶಕ ಮಂಜುನಾಥ್ ಅವರು ಕರೆ ನೀಡಿದರು.

ಕೃಷಿ ಇಲಾಖೆ, ಹಗರಿ ಕೃಷಿ ವಿಜ್ಞಾನ ಕೇಂದ್ರ, ಇವರ ಸಹಯೋಗದಲ್ಲಿ ಭೂಮಿಯ ಫಲವತ್ತತೆ ಕಾಯ್ದುಕೊಳ್ಳುವಿಕೆ, ಮಣ್ಣಿನ ಆರೋಗ್ಯ ಸಂರಕ್ಷಣೆ ಹಾಗೂ ಸುಸ್ಥಿರ ಕೃಷಿ ಪದ್ಧತಿಗಳ ಕುರಿತು ರೈತರಲ್ಲಿ ವ್ಯಾಪಕ ಅರಿವು ಮೂಡಿಸಲು ಆತ್ಮ ಯೋಜನೆಯಡಿ ಬಳ್ಳಾರಿ ತಾಲ್ಲೂಕಿನ ಮೋಕಾ, ಬೆಳಗಲ್ಲು ಗ್ರಾಮದಲ್ಲಿ ಆಯೋಜಿಸಿದ್ದ ಧರ್ತಿ ಮಾತಾ ಬಚಾವೋ, ಖೇತಿ ಬಚಾವೋ ಆಂದೋಲನ ಮತ್ತು ರೈತರ ಜಾಗೃತಿ ಸಭೆಯಲ್ಲಿ ಅವರು ಮಾತನಾಡಿದರು.

ರಾಸಾಯನಿಕ ಗೊಬ್ಬರಗಳು ಹಾಗೂ ಕೀಟನಾಶಕಗಳ ಅತಿಯಾದ ಬಳಕೆಯಿಂದಾಗಿ ನಮ್ಮ ಭೂಮಿ (ಧರ್ತಿ ಮಾತಾ) ತನ್ನ ನೈಸರ್ಗಿಕ ಶಕ್ತಿಯನ್ನು ಕಳೆದುಕೊಳ್ಳುತ್ತಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಕೃಷಿಯಲ್ಲಿ ಯಶಸ್ಸು ಕಾಣಲು ಕಡ್ಡಾಯವಾಗಿ ಅಧಿಕೃತ ಮಾರಾಟಗಾರರಿಂದ ಅಥವಾ ಕೃಷಿ ಇಲಾಖೆಯಿಂದ ದೃಢೀಕೃತ ಬಿತ್ತನೆ ಬೀಜಗಳನ್ನೇ ಖರೀದಿಸಬೇಕು ಮತ್ತು ಖರೀದಿಸುವಾಗ ರಶೀದಿಯನ್ನು ತಪ್ಪದೇ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಸಹಾಯಕ ಕೃಷಿ ನಿರ್ದೇಶಕ ಗರ್ಜಪ್ಪ ಅವರು ಮಾತನಾಡಿ, ರೈತರು ಕೇವಲ ಯೂರಿಯಾ ಅಥವಾ ಡಿ.ಎ.ಪಿ ಗೊಬ್ಬರಗಳನ್ನೇ ಅತಿಯಾಗಿ ಬಳಸುವುದನ್ನು ನಿಲ್ಲಿಸಬೇಕು. ಬೆಳೆಗಳಿಗೆ ಸಾರಜನಕ, ರಂಜಕ ಮತ್ತು ಪೊಟ್ಯಾಶ್ ಜೊತೆಗೆ ಲಘು ಪೋಷಕಾಂಶಗಳೂ ಅತ್ಯಗತ್ಯವಾಗಿದ್ದು, ಮಣ್ಣಿನ ಪರೀಕ್ಷಾ ವರದಿಗೆ ಅನುಗುಣವಾಗಿ ಸಮತೋಲನ ಪ್ರಮಾಣದಲ್ಲಿ ರಸಗೊಬ್ಬರ ಬಳಸುವುದರಿಂದ ಅನಗತ್ಯ ವೆಚ್ಚ ಕಡಿಮೆಯಾಗಿ, ಇಳುವರಿ ಹೆಚ್ಚುತ್ತದೆ ಎಂದು ತಿಳಿಸಿದರು.

ರಸಗೊಬ್ಬರ ಖರೀದಿಯಲ್ಲಿ ಪಾರದರ್ಶಕತೆ ತರಲು ಮತ್ತು ಸಬ್ಸಿಡಿ



ಗೊಬ್ಬರ ದುರುಪಯೋಗ ತಡೆಯಲು ಇನ್ನು ಮುಂದೆ ಯೂರಿಯಾ ಸೇರಿದಂತೆ ಯಾವುದೇ ರಾಸಾಯನಿಕ ಗೊಬ್ಬರ ಖರೀದಿಗೆ ರೈತರ ಗುರುತಿನ ಸಂಖ್ಯೆ ಅಥವಾ ಎಫ್.ಐ.ಡಿ ಜೋಡಣೆಯನ್ನು ಕಡ್ಡಾಯಗೊಳಿಸಲಾಗಿದೆ ಎಂದರು.

ಇದುವರೆಗೆ ಫ್ರೂಟ್ಸ್' ಪೋರ್ಟಲ್‌ನಲ್ಲಿ ನೋಂದಣಿ ಮಾಡಿಕೊಳ್ಳದ ರೈತರು ತಕ್ಷಣವೇ ತಮ್ಮ ಜಮೀನಿನ ಪಹಣಿ ಪತ್ರ, ಆಧಾರ್ ಕಾರ್ಡ್ ಮತ್ತು ಬ್ಯಾಂಕ್ ಪಾಸ್ ಬುಕ್ ವಿವರಗಳೊಂದಿಗೆ ಹತ್ತಿರದ ರೈತ ಸಂಪರ್ಕ ಕೇಂದ್ರಕ್ಕೆ ಭೇಟಿ ನೀಡಿ ಎಫ್ಐಡಿ ಪಡೆದುಕೊಳ್ಳುವಂತೆ ಕೋರಿದರು.

ಹಗರಿಯ ಕೃಷಿ ವಿಜ್ಞಾನ ಕೇಂದ್ರದ ಹಿರಿಯ ವಿಜ್ಞಾನಿ ಹಾಗೂ ಮುಖ್ಯಸ್ಥ ಡಾ. ಪಾಲಯ್ಯ ಅವರು ಮಾತನಾಡಿ, ಪರಿಸರಕ್ಕೆ ಹಾನಿ ಮಾಡದಂತೆ ದೀರ್ಘಾವಧಿಯಲ್ಲಿ ಲಾಭ ತಂದುಕೊಡುವ ಕೃಷಿಯೇ ಸುಸ್ಥಿರ ಕೃಷಿ. ಇದಕ್ಕಾಗಿ ಬೆಳೆ ಪರಿವರ್ತನೆ, ಅಂತರ್ ಬೆಳೆ ಪದ್ಧತಿ, ಹಸಿರುಗೊಬ್ಬರಗಳ ಬಳಕೆ ಮತ್ತು ಸಮಗ್ರ ಕೀಟ ನಿರ್ವಹಣಾ ಕ್ರಮಗಳನ್ನು ಅಳವಡಿಸಿಕೊಳ್ಳಬೇಕು ಎಂದು ಅವರು ರೈತರಿಗೆ ತಿಳಿಸಿದರು.

ಕೆ.ವಿ.ಕೆ ಹಗರಿಯ ಮಣ್ಣು ವಿಜ್ಞಾನಿ ಡಾ.ರವಿ ಎಸ್. ಅವರು ಮಾತನಾಡಿ, ಬಿತ್ತನೆಗೆ ಮುನ್ನ ಬೀಜಗಳಿಗೆ ಜೈವಿಕ ಇನಾಕ್ಯುಲಂಗಳು ಅಥವಾ ಶಿಲೀಂಧ್ರನಾಶಕಗಳಿದ ಉಪಚರಿಸುವುದರಿಂದ ಆರಂಭಿಕ ಹಂತದ ರೋಗ ಮತ್ತು ಕೀಟ ಬಾಧೆಗಳನ್ನು ತಡೆಯಬಹುದು ಹಾಗೂ ಇದು ಮೊಳಕೆ ಒಡೆಯುವ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ ಎಂದರು.

ಭೂಮಿಯ ಆರೋಗ್ಯ ಕಾಪಾಡಲು ಕೊಟ್ಟಿಗೆ ಗೊಬ್ಬರ, ಎರೆಗೊಬ್ಬರ ಹಾಗೂ ಹಸಿರುಗೊಬ್ಬರಗಳಾದ ಸೆಣಬು, ಡಯಾಂಚಾಗಳನ್ನು ಮಣ್ಣಿಗೆ ಸೇರಿಸಬೇಕು ಮತ್ತು ನಿಯಮಿತವಾಗಿ ಮಣ್ಣು ಪರೀಕ್ಷೆ ಮಾಡಿಸಿ ಮಣ್ಣಿನ ಆರೋಗ್ಯ ಕಾರ್ಡ್' ಪಡೆದುಕೊಳ್ಳುವುದು ಕಡ್ಡಾಯ ಎಂದು ತಿಳಿಸಿದರು.

ಬಳ್ಳಾರಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಸಂತೋಷ್ ಅವರು, ಇಲಾಖೆಯ ಪ್ರಮುಖ ಯೋಜನೆಗಳಾದ ಪಿಎಂ-ಕಿಸಾನ್, ರಾಜ್ಯ ಸರ್ಕಾರದ ಪ್ರೋತ್ಸಾಹ ಧನ ಯೋಜನೆ, ರೈತ ಶಕ್ತಿ ಯೋಜನೆ (ಡೀಸೆಲ್ ಸಬ್ಸಿಡಿ), ಕೃಷಿ ಯಾಂತ್ರೀಕರಣ ಯೋಜನೆಯಡಿ ಟ್ರ್ಯಾಕ್ಟರ್ ಮತ್ತು ಉಪಕರಣಗಳ ವಿತರಣೆ ಹಾಗೂ ಸೂಕ್ಷ್ಮ ನೀರಾವರಿ ಯೋಜನೆಯಡಿ ಹನಿ ಮತ್ತು ತುಂತುರು ನೀರಾವರಿಗೆ ಶೇ. 75 ರಿಂದ ಶೇ. 90 ರವರೆಗೆ ನೀಡಲಾಗುವ ಸಹಾಯಧನದ ಕುರಿತು ಮಾಹಿತಿ ನೀಡಿದರು. ಜಿಲ್ಲಾ ಕೃಷಿ ತರಬೇತಿ ಕೇಂದ್ರ ಕಂಪ್ಲಿಯ ಕೃಷಿ ಅಧಿಕಾರಿ ಯೇಸುಬಾಬು ಅವರು ಮಾತನಾಡಿ, ಕಂಪ್ಲಿ ಮತ್ತು ಸುತ್ತಮುತ್ತಲಿನ ಭಾಗದ ರೈತರು ತಮ್ಮ ಜಮೀನಿನ ಮಣ್ಣಿನ ಗುಣಮಟ್ಟ ಸುಧಾರಿಸಲು ಮತ್ತು ಕೃಷಿಯಲ್ಲಿ ಹೊಸ ತಂತ್ರಜ್ಞಾನಗಳನ್ನು ಕಲಿಯಲು ಕಂಪ್ಲಿಯ ತರಬೇತಿ ಕೇಂದ್ರವನ್ನು ನೇರವಾಗಿ ಸಂಪರ್ಕಿಸಿ ಉಚಿತ ತರಬೇತಿಗಳ ಸದುಪಯೋಗ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಆತ್ಮ ಯೋಜನೆಯ ಉಪ ಯೋಜನಾ ನಿರ್ದೇಶಕರಾದ ಕವಿತಾ ಕುಮಾರಿ ಅವರು ರೈತರು ಗುಣಮಟ್ಟದ ಬಿತ್ತನೆ ಬೀಜಗಳನ್ನು ಬಳಸಿ, ದೇಸಿ ತಳಿಗಳನ್ನು ರಕ್ಷಿಸಬೇಕು ಎಂದು ಕರೆ ನೀಡಿದರು.

ರೈತರು ಕೃಷಿ ಇಲಾಖೆಯ ಅಧಿಕಾರಿಗಳೊಂದಿಗೆ ನಿರಂತರ ಸಂಪರ್ಕದಲ್ಲಿದ್ದು, ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು ಎಂದು ಸಹಾಯಕ ಕೃಷಿ ಅಧಿಕಾರಿಯಾದ ಸುಷ್ಮಾ ಅವರು ತಿಳಿಸಿದರು.

ಜಾಗೃತಿ ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿಗಳಾದ ಜ್ಯೋತಿ, ಆತ್ಮ ಯೋಜನೆಯ ತಾಲ್ಲೂಕು ತಾಂತ್ರಿಕ ವ್ಯವಸ್ಥಾಪಕಿ ವಾಣಿ ಕೋರಪ್ಪಳ ಹಾಗೂ ಕೃಷಿ ಸಂಜೀವಿನಿ ಸಿಬ್ಬಂದಿಗಳು ಮತ್ತು ಪ್ರಗತಿಪರ ರೈತರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಗ್ರಾಮದ ನೂರಾರು ರೈತರು ತಮ್ಮ ಕೃಷಿ ಸಂಬಧಿತ ಸಂಶಯಗಳನ್ನು ತಜ್ಞರ ಮುಂದೆ ಮಂಡಿಸಿ ಪರಿಹರಿಸಿಕೊಂಡರು.




ರೈತರು ಸರಕಾರದ ಯೋಜನೆಯ ಲಾಭ ಪಡೆದುಕೊಳ್ಳಿ: ಶರಣಗೌಡ ಪಾಟೀಲ್

ಶಹಾಬಾದ,

ಮುಂಗಾರು ಹಂಗಾಮಿಗೆ ಅಗತ್ಯವಿರುವ ವಿವಿಧ ಬೆಳೆಗಳ ಬೀಜಗಳನ್ನು ಕೃಷಿ ಇಲಾಖೆಯ ಮೂಲಕ ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕೃಷಿ ಸಮಾಜದ ಅಧ್ಯಕ್ಷ ಶರಣಗೌಡ ಪಾಟೀಲ್ ಗೋಳಾ(ಕೆ) ಹೇಳಿದರು.

ಶುಕ್ರವಾರ ನಗರದ ರೈತ ಸಂಪರ್ಕ ಕೇಂದ್ರದಲ್ಲಿ 2026-27ನೇ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಶರಣಗೌಡ ಪಾಟೀಲ್, ತಾಲೂಕಿನಲ್ಲಿ ಹೆಚ್ಚಾಗಿ ಬೆಳೆಸಲಾಗುವ ತೊಗರಿ, ಹೆಸರು, ಉದ್ದು ಹಾಗೂ ಮತ್ತಿತರ ಬೆಳೆಗಳ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತಿದೆ. ಎಲ್ಲಾ ರೈತರಿಗೂ ಸಮರ್ಪಕವಾಗಿ ವಿತರಣೆಯಾಗಬೇಕು. ಸರಕಾರದ ಯೋಜನೆಯ ಲಾಭವನ್ನು ಎಲ್ಲಾ ರೈತರು ಪಡೆದುಕೊಳ್ಳಬೇಕೆಂದು ಹೇಳಿದರು. ಅಣವೀರ ಇಂಗಿನಶೆಟ್ಟಿ ಮಾತನಾಡಿ, ಕ್ಷೇತ್ರದ ಪ್ರತಿಯೊಬ್ಬ ರೈತರಿಗೂ ಅಗತ್ಯ ಪ್ರಮಾಣದ ಬೀಜಗಳು ಸಿಗುವಂತೆ ಸಮರ್ಪಕ ವ್ಯವಸ್ಥೆ ಮಾಡಬೇಕು. ಯಾವುದೇ ರೈತ ಬೀಜಕ್ಕಾಗಿ ಅಲೆದಾಡುವ ಪರಿಸ್ಥಿತಿ ನಿರ್ಮಾಣವಾಗಬಾರದು. ರೈತ ಸಂಪರ್ಕ ಕೇಂದ್ರಗಳು ರೈತ ಸ್ನೇಹಿಯಾಗಿ ಕೆಲಸ ಮಾಡಬೇಕು. ರೈತರು ತಂತ್ರಜ್ಞಾನ ಬಳಸಿಕೊಂಡು ಕೃಷಿ ಮಾಡಿದಾಗ ಮಾತ್ರ ಉನ್ನತಿ ಸಾಧ್ಯ ಎಂದು ಹೇಳಿದರು.

ಈ ಸಂದರ್ಭದಲ್ಲಿ ರೈತ ಸಂಪರ್ಕ ಕೇಂದ್ರದ ಸಹಾಯಕ ಕೃಷಿ ಅಧಿಕಾರಿ ಸುಷ್ಮಾ ಕಲಕೇರಿ, ರೈತ ಸಂಪರ್ಕ ಕೇಂದ್ರದ ಪ್ರವೀಣಕುಮಾರ. ಎಮ್.ಸಾಗರ, ತಿರುಮಲ್ ದೇವರ್ಕ, ನಿಂಗಣ್ಣ ಹೊನಗುಂಟಾ, ಶಂಕರ ಮಾಲಗತ್ತಿ, ರಾಘು ಹೊನಗುಂಟಾ ಇತರರು ಉಪಸ್ಥಿತರಿದ್ದರು.



ರಸಗೊಬ್ಬರ ಕೊರತೆ ನಿವಾರಣೆ, ವಿದ್ಯುತ್ ಖಾಸಗೀಕರಣ ಹಿಂಪಡೆಯಲು ರೈತರ ಆಗ್ರಹ

ಕಲಬುರಗಿ,

ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆಯನ್ನು ಖಂಡಿಸಿ ರೈತರಿಗೆ ಸಮರ್ಪಕವಾಗಿ ರಸಗೊಬ್ಬರ ಪೂರೈಕೆ ಮಾಡಬೇಕು ಹಾಗೂ ವಿದ್ಯುತ್ ಖಾಸಗೀಕರಣ ನೀತಿಯನ್ನು ಹಿಂಪಡೆಯಬೇಕು ಎಂದು ಒತ್ತಾಯಿಸಿ ಕರ್ನಾಟಕ ಪ್ರಾಂತ ರೈತ ಸಂಘದ ವತಿಯಿಂದ ಮಂಗಳವಾರ ನಗರದ ನೆಹರು ಗಂಜ್‌ನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಕಚೇರಿ ಎದುರು ಪ್ರತಿಭಟನೆ ನಡೆಯಿತು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ರೈತರ ಸಮಸ್ಯೆಗಳತ್ತ ಹೆಚ್ಚಿನ ಗಮನ ಹರಿಸಬೇಕು, ಇತ್ತೀಚಿನ ದಿನಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆಯಿಂದ ಕೃಷಿ ಚಟುವಟಿಕೆಗಳ ವೆಚ್ಚ ಹೆಚ್ಚಾಗಿದ್ದು, ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೂಡಲೇ ರೈತರ ಪರವಾಗಿ ನಿಲ್ಲಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ರಸಗೊಬ್ಬರಗಳ ಕೊರತೆಯನ್ನು ತಕ್ಷಣ ನಿವಾರಿಸಿ, ರೈತರಿಗೆ ಸುಲಭವಾಗಿ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ವಿದ್ಯುತ್ ಖಾಸಗೀಕರಣದಿಂದ ರೈತರು ಹಾಗೂ ಸಾಮಾನ್ಯ ಜನರ ಮೇಲೆ ಹೆಚ್ಚುವರಿ ಹೊರೆ ಬೀಳುವ ಸಾಧ್ಯತೆ ಇರುವುದರಿಂದ ಸರ್ಕಾರ ಈ ನಿರ್ಧಾರವನ್ನು ಹಿಂಪಡೆಯಬೇಕು ಎಂದು ಆಗ್ರಹಿಸಿದರು.

ಸಂಘದ ಅಧ್ಯಕ್ಷ ಶರಣಬಸಪ್ಪ ಮಮಶೆಟ್ಟಿ ಅವರು ಪ್ರತಿಭಟನೆಯ ನೇತೃತ್ವ ವಹಿಸಿದ್ದರು. ಉಪಾಧ್ಯಕ್ಷರಾದ ದೇವು ಬಿರಾದಾರ, ರೇವಣಸಿದ್ದಪ್ಪ ಪಾಟೀಲ, ಶರಣಪ್ಪ ವಚ್ಚಾ, ಸದಸ್ಯ ಭೀಮಶಾ ಬಡದಾಳ, ಸಿದ್ದು ಎಸ್.ಎಲ್. ಸೇರಿದಂತೆ ಸಂಘದ ಹಲವು ಪದಾಧಿಕಾರಿಗಳು ಹಾಗೂ ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಗುಲ್ಬರ್ಗಾ ವಿಶ್ವವಿದ್ಯಾಲಯದ ಕಾರ್ಯಸೌಧಕ್ಕೆ ಹೊರಗುತ್ತಿಗೆ ನೌಕರರಿಂದ ಮುತ್ತಿಗೆ; ಕುಲಪತಿ ಭರವಸೆಯ ಬಳಿಕ ಪ್ರತಿಭಟನೆ ಸಡಿಲ

ಕಲಬುರಗಿ,

ಮರುನೇಮಕಕ್ಕೆ ಆಗ್ರಹಿಸಿ ಕಳೆದ 45 ದಿನಗಳಿಂದ ಅಹೋರಾತ್ರಿ ಧರಣಿ ನಡೆಸುತ್ತಿರುವ ಗುಲ್ಬರ್ಗಾ ವಿಶ್ವವಿದ್ಯಾಲಯದ ಹೊರಗುತ್ತಿಗೆ ನೌಕರರು ಮಂಗಳವಾರ ಸಂಜೆ ಕಾರ್ಯಸೌಧಕ್ಕೆ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಿದರು.

ಹೊರಗುತ್ತಿಗೆ ಅವಧಿ ಮುಗಿದ ಹಿನ್ನೆಲೆಯಲ್ಲಿ 281 ನೌಕರರನ್ನು ಸೇವೆಯಿಂದ ವಜಾಗೊಳಿಸಲಾಗಿತ್ತು. ಈ ಕ್ರಮ ಖಂಡಿಸಿ ನೌಕರರು ಕಳೆದ 45 ದಿನಗಳಿಂದ ನಿರಂತರ ಹೋರಾಟ ನಡೆಸುತ್ತಿದ್ದು, ಜೂನ್ 9ರ ಸಿಂಡಿಕೇಟ್ ಸಭೆಯಲ್ಲಿ ತಮ್ಮ ಬೇಡಿಕೆ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದು ಆಡಳಿತ ಭರವಸೆ ನೀಡಿತ್ತು.

ಮಂಗಳವಾರ ಬೆಳಗ್ಗೆಯಿಂದ ನಡೆದ ಸಿಂಡಿಕೇಟ್ ಸಭೆಯ ನಿರ್ಣಯಗಳನ್ನು ಧರಣಿನಿರತ ನೌಕರರಿಗೆ ತಿಳಿಸದ ಹಿನ್ನೆಲೆಯಲ್ಲಿ ಪ್ರತಿಭಟನಾಕಾರರು ತಾಳ್ಮೆ ಕಳೆದುಕೊಂಡು ಕಾರ್ಯಸೌಧದ ಮುಖ್ಯ ದ್ವಾರದ ಎದುರು ಧರಣಿ ನಡೆಸಿದರು. ಈ ವೇಳೆ ಕುಲಪತಿ, ಕುಲಸಚಿವರು ಹಾಗೂ ಸಿಂಡಿಕೇಟ್ ಸದಸ್ಯರ ವಿರುದ್ಧ ಘೋಷಣೆಗಳನ್ನು ಕೂಗಿದರು.



ಕೆಲಕಾಲ ತಳ್ಳಾಟ-ನೂಕಾಟವೂ ನಡೆದು ಕ್ಯಾಂಪಸ್‌ನಲ್ಲಿ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು.

ಪ್ರತಿಭಟನಾಕಾರರು ಕುಲಪತಿ ಪ್ರೊ. ಶಶಿಕಾಂತ ಉಡಿಕೇರಿ, ಕುಲಸಚಿವ ಪ್ರೊ. ರಮೇಶ್ ಲಂಡನಕರ್ ಹಾಗೂ ಸಿಂಡಿಕೇಟ್ ಸದಸ್ಯರನ್ನು ಹೊರಗೆ ತೆರಳದಂತೆ ತಡೆದಿದ್ದರು. ಪರಿಸ್ಥಿತಿ ಬಿಗಡಾಯಿಸುತ್ತಿದ್ದಂತೆ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯ ಸಿಪಿಐ ಚಂದ್ರಶೇಖರ ತಿಗಡಿ ನೇತೃತ್ವದಲ್ಲಿ ಹೆಚ್ಚುವರಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಯಿತು.

281 ನೌಕರರನ್ನು ಕೈಬಿಡುವುದಿಲ್ಲ: ಕುಲಪತಿ

ಬಳಿಕ ಪ್ರತಿಭಟನಾಕಾರರೊಂದಿಗೆ ಮಾತನಾಡಿದ ಕುಲಪತಿ ಪ್ರೊ. ಶಶಿಕಾಂತ ಉಡಿಕೇರಿ, ''ಪ್ರಸ್ತುತ ಸೇವೆಯಲ್ಲಿದ್ದ 281 ನೌಕರರನ್ನು ಯಾವುದೇ ಕಾರಣಕ್ಕೂ ಕೈಬಿಡುವುದಿಲ್ಲ. ಟೆಂಡರ್ ಪ್ರಕ್ರಿಯೆಯಲ್ಲಿದ್ದ ತಾಂತ್ರಿಕ ಸಮಸ್ಯೆಗಳನ್ನು ಬಗೆಹರಿಸಲಾಗಿದೆ. ಹೊಸ ಗುತ್ತಿಗೆದಾರರ ಆಯ್ಕೆಯೂ ಪೂರ್ಣಗೊಂಡಿದ್ದು, ಉಳಿದ ಪ್ರಕ್ರಿಯೆಗಳನ್ನು ಒಂದು ವಾರದೊಳಗೆ ಮುಗಿಸಿ ಮರುನೇಮಕಾತಿ ಮಾಡಿಕೊಳ್ಳಲಾಗುವುದು'' ಎಂದು ಭರವಸೆ ನೀಡಿದರು.

ಕುಲಪತಿಯ ಭರವಸೆಯ ಬಳಿಕ ಪ್ರತಿಭಟನಾಕಾರರು ಮುತ್ತಿಗೆ ಹಿಂಪಡೆದು ಅಹೋರಾತ್ರಿ ಧರಣಿಯನ್ನು ಮುಂದುವರಿಸಿದರು.

ಇಬ್ಬರು ಮಹಿಳಾ ಸಿಬ್ಬಂದಿ ಅಸ್ವಸ್ಥ:

ಪ್ರತಿಭಟನೆ ಹಾಗೂ ಉಪವಾಸ ಸತ್ಯಾಗ್ರಹದಲ್ಲಿ ಪಾಲ್ಗೊಂಡಿದ್ದ ಗೀತಾ ಮತ್ತು ಕಾವ್ಯಾಶ್ರೀ ಎಂಬ ಇಬ್ಬರು ಮಹಿಳಾ ಸಿಬ್ಬಂದಿ ಘೋಷಣೆ ಕೂಗುತ್ತಿದ್ದ ವೇಳೆ ಅಸ್ವಸ್ಥರಾಗಿ ಕುಸಿದು ಬಿದ್ದರು. ಅವರನ್ನು ತಕ್ಷಣ ಇಎಸ್ಐಸಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದ್ದು, ಆರೋಗ್ಯ ಸ್ಥಿತಿ ಸ್ಥಿರವಾಗಿದೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ.

ಈ ಸಂದರ್ಭದಲ್ಲಿ ನೌಕರರ ಸಂಘದ ಅಧ್ಯಕ್ಷ ಶೀಲಪ್ರಕಾಶ ದೊಡ್ಡಮನಿ, ಗೌರವಾಧ್ಯಕ್ಷ ವಿಜಯ ಕೆಂಗಲ್, ಕಾರ್ಯದರ್ಶಿ ಚಂದ್ರಶೇಖರ ಸಾವಳಗಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ನೂರಾರು ನೌಕರರು ಉಪಸ್ಥಿತರಿದ್ದರು.

ಒಂದನೇಯ ಪ್ರುಟದಿಂದ

ಕಾಂಗ್ರೆಸ್ ಸರಕಾರ 3 ವರ್ಷ ಅವಧಿಯಲ್ಲಿ ನನ್ನ ಸಾಧನೆ ತೃಪ್ತಿ, ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ- ಬೋಸರಾಜು

ಮೂಲಕ ರಾಜ್ಯದ ಸರ್ವತೋಮುಖ ಅಭಿವೃದ್ಧಿಗೆ ಒತ್ತು ನೀಡಿದೆ ಎಂದರು. ಪ್ರತಿ ವರ್ಷ ಗ್ಯಾರಂಟಿಗಳಿಗೆ 50 ಸಾವಿರ ಕೋಟಿ ವೆಚ್ಚ ಭರಿಸಲಾಗಿದೆ. ಮೂರು ವರ್ಷದಲ್ಲಿ ಸುಮಾರು 1 ಲಕ್ಷ 63 ಸಾವಿರ ಕೋಟಿ ಖರ್ಚು ಮಾಡಲಾಗಿದೆ ಎಂದರು. ಸಿದ್ದರಾಮಯ್ಯ ಅವರು ರಾಜೀನಾಮೆ ನೀಡಿರುವುದು ಸುಲಭದ ಮಾತಲ್ಲ, ಈಗಾಗಲೇ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ್ದು, ಸಿದ್ದರಾಮಯ್ಯ ಇಳಿದರೆ ಕಾಂಗ್ರೆಸ್ ಉಳಿಯುವುದಿಲ್ಲ ಎಂದು ಬಿಜೆಪಿ ಹೈಕಮಾಂಡ್ ಸಮೇತ ಕಾಯುತಿದ್ದರು ಎಂದರು.ಡಿಕೆ ಶಿವಕುಮಾರ ಸರಕಾರ ಎರಡು ವರ್ಷ ಯಶಸ್ವಿಯಾಗಿ ಪೂರೈಸಲಿದೆ. ನಮ್ಮ ಪಕ್ಷ ಸೈದಾಂತಿಕ ಒಳಗೊಂಡಿದೆ. ಹೈಕಮಾಂಡ್ ಸೂಚನೆಗೆ ಬದ್ದವಾಗಿದೆ.ಮೂರು ವರ್ಷ ಅಧಿಕಾರ ನಡೆಸಿದ ಮುಖ್ಯ ಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ ಅವರ ನೇತೃತ್ವದ ಕಾಂಗ್ರೆಸ್ ಸರ್ಕಾರ ಕಲ್ಯಾಣ ಕರ್ನಾಟಕ ಸೇರಿದಂತೆ ಜಿಲ್ಲೆಯಲ್ಲಿ ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದೆ ಎಂದರು. ಕೇಂದ್ರ ಸರಕಾರ ರಾಜ್ಯದ ಕೆರೆಗಳ ಅಭಿವೃದ್ಧಿಗೆ ನೀಡಬೇಕಾದ 3 ಸಾವಿರ ಕೋಟಿ ನೀಡಿಲ್ಲ ಎಂದರು.

ರೈತರ ಜೀವನಾಡಿಯಾದ ತುಂಗಾಭದ್ರ ಡ್ಯಾಂ ಗೇಟ್ ಮುರಿದಾಗ ತಕ್ಷಣ ಸ್ಥಳಕ್ಕೆ ಭೇಟಿ ನೀಡಿದ ಉಪ ಮುಖ್ಯ ಮಂತ್ರಿಗಳಾದ ಡಿ.ಕೆ.ಶಿವಕುಮಾರ ಹಾಗೂ ನಾನು ಮತ್ತು ಶಿವರಾಜ್ ತಂಗಡಿ ಸೇರಿದಂತೆ ಎಲ್ಲ ಸಚಿವರು,ಶಾಸಕರು ಅಧಿಕಾರಿಗಳೊಂದಿಗೆ ಚರ್ಚಿಸಿಸಿ 7 ದಿನದೊಳಗೆ ಗೇಟ್ ದುರಸ್ತಿ ಮಾಡಿಸಲಾಯಿತು. ನಂತರ ಎಲ್ಲ 33 ಗೇಟ್‌ಗಳನ್ನು ಬದಲಾಯಿಸಲಾಗಿದೆ.

ಜಿಲ್ಲೆಯ ಅಭಿವೃದ್ದಿಗೆ ಕಾಂಗ್ರೆಸ್ ಸರ್ಕಾರ ಸಾಕಷ್ಟು ಕೊಡುಗೆ ನೀಡಿದೆ. ನಾನು ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಡಾ.ಶರಣಪ್ರಕಾಶ ಪಾಟೀಲ್ ಎಲ್ಲ ಶಾಸಕರು ಸೇರಿಕೊಂಡು ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿಸಿದ್ದೇವೆ.ನೂತನ ಡಿ.ಸಿ.ಕಛೇರಿ ನಿರ್ಮಾಣ ನೆನಗುದ್ದಿಗೆ ಬಿದ್ದಿತು. ಸರ್ಕಾರ ಬಂದ ತಕ್ಷಣ ಅಧಿಕಾರಿಗಳೊಂದಿಗೆ ಚರ್ಚಿಸಿ ಹೈದ್ರಾಬಾದ್ ಬೈಪಾಸ್ ರಸ್ತೆಯಲ್ಲಿ ಸುಮಾರು 25 ಕೋಟಿ ರೂ. ಖರ್ಚು ಮಾಡಿ ಮಿನಿ ವಿಧಾನಸೌಧ ಕಟ್ಟಿಸಲಾಗಿದೆ. ಜಿಲ್ಲೆಯ ಎಲ್ಲ ತಾಲೂಕಗಳು ಅದೇ ರಸ್ತೆಗೆ ಬರುತ್ತಿರುವುದದರಿಂದ ಎಲ್ಲ ತಾಲೂಕಿನವರಿಗೆ ಅನುಕೂಲವಾಗಲಿ ಎಂದು ಅಲ್ಲಿ ಕಟ್ಟಡ ಕಟ್ಟಿಸಲಾಗಿದೆ ಎಂದರು.

ನಗರಸಭೆಯನ್ನು ಮಹಾನಗರ ಪಾಲಿಕೆಯಾಗಿ ಮೇಲ್ದರ್ಜೆಗೆ ಏರಿಸುವ ಮೂಲಕ 200 ಕೋಟಿ. ರೂ. ಮಂಜೂರು ಮಾಡಿಸಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗಿದೆ. ರಸ್ತೆ, ಚರಂಡಿ ನಿರ್ಮಾಣ ಮಾಡಲಾಗಿದೆ. ಸ್ವಚ್ಚತೆಗೆ ಆದ್ಯತೆ ನೀಡಲಾಗಿದೆ. ವಿಮಾನ ನಿಲ್ದಾಣದ ಕಾರ್ಯ ಸಹ ನೆನಗುದ್ದಿಗೆ ಬಿದ್ದಿತು. ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿ ಬಂದ ತಕ್ಷಣ

ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ಸಂಭಂದಿಸಿದ ಸಚಿವರೊಂದಿಗೆ ಚರ್ಚಿಸಿ ಕಾಮಗಾರಿ ಆರಂಭಿಸಲಾಗಿದೆ. ಕಾಮಗಾರಿ ಪ್ರಗತಿಯಲ್ಲಿ ಇದೆ. ಹಣದ ಕೊರತೆ ಇಲ್ಲವೆಂದು ಹೇಳಿದರು. ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಿಂದ ಪ.ಜಾತಿ ಪ.ಪಂ.ದವರ ಅಭಿವೃದ್ದಿಗಾಗಿ ಅವರ ಜಮೀನುಗಳಲ್ಲಿ ರಾಜ್ಯದಲ್ಲಿ ಒಟ್ಟು 13 ಸಾವಿರ ಬೋರವೆಲ್‌ಗಳನ್ನು ಕೊರಸಲಾಗಿದೆ ಎಂದರು.

ರಾಜ್ಯದಲ್ಲಿ ಭೂಮಿಯಲ್ಲಿ ಅಂತರರ್ಜಲ ಅಭಿವೃದ್ಧಿ ಬೇಕಾದ ಎಲ್ಲ ಕ್ರಮಗಳನ್ನು ಕೈಗೊಂಡು ಭೂಮಿಯಲ್ಲಿ ಅಂತರರ್ಜಲ ಹೆಚ್ಚಿಸಲು ರಾಜ್ಯ ಹಾಗೂ ಜಿಲ್ಲೆಯಲ್ಲಿ ಅನೇಕ ಬ್ಯಾರೇಜ್ ಕಂ ಬ್ರೀಜ್‌ಗಳು ಹಾಗೂ ಚಕ್ ಡ್ಯಾಂಗಳ ನಿರ್ಮಾಣ ಹಾಗೂ ಅನೇಕ ಕೆರೆಗಳ ಅಭಿವೃದ್ಧಿ ಮತ್ತು ನಿರ್ಮಾಣ ಮಾಡಲಾಗಿದೆ.

ಕಾಂಗ್ರೆಸ್ ಸರ್ಕಾರದ ಮೂರು ವರ್ಷದ ಅವಧಿಯಲ್ಲಿ ಮಾಡಿದ ಸೇವೆ ತೃಪ್ತಿ ತಂದಿದೆ. ಮುಂದಿನ ದಿನಗಳಲ್ಲಿ ಜಿಲ್ಲೆಯ ಅಭಿವೃದ್ಧಿಗೆ ಸದಾ ಶ್ರಮಿಸುತ್ತೇನೆಂದು ಹೇಳಿದರು. ಈ ಸಂದರ್ಭದಲ್ಲಿ ಸಂಸದರಾದ ಜಿ.ಕುಮಾರ ನಾಯಕ, ಕಾಂಗ್ರೆಸ್ ಮುಖಂಡರಾದ ಮಹ್ಮದ್ ಶಾಲಂ,ಕೆ.ಶಾಂತಪ್ಪ, ನರಸಿಂಹಲು ಮಾಡಗೇರಿ, ಸಾಜೀದ್ ಸಮೀರ್, ಜಯಣ್ಣ, ಜಿ.ಶಿಮೂರ್ತಿ, ಯೂಸೂಫ್ ಖಾನ್, ನಿರ್ಮಾಲ ಬೆಣ್ಣೆ, ಶಶಿಕಲಾ ಭೀಮರಾಯ್, ವಿಶ್ವಾನಾಥ ಟ್ಟಿ, ಲಕ್ಷ್ಮೀಕಾಂತ ರೆಡ್ಡಿ, ಅಮರೇಗೌಡ ಹಂಚನಾಳ, ರುದ್ರಪ್ಪ ಅಂಗಡಿ, ಅರುಣ್ ದೋತರಬಂಡಿ,ಫೈಯಾಜ್, ಶೈಬಾಜ್,ಸೈಯದ್ ಶಂಶುದ್ದೀನ್ ಸೇರಿದಂತೆ ಅನೇಕರು

ಅಂಬೇಡ್ಕರ್ ನೂತನ ಕಂಚಿನ ಪುತ್ತಳಿ, ಸಂವಿಧಾನ ಪೀಠಿಕೆ ಕಾಮಗಾರಿ ಶೀಘ್ರದಲ್ಲಿ ಪ್ರಾರಂಭಕ್ಕೆ ಒತ್ತಾಯ

ಧೋರಣೆ ಅನುಸರಿಸಲಾಗಿದೆ ಎಂದರು ಈ ಹಿಂದಿನ ಸಭೆಯ ನಿರ್ಣಯದಂತೆ, ಬಾಬಾ ಸಾಹೇಬರ ಪುತ್ತಳಿ ಹಾಗೂ ಸಂವಿಧಾನ ಪೀಠಿಕೆ ಪಕ್ಕದಲ್ಲಿಯೇ ಹೋರಾಟಗಾರರಿಗೆ ಹೋರಾಟಕ್ಕೆ ಸ್ಥಳ ಅವಕಾಶ ಮಾಡಿಕೊಡಲು ಸಭೆಯಲ್ಲಿ ತೀರ್ಮಾನದಂತೆ ಕಾಮಗಾರಿಯನ್ನು ಶೀಘ್ರವೆ ಪ್ರಾರಂಭಿಸಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರೂ. ಮಾನವಿ ತಾಲೂಕ ಕೇಂದ್ರದಲ್ಲಿ ಡಾ.ಬಿ.ಆರ್. ಅಂಬೇಡ್ಕರ ರವರ ನೂತನ ಪುತ್ತಳಿ ನಿರ್ಮಿಸಬೇಕು.ಲಿಂಗಸೂಗೂರ ತಾಲೂಕ ಕೇಂದ್ರದಲ್ಲಿ ಡಾ.ಬಿ.ಆರ್. ಅಂಬೇಡ್ಕರ ರವರ ನೂತನ ಪುತ್ತಳಿ ನಿರ್ಮಿಸಬೇಕು.ಸಿರವಾರ ತಾಲೂಕ ಕೇಂದ್ರದಲ್ಲಿ ಡಾ.ಬಿ.ಆರ್. ಅಂಬೇಡ್ಕರ ರವರ ನೂತನ ಪುತ್ತಳಿ ನಿರ್ಮಿಸಬೇಕು.ಅರಕೇರಾ ತಾಲೂಕ ಕೇಂದ್ರದಲ್ಲಿ ಡಾ.ಬಿ.ಆರ್. ಅಂಬೇಡ್ಕರ ರವರ ನೂತನ ಪುತ್ತಳಿ ನಿರ್ಮಿಸಬೇಕು ಎಂದು ಒತ್ತಾಯಿಸಿದರೂ.ಈ ಸಂದರ್ಭದಲ್ಲಿ ವಿಶ್ವನಾಥ ಪಟ್ಟೆತಮ್ಮಣ್ಣ ವಕೀಲರು, ಎಂ ವಸಂತ ಸೇರಿದಂತೆ ಉಪಸ್ಥಿತರಿದ್ದರು.

ಕಳಪೆ ಸೂರ್ಯಕಾಂತಿ ಬೀಜ ಪೂರೈಕೆ: ರೈತರಿಗೆ ಪರಿಹಾರ ನೀಡಲು ಆಗ್ರಹ ಸಹಾಯಕ ಆಯುಕ್ತರಿಗೆ ಕರ್ನಾಟಕ ರಾಜ್ಯ ರೈತ ಸಂಘ ಮನವಿ

ಕೃಷಿ ಇಲಾಖೆಯು ಬೀಜ ಹಾಗೂ ರಸಗೊಬ್ಬರಗಳ ಬೆಲೆ ಏರಿಕೆಯನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಇದರ ಜೊತೆಗೆ ರೈತರ ಹೊಲಗಳಿಗೆ ನಿಗದಿತ 7 ಗಂಟೆಗಳ ಕಾಲವೂ ವಿದ್ಯುತ್ ಪೂರೈಕೆ ಆಗುತ್ತಿಲ್ಲ. ವಿದ್ಯುತ್ ಕೊರತೆಯಿಂದ ಬೆಳೆ ನಿರ್ವಹಣೆಗೆ ತೊಂದರೆಯಾಗುತ್ತಿದ್ದು, ಜೆಸ್ಕಾಂ ಅಧಿಕಾರಿಗಳಿಗೆ ಸೂಚನೆ ನೀಡಿ ಸಮರ್ಪಕ ವಿದ್ಯುತ್ ಪೂರೈಕೆಗೆ ಕ್ರಮ ವಹಿಸಬೇಕು ಎಂದು ಆಗ್ರಹಿಸಿದರು.

ಸೂರ್ಯಕಾಂತಿ, ದತ್ತಿ ಹಾಗೂ ತೊಗರಿ ಬೀಜಗಳ ದರಗಳಲ್ಲಿ ನಿರಂತರ ಏರಿಕೆಯಾಗುತ್ತಿರುವುದರಿಂದ ಕೃಷಿ ಇಲಾಖೆ ಅಧಿಕಾರಿಗಳ ಸಭೆ ಕರೆದು ದರ ಏರಿಕೆಯ ಕುರಿತು ಪರಿಶೀಲನೆ ನಡೆಸಬೇಕು. ರೈತರ ಹಿತಾಸಕ್ತಿಯನ್ನು ಕಾಪಾಡಲು ಕಟ್ಟುನಿಟ್ಟಿನ ಕ್ರಮಗಳನ್ನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತ ಮುಖಂಡರಾದ ಈರಣ್ಣ ಗುಡಿದಾಳ, ಕಲ್ಲಪ್ಪ ಚಿಕ್ಕಯರದಿದಾಳ, ಅಮರೇಶ, ಕರಿಯಪ್ಪ ಗದ್ದೆಪ್ಪ, ಕಲ್ಲಪ್ಪ, ಯಂಕಣ್ಣ ರಕ್ಕಸಗಿ ಸೇರಿದಂತೆ ಹಲವು ರೈತರು ಉಪಸ್ಥಿತರಿದ್ದರು.

ಅಂಬೇಡ್ಕರ್ ನೂತನ ಕಂಚಿನ ಪುತ್ತಳಿ, ಸಂವಿಧಾನ ಪೀಠಿಕೆ ಕಾಮಗಾರಿ ಶೀಘ್ರದಲ್ಲಿ ಪ್ರಾರಂಭಕ್ಕೆ ಒತ್ತಾಯ

2011 ರಿಂದ ಮಾತ್ರ ಬಾಕಿ ಇವೇ ಲೋಕ ಅದಾಲತ್‌ನಲ್ಲಿ ಇವುಗಳನ್ನು ಇತ್ಯರ್ಥಪಡಿಸಿಕೊಳ್ಳಲು ಶೇ.50ರಷ್ಟು ದಂಡ ರಿಯಾಯಿತಿ ನೀಡಲಾಗುತ್ತಿದೆ ಎಂದು ಹೇಳಿದರು.

ಸಂಬಂಧಿತ ವಾಹನ ಮಾಲೀಕರು ಹಾಗೂ ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳುವಂತೆ ಅವರು ಕರೆ ನೀಡಿದರು.

ರೈತರಿಗೆ ಸಮರ್ಪಕ ಬೀಜ, ರಸಗೊಬ್ಬರ ವಿತರಣೆ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ದಿ.16 ಧರಣಿ ಸತ್ಯಾಗ್ರಹ

ನಿಗಳ ನಿವಾಸಿಗಳಿಗೆ ಹಕ್ಕುಪತ್ರ ವಿತರಣೆ, ಮೂಲಭೂತ ಸೌಕರ್ಯ ಕಲ್ಪಿಸುವುದು, ಉದ್ಯೋಗ ಖಾತ್ರಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸುವುದು, ಒತ್ತುವರಿ ತೆರವುಗೊಳಿಸಿ ಸಾರ್ವಜನಿಕ ಹಾಗೂ ರೈತರ ಹಿತಾಸಕ್ತಿಯನ್ನು ಕಾಪಾಡುವುದು ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿಟ್ಟಿದೆ.ಬೇಡಿಕೆಗಳನ್ನು ಸರ್ಕಾರ ಮತ್ತು ಜಿಲ್ಲಾಡಳಿತ ಶೀಘ್ರ ಈಡೇರಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸುವುದಾಗಿ ಕೆಪಿಆರ್‌ಎಸ್ ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷರಾದ ಬಸವಂತರಾಯ ಗೌಡ,ಉಪಾಧ್ಯಕ್ಷರಾದ ಡಿ.ವೀರನಗೌಡ,ಕೆ.ಜಿ.ವಿರೇಶ,ಹನುಮಂತ ಬಲದಂಡೆ, ದುರ್ಗಪ್ಪ ಸೇರಿದಂತೆ ಉಪಸಿತರಿದ್ದರು

ಪ್ರಧಾನಿ ಮೋದಿ ಸುಧೀರ್ಘ ಸೇವೆ ಹಿನ್ನಲೆ ಅಭಿಮಾನಿಯಿಂದ ಹರಕೆ

ಹಣ್ಣಿನ ಮೇಲೆ ಮೋದಿ ಹೆಸರು ಬರೆದು ದೇವರಲ್ಲಿ ವಿಶೇಷ ಹರಿಕೆ ಸಲ್ಲಿಸಿದರು. ನಂತರ ಅವರು ಮಾತನಾಡಿ

ಪ್ರಧಾನಿ ನರೇಂದ್ರ ಮೋದಿ ಬಗ್ಗೆ ಇಂದು ಸುವರ್ಣಾಕ್ಷರದಲ್ಲಿ ಬರೆದಿಡಬೇಕಾದ ದಿನ. 4399 ದಿನಗಳ ಆಡಳಿತ ನಡೆಸಿದ ಸುಧೀರ್ಘ ಪ್ರಧಾನಮಂತ್ರಿ ನರೇಂದ್ರ ಮೋದಿ. ಇದು ಸ್ವಾತಂತ್ರ್ಯ ಭಾರತದ ಇತಿಹಾಸದಲ್ಲೇ 2014, 2019 2024 ಲೋಕಸಭಾ ಚುನಾವಣೆಯಲ್ಲಿ ಮೂರು ಗೆದ್ದು ದೇಶದ ಪ್ರಧಾನಿಯಾಗಿದ್ದೀರಿ. ನಾನು ಭಾರತದ ಪ್ರತಿಯೊಬ್ಬ ಪ್ರಜೆಯ ಪರವಾಗಿ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದರು.

ಭಾರತ ದೇಶ ಅಭಿವೃದ್ಧಿಯತ್ತ ಸಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಭಾರತ ದೇಶವನ್ನು ಜಾಗತಿಕ ಮಟ್ಟದಲ್ಲಿಕೊಂಡೊಯ್ಯುವುದರೊಂದಿಗೆ ದೇಶದ ಅಭಿವೃದ್ಧಿ ಪರ ಕೆಲಸ ಮಾಡುತ್ತಿದ್ದಾರೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರು ಅಭಿವೃದ್ಧಿ ಯಜ್ಞವನ್ನು ದೇಶದ ಉದ್ದಗಲಕ್ಕೂ ಸಾರುತ್ತಿದ್ದಾರೆ



ಅಂಗನವಾಡಿ ನೌಕರರ ಹಕ್ಕುಗಳಿಗಾಗಿ ಸಂಘಟನೆ ಅಗತ್ಯ : ಹೆಚ್.ಎಸ್. ಸುನಂದ

ಕಲಬುರಗಿ,

ಅಂಗನವಾಡಿ ನೌಕರರ ಸಮಸ್ಯೆಗಳ ಪರಿಹಾರ ಹಾಗೂ ಹಕ್ಕುಗಳ ರಕ್ಷಣೆಗಾಗಿ ಸಂಘಟನೆ ಬಲಿಷ್ಠವಾಗಬೇಕು ಮತ್ತು ಹೋರಾಟದ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ (ಸಿಐಟಿಯು) ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಎಸ್. ಸುನಂದ ಹೇಳಿದರು. ನಗರದ ಕನ್ನಡ ಭವನದಲ್ಲಿ ಮಂಗಳವಾರ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ವಿಭಾಗವಾರು ಸಂಘಟನಾ ಕಾರ್ಯಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಅಂಗನವಾಡಿ ನೌಕರರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಸಂಘಟನೆ ಇನ್ನಷ್ಟು ಸದೃಢಗೊಳ್ಳಬೇಕು. ಸರ್ಕಾರದ ಮಟ್ಟದಲ್ಲಿ ನೌಕರರ ಬೇಡಿಕೆಗಳನ್ನು ಈಡೇರಿಸಿಕೊಳ್ಳಲು ಸಂಘಟಿತ ಹೋರಾಟವೇ ಪರಿಣಾಮಕಾರಿ ಮಾರ್ಗವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಲಬುರಗಿ, ರಾಯಚೂರು, ಬೀದರ್ ಹಾಗೂ ಯಾದಗಿರಿ ಜಿಲ್ಲೆಗಳ 21 ತಾಲೂಕುಗಳಿಂದ ಆಗಮಿಸಿದ್ದ ಸುಮಾರು 210 ಮಂದಿ ಮಹಿಳಾ ನಾಯಕಿಯರು ಮತ್ತು ಪದಾಧಿಕಾರಿಗಳು ಕಾರ್ಯಗಾರದಲ್ಲಿ ಭಾಗವಹಿಸಿ ಸಂಘಟನಾ ಬಲವರ್ಧನೆ, ಸದಸ್ಯತ್ವವೃದ್ಧಿ ಹಾಗೂ ನೌಕರರ ಹಕ್ಕುಗಳ ಕುರಿತಂತೆ ಚರ್ಚಿಸಿದರು.

ಕಾರ್ಯಕ್ರಮದಲ್ಲಿ ಸಂಘಟನೆಯ ರಾಜ್ಯ ಖಜಾಂಚಿ ಜಿ. ಕಮಲಾ, ರಾಜ್ಯ ಕಾರ್ಯಾಧ್ಯಕ್ಷೆ ಶಾಂತಾ ಘಂಟಿ, ರಾಜ್ಯ ಉಪಾಧ್ಯಕ್ಷೆಯರಾದ ಗೌರಮ್ಮ ಪಾಟೀಲ್, ಶ್ರೀದೇವಿ ಚುಡೆ, ಹೆಚ್. ಪದ್ಮ (ರಾಯಚೂರು), ಅನಿತಾ ಹಿರೇಮಠ (ಯಾದಗಿರಿ) ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪ್ರೊ.ಕೃಷ್ಣಪ್ಪ ಜಯಂತಿ ಆಚರಣೆ : ಬುದ್ಧಿಮಾಂದ್ಯ ಮಕ್ಕಳಿಗೆ ಹಾಲು, ಹಣ್ಣು, ಬ್ರೆಡ್ ವಿತರಣೆ



ಕಂಪ್ಲಿ,ಜೂ.10-

ಪಟ್ಟಣದ ಕೊಟ್ಟಾಲ್ ರಸ್ತೆಯ ತಹಶೀಲ್ದಾರ್ ಕಚೇರಿಯ ಎದುರು ಗಡೆಯಲ್ಲಿರುವ ಕಂಪಲಿರಾಯ ಬುದ್ಧಿಮಾಂದ್ಯ ವಿಶೇಷ ಮಕ್ಕಳ ಶಾಲೆಯಲ್ಲಿ ದಲಿತ ಸಂಘರ್ಷ ಸಮಿತಿಯ ಸಂಸ್ಥಾಪಕ ಪ್ರೊಫೆಸರ್ ಕೃಷ್ಣಪ್ಪ ಅವರ ಜನ್ಮದಿನದ ಅಂಗವಾಗಿ ತಾಲೂಕು ಸಂಚಾಲಕ ಹೆಚ್.ಗುಂಡಪ್ಪ ನೇತೃತ್ವದಲ್ಲಿ ಮಕ್ಕಳಿಗೆ ಹಾಲು, ಹಣ್ಣು, ಬ್ರೆಡ್ ಮಂಗಳವಾರ ವಿತರಿಸಲಾಯಿತು.

ದಲಿತ ಸಂಘರ್ಷ ಸಮಿತಿ (ಪ್ರೊ.ಕೃಷ್ಣಪ್ಪ ಸ್ಥಾಪಿತ)ಯ ಕಂಪ್ಲಿ ತಾಲೂಕು ಘಟಕದ ಸಂಚಾಲಕ ಗುಂಡಪ್ಪ ಮಾತನಾಡಿ, ಕ್ರಿ.ಶ 1970ರಲ್ಲಿ ಪ್ರೊಫೆಸರ್ ಕೃಷ್ಣಪ್ಪ ಅವರು ರಾಜ್ಯದಲ್ಲಿ ದಲಿತ, ಹಿಂದುಳಿದ ಮತ್ತು ಜನಸಾಮಾನ್ಯರಿಗೆ ಸರ್ಕಾರದ ಯೋಜನೆಗಳನ್ನು ನ್ಯಾಯಯುತವಾಗಿ ಒದಗಿಸಿಕೊಡುವ ನಿಟ್ಟಿನಲ್ಲಿ ದಲಿತ ಸಂಘರ್ಷ ಸಮಿತಿ ಸಂಘಟನೆಯನ್ನು ಹುಟ್ಟು ಹಾಕಿದರು. ಈ ಸಂಘಟನೆಯ ಮೂಲಕ ಅನೇಕ ಬಡ ಮತ್ತು ಮಧ್ಯಮ ವರ್ಗದ ಜನತೆಗೆ ಹೋರಾಟದ ಮುಖೇನ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟಿದ್ದಾರೆ. ಇವರ ನಿರಂತರ ಹೋರಾಟದಿಂದ ಸಂಘಟನೆಯು ದೊಡ್ಡ ಮಟ್ಟದಲ್ಲಿ ಬೆಳೆದಿದೆ. ಶಿಕ್ಷಣ, ಸಂಘಟನೆ, ಹೋರಾಟ ಎಂಬ ಮೂರು ಅಸ್ತ್ರಗಳೊಂದಿಗೆ ಸರ್ಕಾರದ ಮಟ್ಟದಲ್ಲಿ ಧ್ವನಿ ಎತ್ತಿ ಅನ್ಯಾಯದ ವಿರುದ್ಧ ಹೋರಾಡುವುದು ನಮ್ಮ ಕರ್ತವವಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಪದಾಧಿಕಾರಿಗಳ ಪರಿಶ್ರಮ ಅಗತ್ಯವಾಗಿದೆ ಎಂದು ಹೇಳಿದರು.

ಸಂಘಟನಾ ಸಂಚಾಲಕ ಹೆಚ್. ಮರಿಯಪ್ಪ ಸಣಾಪುರ ಮಾತನಾಡಿ, ರಾಜ್ಯದಲ್ಲಿ ನಡೆಯುತ್ತಿರುವ ಅನ್ಯಾಯದ ವಿರುದ್ಧ ಜನಸಾಮಾನ್ಯರಿಗೆ ನ್ಯಾಯಕೊಡಿಸುವ ನಿಟ್ಟಿನಲ್ಲಿ ಸಂಘಟನೆಯನ್ನು ಹುಟ್ಟು ಹಾಕಿದ್ದಾರೆ. ಈ ಸಂಘಟನೆ ರಾಜ್ಯಾದ್ಯಂತ ದೊಡ್ಡಮಟ್ಟದಲ್ಲಿ ಬೆಳೆಯುವ ಜೊತೆಗೆ ಜನರ ಸೇವೆಯನ್ನು ನಿರಂತರ ಮಾಡಿಕೊಂಡು ಬರುತ್ತಿದೆ. ಪ್ರೊಫೆಸರ್ ಕೃಷ್ಣಪ್ಪ ಅವರ ಆದರ್ಶ ವಿಚಾರಗಳನ್ನು ಮೈಗೂಡಿಸಿಕೊಂಡು ನಾಡಿನುದ್ದಕ್ಕೂ ಜನಪರ ಸೇವೆಗಳನ್ನು ಮಾಡಲಾಗುವುದು ಎಂದರು.

ಈ ಸಂದರ್ಭದಲ್ಲಿ ತಾಲೂಕು ಸಮಿತಿ ಸಲಹೆಗಾರ ಲಕ್ಷ್ಮಿಪತಿ, ಗ್ರಾಮ ಸಂಚಾಲಕರಾದ ಪರಶುರಾಮ, ಮುಖಂಡ ಹುಲುಗಪ್ಪ, ಚನ್ನಬಸವ, ರಾಮಲಿ, ಈರಣ್ಣ, ಯಲ್ಲಪ್ಪ, ಶಾಲೆಯ ಮುಖ್ಯಗುರು ಶಿಕ್ಷಕಿಯರಾದ ಕೆ.ರಾಧಾ, ಅನಿತಾ, ವಿಜಯಲಕ್ಷ್ಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

11 ರಂದು ಡಾಕ್ ಅದಾಲತ್: ಸಾರ್ವಜನಿಕರ ಕುಂದುಕೊರತೆ ಆಲಿಕೆಗೆ ಅವಕಾಶ

ಬಳ್ಳಾರಿ,ಜೂ.10- ಬಳ್ಳಾರಿ ಅಂಚೆ ವಿಭಾಗದ ವ್ಯಾಪ್ತಿ ಯಲ್ಲಿ ಬರುವ ಅಂಚೆ ಕಚೇರಿ ಗಳಿಗೆ ಸಂಬಧಿಸಿದ ಸಾರ್ವಜನಿಕರ ದೂರುಗಳು ಹಾಗೂ ಕುಂದುಕೊ ರತೆಗಳ ನಿವಾರಣೆಗಾಗಿ ಜೂನ್ 11 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕೋಟೆ ಪ್ರದೇಶದಲ್ಲಿರುವ ಅಂಚೆ ಅಧೀಕ್ಷಕರ ಕಾರ್ಯಾಲಯ ದಲ್ಲಿ ಡಾಕ್ ಅದಾಲತ್ (ಅಂಚೆ ಅದಾ ಲತ್) ಹಮ್ಮಿಕೊಳ್ಳಲಾಗಿದೆ.

ಅಂಚೆ ಇಲಾಖೆಯ ಸೇವೆಗಳಿಗೆ ಸಂಬಧಿಸಿದತೆ ಸಾರ್ವಜನಿಕರು ತಮ್ಮಲ್ಲಿರುವ ಕುಂದುಕೊರತೆಗಳು ಅಥವಾ ದೂರುಗಳನ್ನು ಲಿಖಿತ ರೂಪದಲ್ಲಿ ಸವಿಸ್ತಾರವಾಗಿ ಬರೆದು, ಜೂನ್ 10 ರ ಸಂಜೆ 04 ಗಂಟೆಯ ಒಳಗಾಗಿ ತಲುಪುವಂತೆ ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ಬಳ್ಳಾರಿ-583102 ಈ ವಿಳಾಸಕ್ಕೆ ಕಳುಹಿಸಿಕೊಡಬೇಕು. ಸಾರ್ವಜನಿಕರು ತಮ್ಮ ದೂರು ಗಳನ್ನು... ಇ-ಮೇಲ್ ವಿಳಾಸಕ್ಕೂ ಸಹ ಕಳುಹಿಸಬಹುದಾಗಿದೆ. ದೂರು ಸಲ್ಲಿಸಲು ಕೊನೆಯ ದಿನ ಜೂನ್ 10.ದೂರು ಸಲ್ಲಿಸಿದ ಅರ್ಜಿದಾರರು ಜೂನ್ 11 ರಂದು ನಡೆಯುವ ಡಾಕ್ ಅದಾಲತ್‌ನಲ್ಲಿ ಖುದ್ದಾಗಿ ಭಾಗವಹಿಸಿ ತಮ್ಮ ಸಮಸ್ಯೆಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು ಎಂದು ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ದೇಶದ ಪ್ರಗತಿಗೆ ವಿಶ್ವಾಸಾರ್ಹ ಅಂಕಿಅಶಗಳ ಕೊಡುಗೆ ಅಪಾರ: ಹರೀಶ್ವರನ್.ಕೆ

ಬಳ್ಳಾರಿ,ಜೂ.10

ಯಾವುದೇ ಸಮೀಕ್ಷೆಯ ಯಶಸ್ಸಿನಲ್ಲಿ ಪರಿಕಲ್ಪನೆಗಳು ಮತ್ತು ವ್ಯಾಖ್ಯಾನಗಳ ಏಕರೂಪದ ಅರಿವು ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ. ಇಂತಹ ಸಮೀಕ್ಷಾ ಸಾಧನಗಳನ್ನು ಸಮರ್ಪಕವಾಗಿ ಅರ್ಥಮಾಡಿಕೊಳ್ಳಲು ಪ್ರಾದೇಶಿಕ ತರಬೇತಿ ಶಿಬಿರಗಳು ಅತ್ಯುತ್ತಮ ವೇದಿಕೆಯಾಗಿವೆ. ರಾಷ್ಟ್ರೀಯ ಮಾದರಿ ಸಮೀಕ್ಷೆ ಸಂಸ್ಥೆಯು ದೇಶಕ್ಕೆ ವಿಶ್ವಾಸಾರ್ಹ ಅಂಕಿಅಂಶಗಳನ್ನು ಒದಗಿಸುವ ದೇಶದ ಅತಿದೊಡ್ಡ ಸಂಸ್ಥೆಗಳಲ್ಲಿ ಒಂದಾಗಿದೆ ಎಂದು ರಾಷ್ಟ್ರೀಯ ಸಂಖ್ಯಾ ಕಚೇರಿಯ ಪ್ರಾದೇಶಿಕ ಮುಖ್ಯಸ್ಥರು ಹಾಗೂ ನಿರ್ದೇಶಕ ಹರೀಶ್ವರನ್ ಕೆ. ಅವರು ಹೇಳಿದರು.

ಹುಬ್ಬಳ್ಳಿಯ ಭಾಗ್ಯಲಕ್ಷ್ಮಿ ನಗರದ ಎನ್‌ಎಸ್‌ಎಸ್‌ಒ ಭವನದಲ್ಲಿ ಹುಬ್ಬಳ್ಳಿ ಪ್ರಾದೇಶಿಕ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗಾಗಿ ಮಂಗಳವಾರ ಆಯೋಜಿಸಲಾಗಿದ್ದ ನಾಲ್ಕು ದಿನಗಳ ಪ್ರಾದೇಶಿಕ ತರಬೇತಿ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ಸರ್ಕಾರವು 1950ರಿಂದಲೇ



ವೈಜ್ಞಾನಿಕ ಮಾದರಿ ಆಯ್ಕೆ ವಿಧಾನಗಳನ್ನು ಬಳಸಿಕೊಂಡು ಸಾಮಾಜಿಕ-ಆರ್ಥಿಕ ಮಾಹಿತಿಯನ್ನು ಸಂಗ್ರಹಿಸಲು ರಾಷ್ಟ್ರೀಯ ಮಾದರಿ ಸಮೀಕ್ಷೆಗಳನ್ನು ನಡೆಸುತ್ತಾ ಬಂದಿದೆ. ಈ ಸರಣಿಯ ಮುಂದಿನ ಭಾಗವಾಗಿ ಎನ್‌ಎಸ್‌ಎಸ್ ನ 81ನೇ ಸುತ್ತಿನ ಸಮೀಕ್ಷೆಯು 2026ರ ಜುಲೈ 1ರಿಂದ ಆರಂಭವಾಗಲಿದೆ ಎಂದು ತಿಳಿಸಿದರು.

ಈ 81ನೇ ಸುತ್ತಿನ ಅಡಿಯಲ್ಲಿ ಮುಖ್ಯವಾಗಿ ಮೂರು ಪ್ರಮುಖ ಸಮೀಕ್ಷೆಗಳನ್ನು ಕೈಗೊಳ್ಳಲಾಗುತ್ತಿದೆ. ಕೃಷಿ ಕುಟುಂಬಗಳ ಸ್ಥಿತಿಗತಿ ಮೌಲ್ಯಮಾಪನ ಸಮೀಕ್ಷೆಯಲ್ಲಿ ಗ್ರಾಮೀಣ ಕುಟುಂಬಗಳ ಭೂಮಿ, ಸಕ್ರಿಯ ಹಿಡುವಳಿಗಳು, ಜಾನುವಾರುಗಳ ಮಾಲೀಕತ್ವ ಸೇರಿದಂತೆ ವಿವಿಧ ಸೂಚಕಗಳನ್ನು ಸೃಷ್ಟಿಸುವುದು ಹಾಗೂ ಕೃಷಿ ಕುಟುಂಬಗಳ ಸಾಮಾಜಿಕ-ಆರ್ಥಿಕ ಸ್ಥಿತಿಯ ಅಂದಾಜುಗಳನ್ನು ಒದಗಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

ಅಖಿಲ ಭಾರತ ಸಾಲ ಮತ್ತು ಹೂಡಿಕೆ ಸಮೀಕ್ಷೆಯಲ್ಲಿ ಭಾರತದ ಕುಟುಂಬಗಳ ಆಸ್ತಿಗಳು, ಬಂಡವಾಳ ನಿರ್ಮಾಣ ಹಾಗೂ ಸಾಲಬಾಧ್ಯತೆಗಳಿಗೆ ಸಂಬಧಿಸಿದ ಸಮಗ್ರ ಪರಿಮಾಣಾತ್ಮಕ ಮಾಹಿತಿಯನ್ನು ಇದು ಸಂಗ್ರಹಿಸಲಿದೆ. (ಗಮನಾರ್ಹ ಸಂಗತಿಯೆದರೆ, ಈ ಎರಡು ವಿಷಯಗಳ ಕುರಿತ ಹಿಂದಿನ ಸಮೀಕ್ಷೆಗಳನ್ನು 2019ರ ಜನವರಿಯಿಂದ ಡಿಸೆಂಬರ್ ಅವಧಿಯಲ್ಲಿ ಎನ್‌ಎಸ್ ಎಸ್ ನ 77ನೇ ಸುತ್ತಿನಲ್ಲಿ ನಡೆಸಲಾಗಿತ್ತು).

ವಲಸೆ ಸಮೀಕ್ಷೆಯಲ್ಲಿ 2026ರ ಜುಲೈನಿಂದ 2027ರ ಜೂನ್‌ವರೆಗೆ ಈ ಸಮೀಕ್ಷೆ ನಡೆಯಲಿದ್ದು, ಕುಟುಂಬ ಸದಸ್ಯರ ವಲಸೆ ವೈಶಿಷ್ಟ್ಯಗಳು ಹಾಗೂ ಕುಟುಂಬಗಳಿದ ಹೊರವಲಸೆ ಹೋದ ಸದಸ್ಯರ ಕುರಿತು ವಿವರವಾದ ಮಾಹಿತಿಯನ್ನು ಕಲೆಹಾಕಲಾಗುತ್ತದೆ ಎಂದು ಅವರು ವಿವರಿಸಿದರು.

ದೇಶದಾದ್ಯಂತ ತರಬೇತಿ ಪಡೆದ ಕ್ಷೇತ್ರಾಧಿಕಾರಿಗಳು ಈ ಮಾಹಿತಿ ಸಂಗ್ರಹ ಕಾರ್ಯದಲ್ಲಿ ತೊಡಗಿಕೊಳ್ಳಲಿದ್ದಾರೆ. ಈ ಸಮೀಕ್ಷೆಗಳು ರಾಷ್ಟ್ರೀಯ ಮಟ್ಟದಲ್ಲಿ ಅತ್ಯಂತ ಮಹತ್ವದ್ದಾಗಿದ್ದು, ಮಾಹಿತಿ ಸಂಗ್ರಹಣೆಗಾಗಿ ಮನೆಗಳಿಗೆ ಭೇಟಿ ನೀಡುವ ಅಧಿಕಾರಿಗಳಿಗೆ ಸಾರ್ವಜನಿಕರು ಸಂಪೂರ್ಣವಾಗಿ ಸಹಕರಿಸಬೇಕು. ಮಾಧ್ಯಮ ಪ್ರತಿನಿಧಿಗಳೂ ಸಹ ಈ ರಾಷ್ಟ್ರೀಯ ಕಾರ್ಯಕ್ಕೆ ಬೆಂಬಲ ನೀಡಬೇಕು ಎಂದು ವಿನಂತಿಸಿದರು. ಹುಬ್ಬಳ್ಳಿ ಎನ್‌ಎಸ್‌ಒ (ಎಫ್‌ಒಡಿ) ಸಹಾಯಕ ನಿರ್ದೇಶಕ ಪ್ರಮೋದ್ ವಿ. ಪಂಡಿತ್ ಅವರ ಸ್ವಾಗತಿಸಿದರು. ಉಪ ನಿರ್ದೇಶಕ ಮಾದೇವಪ್ಪ ಅವರು ವಂದಿಸಿದರು.

ಮನಸ್ಸಿನ ತುಡಿತ ಕಲೆಯ ಮೂಲಕ ತಿಳಿಸಬಹುದು: ಡಾ.ನಾಗೇಂದ್ರ, ಮಸೂತಿ



ಕಲಬುರಗಿ,ಜೂ.10-

ಕಲೆ ಎಂಬುದು ಮಾನವನ ಅಭಿವ್ಯಕ್ತಿಗೆ ಇರುವ ಒಳ್ಳೆಯ ಸಾಧನ. ಕಲೆಯ ಮೂಲಕ ಮನಸ್ಸಿನ ತುಡಿತವನ್ನು ಸಮಾಜಕ್ಕೆ ತಿಳಿಸಬಹುದಾಗಿದೆ ಎಂದು ಹಿರಿಯ ಸಾಹಿತಿ ಡಾ.ನಾಗೇಂದ್ರ, ಮಸೂತಿ ಅಭಿಪ್ರಾಯಪಟ್ಟರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಹಾಗೂ ಕ್ರಿಯಾಶೀಲ ಗೆಳೆಯರ ಬಳಗದ ವತಿಯಿಂದ ನಗರದ ಕನ್ನಡ ಭವನದ ಕಲಾ ಸೌಧದಲ್ಲಿ 47 ಜನ ಚಿತ್ರಕಲಾವಿದರಿಂದ ಎರಡು ದಿನಗಳ ಕಾಲ ಏರ್ಪಡಿಸಿರುವ ಚಿತ್ರಕಲಾ ಪ್ರದರ್ಶನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಕಲೆ ಮನುಷ್ಯನ ಬದುಕಿಗೆ ಪೂರಕವಾಗುವುದರ ಜೊತೆಗೆ ಸಮಗ್ರ ವ್ಯಕ್ತಿತ್ವ ವಿಕಸನಕ್ಕೆ ಅಗತ್ಯವಾಗಿದೆ. ಹಾಗಾಗಿ ಇಂಥ ಚಿತ್ರಕಲಾ ಪ್ರದರ್ಶನಗಳಿಗೆ ಇನ್ನಷ್ಟು ಅವಕಾಶಗಳು ದೊರಕಬೇಕಿದೆ. ಆಗ ಮತ್ತಷ್ಟು ಕಲಾವಿದರು ಬೆಳಕಿಗೆ ಬರಲು ಸಾಧ್ಯ. ಚಿತ್ರಕಲೆ ಮನುಷ್ಯನ ಕಲ್ಪನೆಯನ್ನು ವಿಸ್ತರಿಸುತ್ತದೆ ಎಂದು ಹೇಳಿದರು. ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ, ಚಿತ್ರಕಲಾ ಪ್ರದರ್ಶನಗಳು ಈ ಸಮಾಜದ ನಿಜವಾದ ಕನ್ನಡಿಯಾಗಿವೆ. ಕಲೆ ಸಮಾಜದ ಆಲೋಚನಾ ಲಹರಿಯನ್ನು ಬದಲಾಯಿಸುವ, ಸಾಂಸ್ಕೃತಿಕ ಮೌಲ್ಯಗಳನ್ನು ಬಿಂಬಿಸುವ ಮತ್ತು ನಾಡಿನ ಜನರಲ್ಲಿ ಸೃಜನಶೀಲತೆಯನ್ನು ಜಾಗೃತಗೊಳಿಸುವ ಪ್ರಬಲ ಮಾಧ್ಯಮವಾಗಿದೆ ಎಂದರು. ಕನ್ನಡ ಭೂಮಿ ಜಾಗೃತಿ ಸಮಿತಿ ಅಧ್ಯಕ್ಷ ಡಾ. ಲಿಂಗರಾಜ ಸಿರಗಾಪೂರ ಮಾತನಾಡಿ, ಚಿತ್ರಕಲಾವಿದರು ರಚಿಸುವ ಕಲಾಕೃತಿಗಳು ಪ್ರಕೃತಿಯ ಸೌಂದರ್ಯವನ್ನು ಜೀವಂತವಾಗಿ ರಿಸುವುದರ ಜೊತೆಗೆ ಮುಂದಿನ ಪೀಳಿಗೆಗೆ ನಮ್ಮ ಸಂಸ್ಕೃತಿಯನ್ನು ಪರಿಚಯಿಸುವ ಕಾರ್ಯವೂ ಮಾಡುತ್ತದೆ ಎಂದರು.

ನ್ಯಾಯವಾದಿ ಹುಲಿಗೆಪ್ಪಾ ಕನಕಗಿರಿ, ಜಿಲ್ಲಾ ಫೋಟೋಗ್ರಾರ್ಸ್ ಅಸೋಸಿಯಷನ್ ಅಧ್ಯಕ್ಷ ಬಸವರಾಜ ತೋಟದ, ಕಲಾ ಸೌಧ ಸಂಚಾಲಕ ಡಾ.ರೆಹಮಾನ್ ಪಟೇಲ್, ರವಿಕುಮಾರ ಶಹಾಪುರಕರ್ ಮಾತನಾಡಿದರು.

ಈ ವೇಳೆ ಪ್ರಮುಖರಾದ ಸೈಯ್ಯದ್ ನಜಿರುದ್ದಿನ್ ಮುತ್ತವಲ್ಲಿ, ಧರ್ಮರಾಜ ಜವಳಿ, ಗಣೇಶ ಚಿನ್ನಾಕಾರ, ರಾಜೇಂದ್ರ ಮಾಡಬೂಳ, ಮಹಮ್ಮದ್ ಅಯಾಝುದ್ದಿನ್ ಪಟೇಲ್, ಬಸವರಾಜ ಉಪ್ಪಿನ್, ರಾಜಶೇಖರ ಶಾಮಣ್ಣ, ಡಾ.ಎಸ್.ಎಂ. ನೀಲಾ, ಜ್ಯೋತಿ ಕೋಟನೂರ, ಶ್ವೇತಾ ಪಾಟೀಲ, ಅಮೃತಪ್ಪ ಅಣೂರ ಸೇರಿದಂತೆ ಹಲವರು ಉಪಸ್ಥಿತರಿದ್ದರು.



ಉಚಿತ ನೇತ್ರ, ತಪಾಸಣಾ ಶಿಬಿರ

ಅಫಜಲಪುರ,

ಪಟ್ಟಣದ ತಾಲೂಕು ಸರಕಾರಿ ಆಸ್ಪತ್ರೆಯಲ್ಲಿ ಕಲಬುರಗಿಯ ಬಸವೇಶ್ವರ ಆಸ್ಪತ್ರೆ ಹಾಗೂ ಅಫಜಲಪುರ ತಾಲೂಕು ಸರಕಾರಿ ಆಸ್ಪತ್ರೆಯ ಸಂಯುಕ್ತ ಆಶ್ರಯದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ನಡೆಯಿತು.

ಶಿಬಿರದಲ್ಲಿ ಕಣ್ಣಿನ ವಿವಿಧ ಸಮಸ್ಯೆಗಳ ಕುರಿತು ತಪಾಸಣೆ ನಡೆಸಲಾಗಿದ್ದು, ಒಟ್ಟು 115 ಮಂದಿ ಹೊರರೋಗಿಗಳ (ಒಪಿಡಿ) ತಪಾಸಣೆ ಮಾಡಲಾಯಿತು. ತಪಾಸಣೆಯ ವೇಳೆ ಕಣ್ಣಿನ ಪರೆ ಸಮಸ್ಯೆಯಿಂದ ಬಳಲುತ್ತಿದ್ದ 31 ಮಂದಿಯನ್ನು ಹೆಚ್ಚಿನ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ ಗಾಗಿ ಕಲಬುರಗಿಯ ಬಸವೇಶ್ವರ ಆಸ್ಪತ್ರೆಗೆ ಕಳುಹಿಸಲಾಯಿತು.

ಕಾರ್ಯಕ್ರಮದಲ್ಲಿ ಕಲಬುರಗಿಯ ಬಸವೇಶ್ವರ ಆಸ್ಪತ್ರೆಯ ನೇತ್ರ ತಜ್ಞರಾದ ಡಾ. ಪೂಜಾ, ನೇತ್ರಾಧಿಕಾರಿ ಡಾ. ಸುರೇಶ್ ಬಂಡಗಾರ್, ಡಾ. ವಿನೋದ ಸೇರಿದಂತೆ ಆಸ್ಪತ್ರೆಯ ಸಿಬ್ಬಂದಿ ಹಾಗೂ ಆರೋಗ್ಯ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಶಿಬಿರದ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಂಡು ಕಣ್ಣಿನ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ವೈದ್ಯರು ತಿಳಿಸಿದರು.

ಕೊಪ್ಪಳ : ಸುಟ್ಟ ಸ್ಥಿತಿಯಲ್ಲಿ ಅಪರಿಚಿತ ಮಹಿಳೆಯ ಮೃತದೇಹ ಪತ್ತೆ

ಕನಕಗಿರಿ,ಜೂ.10- ಪಟ್ಟಣದ ಐದನೇ ವಾರ್ಡಿನ ಮನೆಯ ಮೂರನೇ ಮಹಡಿಯಲ್ಲಿ ಅಪರಿಚಿತ ಮಹಿಳೆಯೊಬ್ಬರ ಮೃತದೇಹ ಸುಟ್ಟ ಸ್ಥಿತಿಯಲ್ಲಿ ಪತ್ತೆಯಾಗಿರುವ ಘಟನೆ ಸೋಮವಾರ ರಾತ್ರಿ 10:44ರ ಸುಮಾರಿಗೆ ನಡೆದಿದೆ.

ಮೃತ ಮಹಿಳೆಯ ಗುರುತು ಇನ್ನೂ ಪತ್ತೆಯಾಗಿಲ್ಲ. ಮಹಿಳೆ ಅಲ್ಲಿಗೆ ಹೇಗೆ ಬಂದರು ಎಂಬ ಬಗ್ಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ವಿಷಯ ತಿಳಿದ ಕೂಡಲೇ ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರಿಶೀಲನೆ ನಡೆಸಿ, ಇದು ಆತ್ಮಹತ್ಯೆಯೇ ಅಥವಾ ಕೊಲೆಯೇ ಎಂಬ ಬಗ್ಗೆ ತನಿಖೆ ಮುಂದುವರಿದಿದೆ.

ಮೃತ ಮಹಿಳೆಯ ಗುರುತು ಪತ್ತೆಗೆ ಸಾರ್ವಜನಿಕರ ಸಹಕಾರ ಕೋರಿದ್ದಾರೆ. ಮಾಹಿತಿ ಇದ್ದವರು ಕನಕಗಿರಿ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು.

ನಿಮ್ಮೂರು ಸುದ್ದಿ

ಸಂಪಾದಕೀಯ

ಮುಖ್ಯಮಂತ್ರಿಗೆ ಚೆಲ್ಲಾಟ ರೈತರಿಗೆ ಪ್ರಾಣ ಸಂಕಟ



ಸರ್ಕಾರವು ಕೃಷಿ ಮತ್ತು ರೈತರ ವಿಚಾರದಲ್ಲಿ ತೋರುತ್ತಿರುವ ಈ ಉದಾಸೀನತೆಯನ್ನು ತಕ್ಷಣವೇ ಕೈಬಿಡದಿದ್ದರೆ, ಮುಂಬರುವ ದಿನಗಳಲ್ಲಿ ರಾಜ್ಯವು ತೀವ್ರ ಆಹಾರ ಧಾನ್ಯಗಳ ಕೊರತೆ ಮತ್ತು ಗ್ರಾಮೀಣ ಆರ್ಥಿಕತೆಯ ಸಂಪೂರ್ಣ ಕುಸಿತವನ್ನು ಎದುರಿಸಬೇಕಾಗುತ್ತದೆ.

ಭಾರತ ಎಂದಿಗೂ ಕೃಷಿ ಪ್ರಧಾನ ರಾಷ್ಟ್ರ. ಭಾರತದ ಬಹುಸಂಖ್ಯಾತರ ಜೀವನಾಧಾರವೂ, ದೇಶದ ಆರ್ಥಿಕತೆಯ ಬುನಾದಿಯೂ ಕೃಷಿಯೇ ಆಗಿದೆ. ಭಾರತದ ಮೊದಲ ಪಂಚವಾರ್ಷಿಕ ಯೋಜನೆ ಮತ್ತು 1960ರ ದಶಕದ ಹಸಿರು ಕ್ರಾಂತಿ ಕೂಡ ಕೃಷಿ ಮತ್ತು ರೈತರನ್ನೇ ಆಧರಿಸಿತ್ತು. ಆರಂಭದಲ್ಲಿ ಕೃಷಿ ಮತ್ತು ರೈತರಿಗೆ ಸರ್ಕಾರಗಳಿಂದ ದೊರೆತ ನೆರವಿನಿಂದಾಗಿ ಭಾರತವು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬಿಯೂ ಆಯಿತು. ಆದ್ದರಿಂದಲೇ, ರೈತ ದೇಶದ ಬೆನ್ನೆಲುಬು ಎಂಬ ನುಡಿಗಟ್ಟು ಪ್ರಚಲಿತದಲ್ಲಿದೆ.

ಆದರೆ, ಈಗೇನಾಗುತ್ತಿದೆ? ಈ ನುಡಿಗಟ್ಟು ಕೇವಲ ಭಾಷಣಗಳಿಗೆ ಮತ್ತು ಚುನಾವಣೆಗಳ ಪ್ರಣಾಳಿಕೆಗಳಿಗೆ ಸೀಮಿತವಾಗುತ್ತಿದೆ. ಪ್ರಕೃತಿಯ ವಿಕೋಪ ಒಂದೆಡೆಯಾದರೆ, ಆಡಳಿತಶಾಹಿಯ ಉದಾಸೀನತೆ ಮತ್ತು ಅಧಿಕಾರಸ್ಥರ ಆದ್ಯತೆಗಳ ಪಲ್ಲಟ ಇನ್ನೊಂದೆಡೆ. ಈ ಎರಡರ ನಡುವೆ ರೈತರು ಸಿಲುಕಿದ್ದಾರೆ. ಇದಕ್ಕೆ ಕರ್ನಾಟಕದ ರೈತರು ಹೊರತಾಗಿಲ್ಲ. ಪ್ರಸ್ತುತ, ಕರ್ನಾಟಕದಲ್ಲಿ ಮಳೆಯ ಅಬ್ಬರ ತೀವ್ರವಾಗಿದೆ. ವಿಶೇಷವಾಗಿ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಭೀಕರ ಮಳೆಯಿಂದಾಗಿ ವ್ಯಾಪಕ ಬೆಳೆ ನಷ್ಟ ಸಂಭವಿಸಿದೆ. ಹವಾಮಾನ ವೈಪರೀತ್ಯವು ರೈತರ ಪಾಲಿಗೆ ದೊಡ್ಡ ಶಾಪವಾಗಿ ಪರಿಣಮಿಸಿದೆ.

ಉತ್ತರ ಕರ್ನಾಟಕದ ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ಯಾದಗಿರಿ ಹಾಗೂ ರಾಯಚೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ವಾಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮಳೆ ಸುರಿದಿದೆ. ಕೃಷಿ ಕ್ಷೇತ್ರವು ಜರ್ಜರಿತಗೊಂಡಿದೆ. ನದಿ, ಹಳ್ಳ-ಕೊಳ್ಳಗಳು ಉಕ್ಕಿ ಹರಿಯುತ್ತಿದ್ದು, ನೂರಾರು ಎಕರೆ ಕೃಷಿ ಭೂಮಿ ನೀರಿನಲ್ಲಿ ಮುಳುಗಡೆಯಾಗಿದೆ. ಕೈಗೆ ಬಂದ ತುತ್ತು ಬಾಯಿಗೆ ಬರಲಿಲ್ಲ ಎಂಬಂತೆ ರೈತರು ಬೆಳೆದಿದ್ದ ಸೋಯಾಬಿನ್, ಹತ್ತಿ, ಹೆಸರು, ತೊಗರಿ ಹಾಗೂ ಕಬ್ಬಿನ ಬೆಳೆಗಳು ಸಂಪೂರ್ಣವಾಗಿ ನಾಶವಾಗುತ್ತಿವೆ. ಬಿತ್ತನೆಗಾಗಿ ಸಾಲಸೋಲ ಮಾಡಿ ವ್ಯಯಿಸಿದ್ದ ಹಣವೆಲ್ಲವೂ ನೀರಿನಲ್ಲಿ ಹೋಮ ಮಾಡಿದಂತಾಗಿದೆ. ಉತ್ತರ ಕರ್ನಾಟಕ ರೈತರ ಆರ್ಥಿಕ ಭವಿಷ್ಯವೇ ಮುರಿದುಬಿದ್ದಿದೆ. ರೈತರು ಕಂಗಾಲಾಗಿದ್ದಾರೆ.

ಈ ಬಿರುಮಳೆಯ ಹೊಡೆತದಿಂದ ಬದುಕುಳಿದಿರುವ ಅಲ್ಪಸ್ವಲ್ಪ ಬೆಳೆಯನ್ನು ಉಳಿಸಿಕೊಳ್ಳಲು ರೈತರು ಹೆಣಗಾಡುತ್ತಿದ್ದಾರೆ. ಆದರೆ, ಬೆಳೆಯನ್ನು ಉಳಿಸಿಕೊಳ್ಳಲು ಅಗತ್ಯವಿರುವಷ್ಟು ರಸಗೊಬ್ಬರವೂ ಸಿಗದಂತಾಗಿದೆ. ರಾಜ್ಯದಲ್ಲಿ ರಸಗೊಬ್ಬರದ ಕೊರತೆಯೂ ರೈತರನ್ನು ಬಾಧಿಸುತ್ತಿದೆ. ಸಿದ್ದರಾಮಯ್ಯ ಸರ್ಕಾರದಲ್ಲಿ ಕೃಷಿ ಸಚಿವರಾಗಿದ್ದ ಚಲುವರಾಯಸ್ವಾಮಿ ಅವರೇ ಸ್ವತಃ ಅಧಿಕೃತವಾಗಿ ಒಪ್ಪಿಕೊಂಡಿರುವಂತೆ, ರಾಜ್ಯದಲ್ಲಿ ಸದ್ಯಕ್ಕೆ ಸುಮಾರು 38,000 ಟನ್ ರಸಗೊಬ್ಬರದ ಕೊರತೆ ಇದೆ. ಯೂರಿಯಾ, ಡಿಎಪಿ ಸೇರಿದಂತೆ ಪ್ರಮುಖ ರಸಗೊಬ್ಬರಗಳಿಗಾಗಿ ರೈತರು ಮುಂಜಾನೆಯಿಂದಲೇ ವಿವಿಧ ಸಹಕಾರ ಸಂಘಗಳ ಮುಂದೆ ಮತ್ತು ಕೃಷಿ ಕೇಂದ್ರಗಳ ಮುಂದೆ ಮಳೆ-ಬಿಸಿಲೆನ್ನದೆ ಸರತಿ ಸಾಲಿನಲ್ಲಿ ನಿಲ್ಲಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಹಲವೆಡೆ ಗೊಬ್ಬರಕ್ಕಾಗಿ ರೈತರು ಮತ್ತು ಅಧಿಕಾರಿಗಳ ನಡುವೆ ತೀವ್ರ ಜಟಾಪಟಿಗಳೂ ನಡೆದಿವೆ. ಪರಿಸ್ಥಿತಿ ಕೈಮೀರುತ್ತಿದೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿರುವುದರಿಂದ ರೈತರ ಮೇಲೆ ಕೇಂದ್ರ ಸರ್ಕಾರಕ್ಕೂ ಕರುಣೆಯಿಲ್ಲ. ರಾಜ್ಯದಲ್ಲಿ ಕೊರತೆ ಇರುವ ರಸಗೊಬ್ಬರ ಪೂರೈಕೆಗೆ ಮೋದಿ ಸರ್ಕಾರ ಮನಸ್ಸು ಮಾಡುತ್ತಿಲ್ಲ. ಬದಲಾಗಿ, ಅಗತ್ಯ ಇರುವಷ್ಟು ಹಂಚಿಕೆ ಮಾಡಿದ್ದೇವೆ ಎಂದು ಸಮಜಾಯಿಷಿ ನೀಡುತ್ತಿದೆ.

ಮಳೆ ಅಬ್ಬರ, ಬೆಳೆ ನಾಶ ಹಾಗೂ ರಸಗೊಬ್ಬರ ಕೊರತೆಯಿಂದ ರೈತರು ಸಂಕಷ್ಟದಲ್ಲಿದ್ದರೂ, ಸದ್ಯಕ್ಕೆ, ರಾಜ್ಯದಲ್ಲಿ ಕೃಷಿ ಸಚಿವರಿಲ್ಲ. ಕೃಷಿ ಖಾತೆ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರ ಬಳಿಯೇ ಉಳಿದಿದೆ. ಆದರೆ, ಶಿವಕುಮಾರ್ ನೇತೃತ್ವದ ಹೊಸ ಸರ್ಕಾರವು ಕೃಷಿ ಮತ್ತು ರೈತರ ಹಿತರಕ್ಷಣೆಯ ವಿಚಾರದಲ್ಲಿ ಗಂಭೀರ ನಿಲುವು ತಳೆಯುತ್ತಿಲ್ಲ. ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಡಿ.ಕೆ. ಶಿವಕುಮಾರ್, ತಕ್ಷಣವೇ ತುರ್ತು ಸಭೆಗಳನ್ನು ನಡೆಸಿ ರೈತರಿಗೆ ನೆರವಾಗುವ ಬದಲು, ರಾಜಕೀಯ ರ್ಯಾಲಿಗಳಲ್ಲಿ ಮಗ್ನರಾಗಿದ್ದಾರೆ. ವಿವಿಧ ದೇವಸ್ಥಾನಗಳಿಗೆ ಟೆಂಪಲ್ ರನ್ ಮಾಡುತ್ತಿದ್ದಾರೆ. ಜೊತೆಗೆ, ಮಾಜಿ ಮುಖ್ಯಮಂತ್ರಿಗಳ ಭೇಟಿಯ ನೆಪದಲ್ಲಿ ಸುತ್ತಾಟದಲ್ಲಿಯೇ ಕಾಲ ಕಳೆಯುತ್ತಿದ್ದಾರೆ.


ಯಥಾ ರಾಜ ತಥಾ ಮಂತ್ರಿ ಎಂಬಂತೆ ಡಿ.ಕೆ ಶಿವಕುಮಾರ್ ಅವರ ಸಂಪುಟ ಮಂತ್ರಿಗಳೂ ಅಸಮಾಧಾನದಿಂದ ಮುನಿಸಿಕೊಂಡಿದ್ದಾರೆ. ಖಾತೆ ಬದಲಾವಣೆಗಾಗಿ ಹಾತೊರೆಯುತ್ತಿದ್ದಾರೆ. ಹೊಸ ಸರ್ಕಾರ ರಚನೆಯಾದ ಬಳಿಕ ಸಂಪುಟ ಸಭೆಯೇ ನಡೆದಿಲ್ಲ. ತಮ್ಮ ಗೋಳುಗಳೇ ಮೇಲು ಎನ್ನುತ್ತಿರುವ ಸಚಿವರಿಗೆ ರೈತರ ಗೋಳು ಕಾಣುತ್ತಿಲ್ಲ.

ಕಾಂಗ್ರೆಸ್ ಅಧಿಕಾರಕ್ಕೆ ಬರುವ ಮುನ್ನ ತನ್ನ ಪ್ರಣಾಳಿಕೆಯಲ್ಲಿ ಕೃಷಿ ಉತ್ಪನ್ನಗಳಿಗೆ ಸೂಕ್ತ ಬೆಂಬಲ ಬೆಲೆ, ಬೆಳೆಗಳಿಗೆ ವಿಮಾ ಸೌಲಭ್ಯ ಒದಗಿಸುವ ಭರವಸೆ ನೀಡಿತ್ತು. ಈ ಭರವಸೆಗಳು ಇನ್ನೂ ಭರವಸೆಗಳಾಗಿಯೇ ಉಳಿದಿವೆ. ಒಂದು ವೇಳೆ, ಬೆಳೆಗಳಿಗೆ ವಿಮಾ ಸೌಲಭ್ಯಗಳು ಇದ್ದಿದ್ದರೆ, ಮಳೆಯಿಂದಾಗಿ ಬೆಳೆ ಕಳೆದುಕೊಂಡ ರೈತರಿಗೆ ಆರ್ಥಿಕ ನೆರವಾದರೂ ದೊರೆಯುತ್ತಿತ್ತು. ಅದೂ ಇಲ್ಲದಂತಾಗಿದೆ.

ಮಳೆಯಿಂದ ನಷ್ಟ ಅನುಭವಿಸಿದ ರೈತರಿಗೆ ಜಂಟಿ ಸಮೀಕ್ಷೆ ನಡೆಸಿ ಪರಿಹಾರ ವಿತರಿಸುವ ಪ್ರಕ್ರಿಯೆ ಆಮೆಗತಿಯಲ್ಲಿ ಸಾಗುತ್ತಿದೆ. ಹಿಂದಿನ ಕೃಷಿ ಸಚಿವರು ಕೇವಲ ಗೊಬ್ಬರದ ಕೊರತೆ ಇದೆ ಎಂದು ಹೇಳಿಕೆ ನೀಡಿ ಕೈತೊಳೆದುಕೊಂಡರೇ ಹೊರತು, ರೈತರಿಗೆ ನೆರವು ಮತ್ತು ಪರ್ಯಾಯ ವ್ಯವಸ್ಥೆ ಕಲ್ಪಿಸುವಲ್ಲಿ ಮನಸ್ಸು ಮಾಡಲಿಲ್ಲ.

ರಾಜ್ಯದ ಅರ್ಧದಷ್ಟು ಜನರ ಜೀವನಾಧಾರವಾಗಿರುವ ಕೃಷಿ ಕ್ಷೇತ್ರವು ಸರ್ಕಾರದ ಆದ್ಯತೆ ಆಗಿರಬೇಕು. ಆದರೆ, ರಾಜಕೀಯ ಮೇಲಾಟಗಳು, ದೇವಸ್ಥಾನ ಭೇಟಿಗಳು ಹಾಗೂ ಆಂತರಿಕ ಅಸಮಾಧಾನಗಳಲ್ಲಿ ಸರ್ಕಾರ ಮುಳುಗಿದೆ. ಸರ್ಕಾರವು ಕೃಷಿ ಮತ್ತು ರೈತರ ವಿಚಾರದಲ್ಲಿ ತೋರುತ್ತಿರುವ ಈ ಉದಾಸೀನತೆಯನ್ನು ತಕ್ಷಣವೇ ಕೈಬಿಡದಿದ್ದರೆ, ಮುಂಬರುವ ದಿನಗಳಲ್ಲಿ ರಾಜ್ಯವು ತೀವ್ರ ಆಹಾರ ಧಾನ್ಯಗಳ ಕೊರತೆ ಮತ್ತು ಗ್ರಾಮೀಣ ಆರ್ಥಿಕತೆಯ ಸಂಪೂರ್ಣ ಕುಸಿತವನ್ನು ಎದುರಿಸಬೇಕಾಗುತ್ತದೆ.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ರಾಜಕೀಯ ಸುತ್ತಾಟಗಳನ್ನು ಹಾಗೂ ಸಚಿವರು ತಮ್ಮ ಮುನಿಸುಗಳನ್ನು ಬದಿಗಿಟ್ಟು, ರಾಜ್ಯದಲ್ಲಿ 38,000 ಟನ್ ಟನ್ ರಸಗೊಬ್ಬರದ ಕೊರತೆ ನೀಗಿಸಲು ಕೇಂದ್ರ ಸರ್ಕಾರದೊಂದಿಗೆ ಸಮಾಲೋಚನೆ ನಡೆಸಬೇಕಿದೆ. ಲಕ್ಷಾಂತರ ರೈತ ಕುಟುಂಬಗಳ ಬವಣೆಯನ್ನು ಆಲಿಸಿ, ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕಿದೆ. ಉತ್ತರ ಕರ್ನಾಟಕದ ನೆರೆ ಪೀಡಿತ ಪ್ರದೇಶಗಳಿಗೆ ಸಚಿವರ, ಶಾಸಕರ, ಅಧಿಕಾರಿಗಳ, ತಜ್ಞರ ತಂಡವನ್ನು ಕಳುಹಿಸಿ, ನಷ್ಟದ ನಿಖರ ಅಂದಾಜು ಮಾಡಿ ತಕ್ಷಣ ಪರಿಹಾರ ಧನ ಬಿಡುಗಡೆ ಮಾಡಬೇಕಿದೆ.



ಇಂದು ಮಸ್ಕಿ ಕರ್ನಾಟಕ ಪಬ್ಲಿಕ್ ಸ್ಕೂಲ್ ನಲ್ಲಿ ಸಮರ ಸಿಂಹ, ನಾಡಸೇನಾನಿ, ಹೋರಾಟದ ಸ್ಫೂರ್ತಿ, ಚಳವಳಿ ರತ್ನ, ನನ್ನ ಪ್ರೀತಿಯ ಗುರುಗಳಾದ ಕರ್ನಾಟಕ ರಕ್ಷಣಾ ವೇದಿಕೆ ರಾಜ್ಯಾಧ್ಯಕ್ಷರಾದ ಅಣ್ಣ ಟಿ.ಎ. ನಾರಾಯಣಗೌಡರಿಗೆ 60ನೇ ಹುಟ್ಟು ಹಬ್ಬವನ್ನು . ಕರ್ನಾಟಕ ಪಬ್ಲಿಕ್ ಸ್ಕೂಲ್ ಪಿಡಬ್ಲ್ಯೂಡಿ ಕ್ಯಾಂಪ್ ಮಸ್ಕಿ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ನೋಟ್ ಬುಕ್ ವಿತರಣೆ ಮಾಡುವ ಮೂಲಕ ಹುಟ್ಟು ಹಬ್ಬವನ್ನು ಆಚರಣೆ ಮಾಡುವುದಕ್ಕೆ ದುರಗರಾಜ್ ವಟಗಲ್ ತಾಲೂಕ ಅಧ್ಯಕ್ಷರು ಮಸ್ಕಿ ಈ ಕಾರ್ಯಕ್ರಮಕ್ಕೆ ಮಸ್ಕಿ ತಾಲೂಕಿನ ಎಲ್ಲಾ ತಾಲೂಕ ಪದಾಧಿಕಾರಿಗಳಾದ ಬಸವರಾಜ್ ಕೊಠಾರಿ ನೂರು ಮೊಹಮ್ಮದ್ ಮುದಿಯಪ್ಪ ಜಗಲಿ ಸುರೇಶ್ ಕಾಟಗಲ್ ರಾಘು ಶಂಕರನಗರಕ್ಯಾಂಪ್ ದುರ್ಗಪ್ಪ ಬಸಾಪುರ್ ಬಸವರಾಜ್ ಗುಗಿ ಸಾಗರ್ ಮುರಾರಿ ಮಲ್ಲು ಬಾಬು ಹೋಬಳಿ ಘಟಕದ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಸದಸ್ಯರು ಕಾರ್ಯಕರ್ತರು ಹಾಗೂ ಭಾಗವಹಿಸಿದ್ದರು.

ಶೈಕ್ಷಣಿಕ ವರ್ಷ ಆರಂಭ: ಶಾಲಾ ಪರಿಕರಗಳ ದರದಲ್ಲಿ ಭಾರೀ ಏರಿಕೆ, ಪಾಲಕರ ಜೇಬಿಗೆ ಕತ್ತರಿ

ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಣ ಕ್ಷೇತ್ರವು ದುಬಾರಿಯ ಬಲೆಗೆ ಸಿಲುಕುತ್ತಿರುವುದು ಆತಂಕಕಾರಿ ಬೆಳವಣಿಗೆ. ಶಿಕ್ಷಣ ಎಲ್ಲರಿಗೂ ಸುಲಭವಾಗಿ ಲಭ್ಯವಾಗಬೇಕಾದರೆ ಸರ್ಕಾರ, ತಯಾರಕರು, ಶಾಲಾ ಆಡಳಿತ ಮಂಡಳಿಗಳು ಹಾಗೂ ಸಮಾಜ ಒಟ್ಟಾಗಿ ಪರಿಹಾರ ಕಂಡುಕೊಳ್ಳಬೇಕಾಗಿದೆ. ಇಲ್ಲದಿದ್ದರೆ ಮುಂದಿನ ವರ್ಷಗಳಲ್ಲಿ ಶಿಕ್ಷಣದ ವೆಚ್ಚ ಮತ್ತಷ್ಟು ಏರಿಕೆಯಾಗುವ ಭೀತಿ ಎದುರಾಗಿದೆ.

ರಾಜ್ಯಾದ್ಯಂತ ಶಾಲೆಗಳು ಪುನರಾರಂಭಗೊಂಡಿದ್ದು, ಶಾಲಾ ಆವರಣಗಳು ಮಕ್ಕಳ ಕಲರವದಿಂದ ಕಂಗೊಳಿಸುತ್ತಿವೆ. ಆದರೆ ಮತ್ತೊಂದೆಡೆ ಹೊಸ ಶೈಕ್ಷಣಿಕ ವರ್ಷದ ಆರಂಭವು ಪೋಷಕರ ಆರ್ಥಿಕತೆಗೆ ಭಾರೀ ಹೊಡೆತ ನೀಡಿದೆ. ಶಾಲಾ ಶುಲ್ಕ, ಪುಸ್ತಕಗಳು, ನೋಟ್‌ಬುಕ್‌ಗಳು, ಸಮವಸ್ತ್ರಗಳು, ಶಾಲಾ ಬ್ಯಾಗ್‌ಗಳು, ಸಾರಿಗೆ ವೆಚ್ಚ ಸೇರಿದಂತೆ ಪ್ರತಿಯೊಂದು ಅಗತ್ಯ ವಸ್ತುವಿನ ಬೆಲೆ ಏರಿಕೆಯಿಂದಾಗಿ ಶಿಕ್ಷಣ ವೆಚ್ಚ ಕಳೆದ ಕೆಲವು ವರ್ಷಗಳಿಗಿಂತ ಹೆಚ್ಚಾಗಿದೆ.

ಕಳೆದ ಶೈಕ್ಷಣಿಕ ವರ್ಷದಲ್ಲಿ ಒಂದು ಮಗುವಿಗೆ ಶಾಲೆ ಆರಂಭದಲ್ಲಿ ಅಗತ್ಯ ಪರಿಕರಗಳನ್ನು ಕೊಡಿಸಲು ತಗುಲುವ ವೆಚ್ಚ 4 ಸಾವಿರದಿಂದ 6 ಸಾವಿರ ರೂಪಾಯಿಗಳ ಒಳಗಡೆ ಆಗುತ್ತಿತ್ತು, ಈಗ ಅದೇ ವೆಚ್ಚ 7 ಸಾವಿರದಿಂದ 10 ಸಾವಿರ ರೂಪಾಯಿವರೆಗೆ ಏರಿಕೆಯಾಗಿದೆ ಎಂದು ಪೋಷಕರು ಅಳಲು ತೋಡಿಕೊಳ್ಳುತ್ತಿದ್ದಾರೆ. ಖಾಸಗಿ ಶಾಲೆಗಳಲ್ಲಿ ಓದುತ್ತಿರುವ ಮಕ್ಕಳ ಪಾಲಕರಿಗೆ ಈ ಹೊರೆಯ ಪ್ರಮಾಣ ಇನ್ನೂ ಹೆಚ್ಚಾಗಿದೆ.

ಶಾಲಾ ಬ್ಯಾಗ್, ನೀರಿನ ಬಾಟಲಿ, ಲಂಚ್ ಬಾಕ್ಸ್, ಶ್ಯೂ, ಸಾಕ್ಸ್, ಪುಸ್ತಕಗಳು ಹಾಗೂ ಬರವಣಿಗೆ ಸಾಮಗ್ರಿಗಳ ಖರೀದಿಗೆ ಸಾವಿರಾರು ರೂಪಾಯಿ ಖರ್ಚಾಗುತ್ತಿದೆ. ಅದರ ಜತೆಗೆ ಶಾಲಾ ವಾಹನ ಅಥವಾ ಆಟೊ ಬಾಡಿಗೆ ಕೂಡ ಹೆಚ್ಚಿರುವುದು ಮಧ್ಯಮ ವರ್ಗದ ಕುಟುಂಬಗಳಿಗೆ ಹೆಚ್ಚುವರಿ ಒತ್ತಡ ತಂದಿದೆ.

ಬೆಲೆ ಏರಿಕೆಯನ್ನು ಎದುರಿಸಲು ಕೆಲವು ಕಂಪನಿಗಳು ಹೊಸ ತಂತ್ರ ಅನುಸರಿಸುತ್ತಿವೆ. ಹಿಂದೆ 100 ಪುಟಗಳಿದ್ದ ನೋಟ್‌ಬುಕ್‌ಗಳು ಈಗ 88 ಪುಟಗಳಿಗೆ, 200 ಪುಟಗಳ ಪುಸ್ತಕಗಳು 176 ಪುಟಗಳಿಗೆ ಇಳಿಕೆಯಾಗಿವೆ. ದರ ಮಾತ್ರ ಬಹುತೇಕ ಅದೇ ಮಟ್ಟದಲ್ಲಿ ಉಳಿದಿದೆ. ಆರ್ಥಿಕ ತಜ್ಞರ ಪ್ರಕಾರ, ಇದು ಶ್ರಿಂಕ್‌ಫ್ಲೇಷನ್ () ಎಂಬ ಪ್ರಕ್ರಿಯೆ. ಅಂದರೆ ವಸ್ತುವಿನ ಪ್ರಮಾಣ ಕಡಿಮೆ ಮಾಡಿ, ಬೆಲೆಯನ್ನು ಯಥಾಸ್ಥಿತಿಯಲ್ಲಿ ಉಳಿಸುವ ವಿಧಾನ. ಇದರಿಂದ ಗ್ರಾಹಕರಿಗೆ ಬೆಲೆ ಏರಿಕೆಯ ಹೊರೆ ಪರೋಕ್ಷವಾಗಿ ಬೀಳುತ್ತಿರುತ್ತದೆ.

ಶಿಕ್ಷಣ ಪರಿಕರಗಳ ಬೆಲೆ ಏರಿಕೆಗೆ ಪ್ರಮುಖ ಕಾರಣ ಕಾಗದದ ಬೆಲೆ ಏರಿಕೆಯಾಗಿರುವುದು. ಕಚ್ಚಾ ವಸ್ತುಗಳ ಕೊರತೆ, ಉತ್ಪಾದನಾ ವೆಚ್ಚ ಹೆಚ್ಚಳ ಹಾಗೂ ಸಾಗಾಣಿಕೆ ದರ ಏರಿಕೆಯ ಪರಿಣಾಮವಾಗಿ ಕಾಗದದ ಬೆಲೆ ನಿರಂತರವಾಗಿ ಹೆಚ್ಚುತ್ತಿದೆ. ಮುದ್ರಣ ವೆಚ್ಚ, ಶಾಯಿ ಬೆಲೆ, ವಿದ್ಯುತ್ ಶುಲ್ಕ ಮತ್ತು ಕಾರ್ಮಿಕ ವೆಚ್ಚವೂ ಏರಿಕೆಯಾಗಿರುವುದರಿಂದ ಪ್ರಕಾಶಕರು ಹಾಗೂ



ತಯಾರಕರು ಹೆಚ್ಚಿನ ದರ ವಿಧಿಸುವುದು ಅನಿವಾರ್ಯವಾಗಿದೆ ಎಂಬುದು ವ್ಯಾಪಾರಸ್ಥರ ವಾದ.

ಪೆಟ್ರೋಲ್ ಮತ್ತು ಡೀಸೆಲ್ ದರ ಏರಿಕೆ ಕೇವಲ ವಾಹನ ಮಾಲೀಕರಿಗೆ ಮಾತ್ರವಲ್ಲ, ಶಿಕ್ಷಣ ಕ್ಷೇತ್ರಕ್ಕೂ ಪರಿಣಾಮ ಬೀರಿದೆ. ರಾಜ್ಯದ ವಿವಿಧ ಭಾಗಗಳಿಗೆ ಪುಸ್ತಕ ಮತ್ತು ಶಾಲಾ ಪರಿಕರಗಳನ್ನು ಸಾಗಿಸಲು ಹೆಚ್ಚಿನ ವೆಚ್ಚ ತಗುಲುತ್ತಿದೆ. ಈ ಹೆಚ್ಚುವರಿ ವೆಚ್ಚವನ್ನು ಅಂತಿಮವಾಗಿ ಗ್ರಾಹಕರೇ ಭರಿಸಬೇಕಾಗುತ್ತಿದೆ.

ಶಾಲಾ ಬಸ್‌ಗಳು ಹಾಗೂ ಆಟೋರಿಕ್ಷಾಗಳ ಬಾಡಿಗೆ ದರದಲ್ಲೂ ಶೇ.10ರಿಂದ 20ರಷ್ಟು ಏರಿಕೆ ಕಂಡುಬಂದಿದೆ. ನಗರ ಪ್ರದೇಶಗಳಲ್ಲಿ ಮಕ್ಕಳನ್ನು ಶಾಲೆಗೆ ಕರೆದೊಯ್ಯುವ ವೆಚ್ಚ ತಿಂಗಳಿಗೆ 500ರಿಂದ 1000 ರೂಪಾಯಿವರೆಗೆ ಹೆಚ್ಚಾಗಿದೆ ಎಂದು ಪೋಷಕರು ಹೇಳುತ್ತಾರೆ.

ಯಲ್ಲಾಪುರದ ರಾಜೇಶ ಪೂಜಾರ ಮಾತನಾಡಿ, ''ದೂರದ ಊರುಗಳಿಗೆ ಹೋಗಿ ಪಠ್ಯ, ಪುಸ್ತಕಗಳನ್ನು ತರುವುದು ಕಷ್ಟದ ಕೆಲಸ. ಈಗಿನ ಬೆಲೆ ಏರಿಕೆಯಿಂದಾಗಿ ಮಕ್ಕಳ ಓದಿನ ಖರ್ಚು ಕಳೆದ ವರ್ಷಕ್ಕಿಂತ ಅಂದಾಜು ಶೇ.20-30ರಷ್ಟು ಜಾಸ್ತಿಯಾಗಿದೆ. ಇಂಧನ ದರ ಏರಿಕೆಯಿಂದಾಗಿ ಆಟೊ ಬಾಡಿಗೆಯೂ ದುಬಾರಿಯಾಗಿದ್ದು, ನಮ್ಮಂತಹ ಮಧ್ಯಮ ವರ್ಗದ ಪೋಷಕರಿಗೆ ಇದು ದೊಡ್ಡ ಹೊರೆಯಾಗಿ ಪರಿಣಮಿಸಿದೆ'' ಎಂದು ಬೇಸರ ವ್ಯಕ್ತಪಡಿಸಿದರು.

ಮಂಜುಳಾ ನಾಯ್ಕ(ಪೋಷಕರು, ಬನವಾಸಿ) ಮಾತನಾಡಿ, ''ಶಾಲೆ ಆರಂಭಕ್ಕೆ ಮೊದಲೇ ಪುಸ್ತಕಗಳ ಪಟ್ಟಿ ಕೈಸೇರುತ್ತದೆ. ಆದರೆ, ಮಾರುಕಟ್ಟೆಯಲ್ಲಿ ನೋಟ್‌ಬುಕ್‌ಗಳ ಪುಟಗಳನ್ನು ಕಡಿಮೆ ಮಾಡಿ ಬೆಲೆ ಹೆಚ್ಚಿಸಿರುವುದು ಸರಿಯಾದ ಕ್ರಮವಲ್ಲ. ಸರ್ಕಾರ ಈ ಬಗ್ಗೆ ಗಮನಹರಿಸಿ ಶೈಕ್ಷಣಿಕ ಪರಿಕರಗಳ ಮೇಲೆ ಹೇರಿರುವ ತೆರಿಗೆಯನ್ನು ಕಡಿಮೆ ಮಾಡಬೇಕು ಅಥವಾ ದರ ನಿಯಂತ್ರಣಕ್ಕೆ ಕ್ರಮ ಕೈಗೊಳ್ಳಬೇಕು'' ಎಂದರು.

ನವೀನ(ಸ್ಟೇಷನರಿ ಅಂಗಡಿಯವರು, ಶಿರಸಿ) ಮಾತನಾಡಿ, ''ಶಿರಸಿಯಂತಹ ಮಲೆನಾಡು ಭಾಗದಲ್ಲಿ ಸಾಗಾಣಿಕೆ ವೆಚ್ಚವೇ ದೊಡ್ಡ ಸವಾಲು. ಹುಬ್ಬಳ್ಳಿ ಅಥವಾ ಬೆಂಗಳೂರು ಕಡೆಯಿಂದ ಸರಕುಗಳನ್ನು ತರಿಸಲು ಈಗ ಡೀಸೆಲ್ ದರ ಏರಿಕೆಯಿಂದಾಗಿ ಲಾರಿ ಬಾಡಿಗೆ ಹೆಚ್ಚಾಗಿದೆ. ಈ ಹೆಚ್ಚಿನ ಸಾಗಾಣಿಕೆ ವೆಚ್ಚವನ್ನು ನಾವು ಗ್ರಾಹಕರಿಗೆ ವಿಧಿಸಬೇಕಾದ ಅನಿವಾರ್ಯತೆ ಎದುರಾಗಿದೆ. ಇದು ನಮಗೂ ಬೇಸರ ತಂದಿದೆ. ಆದರೆ ವಿಧಿಯಿಲ್ಲ, ಅನಿವಾರ್ಯ'' ಎಂದರು.

ಬಟ್ಟೆ, ದಾರ, ರಬ್ಬರ್ ಹಾಗೂ ಪ್ಲಾಸ್ಟಿಕ್ ಉತ್ಪನ್ನಗಳ ದರ ಹೆಚ್ಚಿರುವುದರಿಂದ ಶಾಲಾ ಸಮವಸ್ತ್ರ ಮತ್ತು ಶ್ಯೂಗಳನ್ನು ಸರ್ಕಾರಿ ಶಾಲೆಗಳಲ್ಲಿ ಉಚಿತವಾಗಿ ನೀಡಿದರೂ ಕೂಡ ಉಳಿದ ಪರಿಕರಗಳು ಬೆಲೆ ಗಣನೀಯವಾಗಿ ಏರಿಕೆಯಾಗಿದೆ. ಕೆಲ ಖಾಸಗಿ ಶಾಲೆಗಳು ನಿರ್ದಿಷ್ಟ ಅಂಗಡಿಗಳಿಂದಲೇ ಸಮವಸ್ತ್ರ ಖರೀದಿಸುವಂತೆ ಸೂಚಿಸುತ್ತಿರುವುದರಿಂದ ಪೋಷಕರಿಗೆ ಆಯ್ಕೆಯ ಅವಕಾಶ ಕಡಿಮೆಯಾಗಿದೆ.

ಜಿಲ್ಲೆಯ ನಗರ ಪ್ರದೇಶಗಳಿಗಿಂತ ಗ್ರಾಮೀಣ ಭಾಗದ ಕುಟುಂಬಗಳು ಹೆಚ್ಚು ಸಂಕಷ್ಟ ಅನುಭವಿಸುತ್ತಿವೆ. ಕೃಷಿ ಆದಾಯದ ಅನಿಶ್ಚಿತತೆ ಹಾಗೂ ಜೀವನಾವಶ್ಯಕ ವಸ್ತುಗಳ ಬೆಲೆ ಏರಿಕೆಯಿಂದಾಗಿ ಅನೇಕ ಕುಟುಂಬಗಳು ಮಕ್ಕಳ ಶಿಕ್ಷಣ ವೆಚ್ಚ ಭರಿಸಲು ಪರದಾಡುತ್ತಿವೆ. ಕೆಲವೆಡೆ ಪಾಲಕರು ಹಳೆಯ ಬ್ಯಾಗ್, ಪುಸ್ತಕ ಹಾಗೂ ಸಮವಸ್ತ್ರಗಳನ್ನು ಮರುಬಳಕೆ ಮಾಡಿಕೊಳ್ಳುವ ಮೂಲಕ ಖರ್ಚು ಕಡಿಮೆ ಮಾಡಲು ಪ್ರಯತ್ನಿಸುತ್ತಿದ್ದಾರೆ.

''ಕಾಗದ ಮತ್ತು ಮುದ್ರಣ ವೆಚ್ಚ ಹೆಚ್ಚಿರುವುದರಿಂದ ತಯಾರಕರು ಹಳೆಯ ದರದಲ್ಲಿ ಸರಕು ಪೂರೈಸುತ್ತಿಲ್ಲ. ಬೇಡಿಕೆಗೆ ಅನುಗುಣವಾಗಿ ಸರಕು ಸಿಗುತ್ತಿಲ್ಲ. ಇದರಿಂದ ಗ್ರಾಹಕರು ಹೆಚ್ಚಿನ ದರ ಕೊಟ್ಟು ಖರೀದಿಸುವ ಪರಿಸ್ಥಿತಿ ನಿರ್ಮಾಣವಾಗಿದೆ'' ಎನ್ನುತ್ತಾರೆ ಸ್ಟೇಷನರಿ ಅಂಗಡಿ ಮಾಲೀಕರು.

ಕಾಗದ ಮತ್ತು ಇಂಧನ ದರಗಳಲ್ಲಿ ಇಳಿಕೆ ಕಾಣದಿದ್ದರೆ ಮುಂದಿನ ತಿಂಗಳುಗಳಲ್ಲಿ ಶಿಕ್ಷಣ ಪರಿಕರಗಳ ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಹೀಗಾಗಿ ಶಾಲಾರಂಭದ ಸಂಭ್ರಮದ ನಡುವೆ ದುಬಾರಿಯ ಬಿಸಿ ಪೋಷಕರಿಗೆ ದೊಡ್ಡ ಸವಾಲಾಗಿ ಪರಿಣಮಿಸಿದೆ.

ಮಕ್ಕಳ ಭವಿಷ್ಯ ರೂಪಿಸುವ ಶಿಕ್ಷಣ ಕ್ಷೇತ್ರವು ದುಬಾರಿಯ ಬಲೆಗೆ ಸಿಲುಕುತ್ತಿರುವುದು ಆತಂಕಕಾರಿ ಬೆಳವಣಿಗೆ. ಶಿಕ್ಷಣ ಎಲ್ಲರಿಗೂ ಸುಲಭವಾಗಿ ಲಭ್ಯವಾಗಬೇಕಾದರೆ ಸರ್ಕಾರ, ತಯಾರಕರು, ಶಾಲಾ ಆಡಳಿತ ಮಂಡಳಿಗಳು ಹಾಗೂ ಸಮಾಜ ಒಟ್ಟಾಗಿ ಪರಿಹಾರ ಕಂಡುಕೊಳ್ಳಬೇಕಾಗಿದೆ. ಇಲ್ಲದಿದ್ದರೆ ಮುಂದಿನ ವರ್ಷಗಳಲ್ಲಿ ಶಿಕ್ಷಣದ ವೆಚ್ಚ ಮತ್ತಷ್ಟು ಏರಿಕೆಯಾಗುವ ಭೀತಿ ಎದುರಾಗಿದೆ.

ಖಾಸಗಿ ಬಸ್ ದರ ಏರಿಕೆ: ಮಾಲೀಕರ ಸಂಕಷ್ಟವೋ, ಸಾರ್ವಜನಿಕರ ಮೇಲಿನ ಹೊರೆಯೋ?

ಕರ್ನಾಟಕ ರಾಜ್ಯ ಖಾಸಗಿ ಮಜಲು ಬಸ್ ಮಾಲಕರ ಒಕ್ಕೂಟವು ಜೂನ್ 9ರಿಂದ ಶೇ.3ರಿಂದ 8ರ ವರೆಗೆ ದರ ಪರಿಷ್ಕರಣೆ ಜಾರಿಗೆ ತರುವುದಾಗಿ ಘೋಷಿಸಿದ್ದು, ಇದರ ಪರ-ವಿರೋಧದ ಚರ್ಚೆಗಳು ಸಾರ್ವಜನಿಕ ವಲಯದಲ್ಲಿ ನಡೆಯುತ್ತಿವೆ.

ಒಂದೆಡೆ ಬಸ್ ಮಾಲೀಕರು ತಮ್ಮ ಆರ್ಥಿಕ ಸಂಕಷ್ಟಗಳನ್ನು ಮುಂದಿಟ್ಟು ದರ ಏರಿಕೆ ಅನಿವಾರ್ಯ ಎಂದು ವಾದಿಸುತ್ತಿದ್ದರೆ, ಮತ್ತೊಂದೆಡೆ ಜನಸಾಮಾನ್ಯರು ಮತ್ತು ಹೋರಾಟಗಾರರು ಈ ಹೆಚ್ಚುವರಿ ಭಾರವನ್ನು ಜನರ ಮೇಲೆ ಹೇರಬಾರದು ಎಂದು ಆಗ್ರಹಿಸುತ್ತಿದ್ದಾರೆ.

ಖಾಸಗಿ ಬಸ್ ಮಾಲೀಕರ ಪ್ರಕಾರ ಕಳೆದ ಕೆಲವು ವರ್ಷಗಳಲ್ಲಿ ಡೀಸೆಲ್ ಬೆಲೆ ಗಣನೀಯವಾಗಿ ಏರಿಕೆಯಾಗಿದೆ. ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳ ನಿರಂತರ ದರ ಪರಿಷ್ಕರಣೆಯಿಂದ ಒಟ್ಟಾರೆ ಲೀಟರ್‌ಗೆ ಸುಮಾರು 11 ರೂಪಾಯಿಗಳಷ್ಟು ಹೆಚ್ಚುವರಿ ವೆಚ್ಚ ಉಂಟಾಗಿದೆ ಎಂದು ಹೇಳುತ್ತಾರೆ.

''ಡೀಸೆಲ್ ಮಾತ್ರವಲ್ಲದೆ ವಾಹನಗಳ ಬಿಡಿಭಾಗಗಳು, ಟೈರ್ ಹಾಗೂ ರಿಸೋಲಿಂಗ್ ವೆಚ್ಚ, ವಿಮೆ, ಟೋಲ್ ಶುಲ್ಕ, ನೌಕರರ ವೇತನ ಹಾಗೂ ವಿವಿಧ ತೆರಿಗೆಗಳ ದರಗಳೂ ಹೆಚ್ಚಾಗಿವೆ. ಪ್ರತಿಯೊಂದು ಬಸ್‌ಗೆ ದಿನಕ್ಕೆ ಹೆಚ್ಚುವರಿಯಾಗಿ 700ರಿಂದ 1000 ರೂಪಾಯಿವರೆಗೆ ಡೀಸೆಲ್ ವೆಚ್ಚ ಬರುತ್ತಿದ್ದು, ಹಾಲಿ ದರದಲ್ಲಿ ಸೇವೆ ಮುಂದುವರಿಸುವುದು ಕಷ್ಟಕರವಾಗಿದೆ'' ಎಂಬುದು ಅವರ ವಾದ.

''ಕೊರೊನಾ ಬಳಿಕ ಖಾಸಗಿ ಸಾರಿಗೆ ಕ್ಷೇತ್ರ ಇನ್ನೂ ಸಂಪೂರ್ಣ ಚೇತರಿಸಿಕೊಂಡಿಲ್ಲ, ಎಂಬುದು ಬಸ್ ಮಾಲೀಕರ ಮತ್ತೊಂದು ಪ್ರಮುಖ ವಾದ. ರಾಜ್ಯದಲ್ಲಿ ಸುಮಾರು 6000 ಖಾಸಗಿ ಮಜಲು ಬಸ್‌ಗಳಿದ್ದರೂ, ಪ್ರಸ್ತುತ ಕೇವಲ 5300ರಷ್ಟು ಬಸ್‌ಗಳು ಮಾತ್ರ ಕಾರ್ಯನಿರ್ವಹಿಸುತ್ತಿವೆ, ಹೊಸ ಬಸ್‌ಗಳನ್ನು ಖರೀದಿಸುವ ಪರಿಸ್ಥಿತಿ ಇಲ್ಲದ ಕಾರಣ ಹಳೆಯ ಬಸ್‌ಗಳನ್ನೇ ದುರಸ್ತಿ ಮಾಡಿ ಓಡಿಸಲಾಗುತ್ತಿದೆ. ಆದಾಯ ಮತ್ತು ವೆಚ್ಚದ ನಡುವೆ ಸಮತೋಲನ ಸಾಧಿಸಲು ಸಾಧ್ಯವಾಗದ ಕಾರಣ ದರ ಏರಿಕೆ ಅನಿವಾರ್ಯವಾಗಿದೆ'' ಎಂದು ಬಸ್ ಮಾಲೀಕರ ಸಂಘ ಸ್ಪಷ್ಟಪಡಿಸಿದೆ.

ಈ ಕುರಿತು ಮಾಧ್ಯಮದೊಂದಿಗೆ ಮಾತನಾಡಿದ ಕರ್ನಾಟಕ ರಾಜ್ಯ ಖಾಸಗಿ ಮಜಲು ಬಸ್ ಮಾಲಕರ ಒಕ್ಕೂಟದ ಅಧ್ಯಕ್ಷ ಕುಯಿಲ್ಲಾಡಿ ಸುರೇಶ್ ನಾಯಕ್, ''ಕಳೆದ ಒಂದು ವರ್ಷದಲ್ಲಿ ಡೀಸೆಲ್ ದರದಲ್ಲಿ ಗಣನೀಯ ಏರಿಕೆಯಾಗಿದ್ದು, ರಾಜ್ಯ ಸರ್ಕಾರವೂ ಹಿಂದೆ ಪ್ರತಿ ಲೀಟರ್‌ಗೆ ₹3 ಹೆಚ್ಚಳ ಮಾಡಿತ್ತು. ಇದರೊಂದಿಗೆ ವಾಹನಗಳ ಬಿಡಿಭಾಗಗಳು, ಟೈರ್ ಹಾಗೂ ಟೈರ್ ರಿಸೋಲಿಂಗ್ ವೆಚ್ಚ, ಟೋಲ್ ಶುಲ್ಕ, ನೌಕರರ ವೇತನ, ವಿಮೆ ಹಾಗೂ ವಿವಿಧ ತೆರಿಗೆಗಳ ದರಗಳಲ್ಲೂ ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಟಿಕೆಟ್ ದರ ಪರಿಷ್ಕರಿಸುವ ಅನಿವಾರ್ಯತೆ ಎದುರಾಗಿದೆ'' ಎಂದು ಹೇಳಿದರು.

''ರಾಜ್ಯದ ಖಾಸಗಿ ಸಾರಿಗೆ ವ್ಯವಸ್ಥೆ ಆರ್ಥಿಕ ಸಂಕಷ್ಟವನ್ನು ಎದುರಿಸುತ್ತಿದ್ದು, ದಿನನಿತ್ಯದ ನಿರ್ವಹಣಾ ವೆಚ್ಚಗಳನ್ನು ಭರಿಸುವುದು ಕಷ್ಟಕರವಾಗಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ಸರ್ಕಾರದ ಅಧಿಸೂಚನೆಯ ಪ್ರಕಾರ ವಿಧಿಸಲು ಅವಕಾಶವಿರುವ ಸೆಸ್ ಅನ್ನು ಜಾರಿಗೆ ತಂದು, ಹಾಲಿ ದರಗಳಿಗೆ ಶೇ. 3ರಿಂದ 8ರ ವರೆಗೆ ಹೆಚ್ಚಳ ಮಾಡಲಾಗಿದೆ ಎಂದು ತಿಳಿಸಿದರು. ರಾಜ್ಯಾದ್ಯಂತ ಸುಮಾರು 6,000 ಖಾಸಗಿ ಬಸ್‌ಗಳು ಕಾರ್ಯನಿರ್ವಹಿಸುತ್ತಿದ್ದರೆ, ಕೋವಿಡ್ ಬಳಿಕ ಸುಮಾರು 5,300 ಹಗಲು ವೇಳೆಯ ಖಾಸಗಿ ಮಜಲು ಬಸ್‌ಗಳು ಮಾತ್ರ ಸಂಚರಿಸುತ್ತಿವೆ. ರಾತ್ರಿ ಸಂಚರಿಸುವ ಬಸ್‌ಗಳಿಗೆ ಈ ದರ ಪರಿಷ್ಕರಣೆ ಅನ್ವಯಿಸುವುದಿಲ್ಲ. ಶಾಲಾ ವಿದ್ಯಾರ್ಥಿಗಳಿಗೆ ಈಗಾಗಲೇ ದೊರೆಯುತ್ತಿರುವ ರಿಯಾಯಿತಿಗಳು ಮುಂದುವರಿಯಲಿವೆ'' ಎಂದರು.

''ಡೀಸೆಲ್ ದರದಲ್ಲಿ ₹2 ಅಥವಾ ₹3 ಏರಿಕೆಯಾದಾಗ ಬಸ್ ದರ ಹೆಚ್ಚಿಸಿರಲಿಲ್ಲ. ಆದರೆ ಈಗ ಒಟ್ಟಾರೆ ಸುಮಾರು ₹11ರಷ್ಟು ಏರಿಕೆಯಾಗಿದ್ದು, ಒಂದು ಬಸ್‌ಗೆ ಪ್ರತಿದಿನ ₹700ರಿಂದ ₹1,000ರವರೆಗೆ ಹೆಚ್ಚುವರಿ ಡೀಸೆಲ್ ವೆಚ್ಚವಾಗುತ್ತಿದೆ. ಪ್ರಸ್ತುತ ವಿಧಿಸಿರುವ ಸೆಸ್‌ನಲ್ಲಿ ಕೇವಲ ಡೀಸೆಲ್ ವೆಚ್ಚವನ್ನಷ್ಟೇ ಪರಿಗಣಿಸಲಾಗಿದ್ದು, ಟೈರ್, ಆಯಿಲ್ ಸೇರಿದಂತೆ ಇತರೆ ವೆಚ್ಚಗಳನ್ನು ಸೇರಿಸಿಲ್ಲ'' ಎಂದು ಸುರೇಶ್ ನಾಯಕ್ ಸ್ಪಷ್ಟಪಡಿಸಿದರು.

''ಹೊಸ ದರದ ಪ್ರಕಾರ ಉಡುಪಿ-ಮಂಗಳೂರು ಮಾರ್ಗದ ಟಿಕೆಟ್ ದರ ₹95ರಿಂದ ₹100ಕ್ಕೆ, ಉಡುಪಿ-ಕುಂದಾಪುರ ದರ ₹60ರಿಂದ ₹63ಕ್ಕೆ, ಉಡುಪಿ-ಮಣಿಪಾಲ ದರ ₹12ರಿಂದ ₹13ಕ್ಕೆ, ಉಡುಪಿ-ಕಾರ್ಕಳ ದರ ₹58ರಿಂದ ₹60ಕ್ಕೆ ಹಾಗೂ ಕುಂದಾಪುರ-ಮಂಗಳೂರು ದರ ₹145ರಿಂದ ₹153ಕ್ಕೆ ಏರಿಕೆಯಾಗಲಿದೆ'' ಎಂದು ಅವರು ಮಾಹಿತಿ ನೀಡಿದರು.

ಇನ್ನೊಂದೆಡೆ ಈ ನಿರ್ಧಾರವನ್ನು ವಿರೋಧಿಸುವವರು, ಈಗಾಗಲೇ ಖಾಸಗಿ ಬಸ್‌ಗಳು ಅನೇಕ ಮಾರ್ಗಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್‌ಗಳಿಗಿಂತ ಹೆಚ್ಚಿನ ದರ ವಸೂಲಿ ಮಾಡುತ್ತಿವೆ ಎಂದು ಆರೋಪಿಸುತ್ತಿದ್ದಾರೆ. ಕೊರೊನಾ ಅವಧಿಯಲ್ಲಿ ಜಾರಿಗೊಂಡಿದ್ದ ಹೆಚ್ಚುವರಿ ದರವನ್ನು ಸಂಪೂರ್ಣವಾಗಿ ಹಿಂಪಡೆಯದೇ ಇರುವಾಗ ಮತ್ತೊಮ್ಮೆ ದರ ಏರಿಕೆ ಮಾಡುವುದು ನ್ಯಾಯಸಮ್ಮತವಲ್ಲ ಎಂದು ಸಾಮಾಜಿಕ ಹೋರಾಟಗಾರರು ವಾದಿಸುತ್ತಿದ್ದಾರೆ. ಡೀಸೆಲ್ ಬೆಲೆ ಏರಿಕೆಯ ಸಂಪೂರ್ಣ ಹೊರೆ ಪ್ರಯಾಣಿಕರ ಮೇಲೆ ವರ್ಗಾಯಿಸುವ ಬದಲು ಸರ್ಕಾರದ ಮೇಲೆ ಒತ್ತಡ ಹೇರಿ ತೆರಿಗೆ ಕಡಿತಕ್ಕೆ ಒತ್ತಾಯಿಸಬೇಕೆಂಬುದು ಅವರ ವಾದ.

ಈ ಕುರಿತು ಮಾತನಾಡಿದ ಸಿಪಿಐಎಂ ಮುಖಂಡ ಚಂದ್ರಶೇಖರ್, ''ಖಾಸಗಿ ಬಸ್ ದರ ಏರಿಕೆ ನಿರ್ಧಾರವು ಸಾಮಾನ್ಯ ಜನರ ಮೇಲೆ ಮತ್ತೊಂದು ಆರ್ಥಿಕ ಹೊರೆ ಹೊರಿಸುವಂತಾಗಿದೆ. ಈಗಾಗಲೇ ಅನೇಕ ಮಾರ್ಗಗಳಲ್ಲಿ ಖಾಸಗಿ ಬಸ್‌ಗಳು ಕೆಎಸ್‌ಆರ್‌ಟಿಸಿ ದರಕ್ಕಿಂತ ಹೆಚ್ಚಿನ ಶುಲ್ಕ ವಸೂಲಿ ಮಾಡುತ್ತಿದ್ದು, ಕೋವಿಡ್ ಅವಧಿಯಲ್ಲಿ ಹೆಚ್ಚಿಸಲಾದ ದರಗಳನ್ನು ಸಂಪೂರ್ಣವಾಗಿ ಕಡಿಮೆ ಮಾಡದಿರುವುದು ಪ್ರಯಾಣಿಕರಿಗೆ ಹೊರೆಯಾಗಿ ಪರಿಣಮಿಸಿದೆ'' ಎಂದು ಅವರು ತಿಳಿಸಿದ್ದಾರೆ.

''ಡೀಸೆಲ್ ಬೆಲೆ ಏರಿಕೆಯನ್ನು ಕಾರಣವನ್ನಾಗಿ ಮಾಡಿ ಸಾರಿಗೆ ವೆಚ್ಚದ ಭಾರವನ್ನು ನೇರವಾಗಿ ಪ್ರಯಾಣಿಕರ ಮೇಲೆ ವರ್ಗಾಯಿಸುವುದು ಸರಿಯಲ್ಲ. ಈಗಾಗಲೇ ಅಗತ್ಯ ವಸ್ತುಗಳ ಬೆಲೆ ಏರಿಕೆ ಸೇರಿದಂತೆ ಹಲವು ಸಂಕಷ್ಟಗಳಿಂದ ಜನರು ನರಳುತ್ತಿರುವ ಸಂದರ್ಭದಲ್ಲಿ ದರ ಹೆಚ್ಚಳವು ಮತ್ತಷ್ಟು ತೊಂದರೆ ಉಂಟುಮಾಡಲಿದೆ. ಖಾಸಗಿ ಬಸ್ ಮಾಲಕರು ಕೂಡ ದರ ಏರಿಕೆ ಮಾಡುವ ಬದಲು ಸರ್ಕಾರಗಳ ಮೇಲೆ ಒತ್ತಡ ಹೇರಿ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಬೇಕು'' ಎಂದು ಅವರು ಒತ್ತಾಯಿಸಿದ್ದಾರೆ.

''ಉಡುಪಿ ಜಿಲ್ಲೆಯಲ್ಲಿ ಬಹುತೇಕ ಮಾರ್ಗಗಳಲ್ಲಿ ಖಾಸಗಿ ಬಸ್‌ಗಳೇ ಸಂಚಾರ ನಡೆಸುತ್ತಿರುವ ಕಾರಣ, ಕೆಎಸ್‌ಆರ್‌ಟಿಸಿಯ ಉಚಿತ ಪ್ರಯಾಣ ಯೋಜನೆಗಳ ಲಾಭ ಎಲ್ಲರಿಗೂ ತಲುಪುತ್ತಿಲ್ಲ. ಆದ್ದರಿಂದ ಜಿಲ್ಲೆಯ ವಿವಿಧ ಮಾರ್ಗಗಳಲ್ಲಿ ಹೆಚ್ಚಿನ ಕೆಎಸ್‌ಆರ್‌ಟಿಸಿ ಬಸ್‌ಗಳನ್ನು ನಿಯೋಜಿಸುವ ಮೂಲಕ ಸಾಮಾನ್ಯ ಜನರಿಗೆ ಅನುಕೂಲ ಕಲ್ಪಿಸಬೇಕು ಎಂದು ಅವರು ಹೇಳಿದ್ದಾರೆ. ಮುಂದಿನ ದಿನಗಳಲ್ಲಿ ಜಿಲ್ಲೆಯ ಎಲ್ಲಾ ಪ್ರಮುಖ ಮಾರ್ಗಗಳಲ್ಲಿ ಕೆಎಸ್‌ಆರ್‌ಟಿಸಿ ಬಸ್ ಸೇವೆ ವಿಸ್ತರಣೆಗಾಗಿ ಸಿಪಿಐಎಂ ಹೋರಾಟ ನಡೆಸಲಿದೆ'' ಎಂದು ತಿಳಿಸಿದ್ದಾರೆ.

ಪ್ರಯಾಣಿಕ ಸಂದೀಪ್, ಮಾತನಾಡಿ''ಈಗಾಗಲೇ ದಿನನಿತ್ಯದ ಜೀವನ ವೆಚ್ಚಗಳು ಹೆಚ್ಚಾಗಿರುವ ಸಂದರ್ಭದಲ್ಲಿ ಖಾಸಗಿ ಬಸ್ ದರವನ್ನು ಮತ್ತೆ ಏರಿಕೆ ಮಾಡಿರುವುದು ವಿದ್ಯಾರ್ಥಿಗಳು, ಕಾರ್ಮಿಕರು ಹಾಗೂ ಪ್ರತಿದಿನ ಬಸ್ ಅವಲಂಬಿಸಿರುವ ಜನರು ಇದರಿಂದ ಸಂಕಷ್ಟ ಅನುಭವಿಸಬೇಕಾಗುತ್ತದೆ. ದರ ಏರಿಕೆ ಮಾಡುವ ಮೊದಲು ಪ್ರಯಾಣಿಕರ ಹಿತಾಸಕ್ತಿಯನ್ನು ಪರಿಗಣಿಸಿ, ಸರ್ಕಾರ ಮತ್ತು ಬಸ್ ಮಾಲಕರು ಸಮತೋಲನದ ನಿರ್ಧಾರ ಕೈಗೊಳ್ಳಬೇಕಿತ್ತು'' ಎಂದು ಅಭಿಪ್ರಾಯ ಪಟ್ಟರು.

''ಕರೋನಾ ಅವಧಿಯಲ್ಲಿ ಹೆಚ್ಚಿಸಲಾಗಿದ್ದ ಬಸ್ ಪ್ರಯಾಣ ದರವನ್ನು ಪರಿಸ್ಥಿತಿ ಸಹಜಗೊಂಡ ಬಳಿಕವೂ ಕಡಿಮೆ ಮಾಡಲಾಗಿರಲಿಲ್ಲ. ಇದೀಗ ಮತ್ತೊಮ್ಮೆ ದರ ಏರಿಕೆ ಮಾಡಿರುವುದು ಮತ್ತು ಅದಕ್ಕೆ ಜಿಲ್ಲಾಡಳಿತ ಮೌನ ಬೆಂಬಲ ನೀಡುತ್ತಿರುವುದು ಸಾರ್ವಜನಿಕರ ಹಿತಕ್ಕೆ ವಿರುದ್ಧವಾದ ಕ್ರಮವಾಗಿದ್ದು, ಇದು ಜನರಿಗೆ ಮಾಡುವ ದ್ರೋಹವಾಗಿದೆ'' ಎಂದು ಸಿಪಿಐ(ಎಂ) ಉಡುಪಿ ಜಿಲ್ಲಾ ಸಮಿತಿ ಪ್ರಕಟಣೆಯಲ್ಲಿ ತಿಳಿಸಿದೆ.

''ಜಿಲ್ಲಾ ಸಮಿತಿಯು ಬೆಲೆ ಏರಿಕೆ ಖಂಡಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಬೆಳಿಗ್ಗೆ 11 ಗಂಟೆಗೆ ಸಿಪಿಐ(ಎಂ) ಪ್ರತಿಭಟನಾ ಧರಣಿ ಹಮ್ಮಿಕೊಂಡಿದ್ದು, ಸಾರ್ವಜನಿಕರು ಭಾಗವಹಿಸಬೇಕು'' ಎಂದು ಕರೆ ನೀಡಿದೆ.

ಸಿಐಟಿಯು ಉಡುಪಿ ವಲಯ ಸಮಿತಿ ಸಂಚಾಲಕ ಕವಿರಾಜ್. ಎಸ್.ಕಾಂಚನ್ ಈ ಕುರಿತು ಮಾತನಾಡಿ, ಪೆಟ್ರೋಲ್, ಡೀಸೆಲ್ ದರ ಕೇಂದ್ರ ಸರ್ಕಾರ ಹೆಚ್ಚಳ ಮಾಡಿರುವುದು . ದರ ಇಳಿಕೆ ಮಾಡಲು ಬಸ್ ಮಾಲಿಕರು ಕೇಂದ್ರ ಸರಕಾರದ ಮೇಲೆ ಒತ್ತಡ ಹೇರಬೇಕು.ಹೋರಾಟದಿಂದ ಟೋಲ್ ತೆಗೆದು ಹಾಕಿರುತ್ತಾರೆ ಅದರೆ ಬಸ್ ದರ ಇಳಿಕೆ ಮಾಡಿಲ್ಲ .ಈಗ ಮತ್ತೆ ದರ ಏರಿಕೆ ಮಾಡಿ ಕಾರ್ಮಿಕರನ್ನು, ವಿದ್ಯಾರ್ಥಿಗಳನ್ನು ಸಂಕಷ್ಟಕ್ಕೆ ಈಡು ಮಾಡಿದ್ದಾರೆ. ವಿದ್ಯಾರ್ಥಿಗಳ, ಕಾರ್ಮಿಕರ, ಸಾರ್ವಜನಿಕರ ಹಿತದೃಷ್ಟಿಯಿಂದ ಎಲ್ಲಾ ಗ್ರಾಮಗಳಿಗೆ ಸರಕಾರಿ ಬಸ್ ಹಾಕಬೇಕು. ಎಂದು ಸಿಐಟಿಯು ಒತ್ತಾಯಿಸುತ್ತದೆ. ಇಲ್ಲವಾದಲ್ಲಿ ಮುಂದಿನ ದಿನದಲ್ಲಿ ಕಾರ್ಮಿಕರು, ವಿದ್ಯಾರ್ಥಿಗಳು ,ಸಾರ್ವಜನಿಕರು ಸೇರಿ ತೀವ್ರ ವಾದ ಪ್ರತಿಭಟನೆ ನಡೆಸಬೇಕಾಗುತ್ತದೆ'' ಎಂದು ಎಚ್ಚರಿಕೆ ನೀಡಿದ್ದಾರೆ.

''ಆದಾಗ್ಯೂ ಖಾಸಗಿ ಬಸ್ ಮಾಲೀಕರು ವಿದ್ಯಾರ್ಥಿಗಳಿಗೆ ನೀಡುತ್ತಿರುವ ರಿಯಾಯಿತಿಯಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ತಿಳಿಸಿದ್ದಾರೆ. ಮಹಿಳೆಯರ ಉಚಿತ ಪ್ರಯಾಣಕ್ಕೆ ಸಂಬಂಧಿಸಿದ ಶಕ್ತಿ ಯೋಜನೆಯನ್ನು ಖಾಸಗಿ ಬಸ್‌ಗಳಿಗೂ ವಿಸ್ತರಿಸಲು ಅವರು ಈ ಹಿಂದೆ ಸರ್ಕಾರದ ಮುಂದೆ ಪ್ರಸ್ತಾವನೆ ಇಟ್ಟಿದ್ದರೂ ಅದು ಅಂಗೀಕಾರವಾಗಿಲ್ಲ. ಸರ್ಕಾರ ಮರುಪಾವತಿ ಮಾಡುವ ವ್ಯವಸ್ಥೆ ಇದ್ದರೆ ವಿದ್ಯಾರ್ಥಿಗಳು ಹಾಗೂ ಮಹಿಳೆಯರಿಗೆ ಉಚಿತ ಅಥವಾ ರಿಯಾಯಿತಿ ಪ್ರಯಾಣ ನೀಡಲು ತಾವು ಸಿದ್ಧ'' ಎಂದು ಮಾಲೀಕರು ಹೇಳುತ್ತಿದ್ದಾರೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR